ರಾಯಚೂರು, ಕೊಪ್ಪಳ, ಯಾದಗಿರಿ, ಕಲಬುರ್ಗಿ, ಬಳ್ಳಾರಿ, ವಿಜಯನಗರ, ಬೀದರ, ಏಕಕಾಲಕ್ಕೆ ಪ್ರಕಟಣೆ
Raichur, Koppal, Yadagiri, Kalburgi, Ballary, Vijaya Nagar, Bidar

# ಕನ್ನಡ ಮಾತೃ ಭೂಮಿ

ರಾಯಚೂರಿನಿಂದ ರಾಜ್ಯದವರೆಗೆ

ಕನ್ನಡದಿನ ಪತ್ರಿಕೆ

ಸಂಪಾದಕರು : ಶ್ಯಾಮ್ ಸುಂದರ್.ಎಲ್
EDITOR : SHYAM SUNDER L

KANNADA MATHRUBHOOMI
KANNADA DAILY PAPER

mathrubhoomircr@gmail.com
Call : 9886635117

ಸಂಪುಟ : Volume : 03 ಸಂಚಿಕೆ Issuse : 133 | ದಿನಾಂಕ : 22-06-2026 ಸೋಮವಾರ Date : 22-06-2026 Monday | RNI: Karkan/2023/89199 Post Reg No.: RCR/L/RNP/98/2025-2027 | ರಾಯಚೂರು Raichur | ಪುಟ : Pages : 04 | ರೂ Rs. 2

## ವಿದ್ಯಾರ್ಥಿಗಳಿಗೆ ಉಚಿತ ಬಸ್ ಪಾಸ್ ವಿತರಣೆ: ಬಸ್ ಪಾಸ್ ಬಳಕೆ ಮಾಡಿಕೊಂಡು ಉನ್ನತ ಶಿಕ್ಷಣ ಪಡೆಯಿರಿ- ದದ್ದಲ್ ಬಸನಗೌಡ

**ರಾಯಚೂರು,ಜೂ.22**-ಬಡ ಮಕ್ಕಳಿಗೆ ಆರ್ಥಿಕ ಹೊರೆಯನ್ನು ತಪ್ಪಿದಲು ಉಚಿತ ಬಸ್ ಪಾಸ್ ಯೋಜನೆಯನ್ನು ಜಾರಿಗೊಳಿಸಿದ್ದು ವಿದ್ಯಾರ್ಥಿಗಳು ಯೋಜನೆ ಸದುಪಯೋಗ ಪಡೆದುಕೊಳ್ಳಬೇಕು ಎಂದು ಗ್ರಾಮೀಣ ಶಾಸಕ ದದ್ದಲ್ ಬಸನಗೌಡ ಹೇಳಿದರು.

ನಗರದ ಕೇಂದ್ರ ಬಸ್ ನಿಲ್ದಾಣದಲ್ಲಿ ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆ ಯಿಂದ ಹಮ್ಮಿಕೊಂಡ ವಿದ್ಯಾರ್ಥಿಗಳಿಗೆ ಉಚಿತ ಬಸ್ ವಿತರಿಸಿ ಮಾತನಾಡಿದರು.ಮುಖ್ಯಮಂತ್ರಿ ಡಿ.ಕೆ.ಶಿವುಕುಮಾರ ಅವರು ರಾಜ್ಯದ ಎಲ್ಲಾ ವಿದ್ಯಾರ್ಥಿಗಳಿಗೆ ಉಚಿತ ಬಸ್ ವಿತರಣೆ ಮಾಡುವ

➘ 4

## ಇಂದಿನ ದಿನಮಾನಗಳಲ್ಲಿ ಕಲಾವಿದರನ್ನು ಗುರುತಿಸುವುದು ಬಹಳ ವಿರಳ-ಬಸವರಾಜ್ ಹೂಗಾರ

**ರಾಯಚೂರು,ಜೂ.22**-ಇಂದಿನ ದಿನಮಾನಗಳಲ್ಲಿ ಕಲಾವಿದರನ್ನು ಗುರುತಿಸುವುದು ಬಹಳ ವಿರಳವಾಗಿದ್ದು. ಸರ್ಕಾರ ಮತ್ತು ಸಮಾಜ ಕಲಾವಿದರನ್ನು ಗುರುತಿಸಿ ಗೌರವ ಪೂರಕವಾಗಿ ಪ್ರಶಸ್ತಿ ನೀಡಬೇಕು ಎಂದು ಹೂಗಾರ್ ಸಮಾಜ ರಾಜ್ಯಾಧ್ಯಕ್ಷ ಬಸವರಾಜ್ ಹೂಗಾರ ಹೇಳಿದರು.

ನಗರದ ಸರ್ಕಾರಿ ನೌಕರರ ಭವನದಲ್ಲಿ ರಾಗ ರಂಗ ಸಾಂಸ್ಕೃತಿಕ ಕಲಾವೇದಿಕೆ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಂಯುಕ್ತ ಆಶ್ರಯದಲ್ಲಿ, ಸಾಂಸ್ಕೃತಿಕ ಕಲಾಸಂಗಮ ಸಂಗೀತ ಮತ್ತು ನೃತ್ಯ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು,

ಸರ್ಕಾರಿ ನೌಕರಿಯಿಂದ ನಿವೃತ್ತಿಯಾದ ಪಂಪಾಪತಿ ಹೂಗಾರ್ ಕಲಾ ಸಂಸ್ಥೆಯನ್ನು ಕಟ್ಟಿಕೊಂಡು ಅನೇಕ ಕಲಾವಿದರಿಗೆ ವೇದಿಕೆಯಲ್ಲಿ ಅವಕಾಶ ಮಾಡಿಕೊಟ್ಟಿರೋದು ತುಂಬಾ ಸಂತೋಷದ ಸಂಗತಿ ಎಂದರು.

➘ 4


## ಇಸಿಸಿಇ ಅತಿಥಿ ಶಿಕ್ಷಕರು, ಆಯಾಗಳ ನೇಮಕಕ್ಕೆ ಆಗ್ರಹ

**ರಾಯಚೂರು, ಜೂ. 21**- ಕೆಕೆಆರ್‌ಡಿಬಿ ಅಕ್ಷರ ಆವಿಷ್ಕಾರ ಯೋಜನೆಯಡಿ ನಡೆಯುತ್ತಿರುವ ಪೂರ್ವ ಪ್ರಾಥಮಿಕ (ಇಸಿಸಿಇ) ತರಗತಿಗಳಿಗೆ ಅತಿಥಿ ಶಿಕ್ಷಕರು ಹಾಗೂ ಆಯಾಗಳನ್ನು ಕೂಡಲೇ ನೇಮಕ ಮಾಡುವಂತೆ ಒತ್ತಾಯಿಸಿ ಎಐಡಿವೈಒ ಕಾರ್ಯಕರ್ತರು ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಚೇರಿಯ ಅಧೀಕ್ಷಕರು ಹಾಗೂ ಶಿಕ್ಷಣ ಸಂಯೋಜಕರಿಗೆ ಮನವಿ ಸಲ್ಲಿಸಲಾಯಿತು.

ಶಾಲೆಗಳು ಆರಂಭವಾಗಿ 20 ದಿನಗಳು ಕಳೆದರೂ ಪೂರ್ವ ಪ್ರಾಥಮಿಕ ಶಾಲೆಗಳಿಗೆ ಅತಿಥಿ ಶಿಕ್ಷಕರು ಮತ್ತು ಆಯಾಗಳನ್ನು ನೇಮಕ ಮಾಡದಿರುವುದರಿಂದ ಮಕ್ಕಳ ಕಲಿಕೆ ಹಾಗೂ ಪೋಷಣೆಗೆ ತೊಂದರೆಯಾಗುತ್ತಿದೆ. ಇದರಿಂದ ಪೋಷಕರಲ್ಲಿಯೂ ಆತಂಕ ಮನೆ ಮಾಡಿದ್ದು, ಈ ಯೋಜನೆ ಮುಂದುವರಿಯುತ್ತದೆಯೇ ಎಂಬ ಅನುಮಾನವೂ ವ್ಯಕ್ತವಾಗುತ್ತಿದೆ ಎಂದು ಮನವಿ ಮಾಡಿದರು.

➘ 4

## ಒಗ್ಗಟ್ಟಾಗಿ ಕೆಲಸ ಮಾಡಿ, ಇನ್ಮುಂದೆ ಪಕ್ಷದ ನಿಜವಾದ ಕಾರ್ಯಕರ್ತರನ್ನು ಗುರುತಿಸಿ ಹುದ್ದೆ ಕೊಡಿ-ಖರ್ಗೆ



**ಬೆಂಗಳೂರು,**ಇನ್ನು ಮುಂದೆ ಕಾರ್ಯಕರ್ತರಿಗೆ ಅಧಿಕಾರ ಕೊಡಿ.ನಿಜವಾದ ಕಾರ್ಯಕರ್ತ ರನ್ನು ಗುರುತಿಸಿ ಪೋಸ್ಟ್ ಹುದ್ದೆ ಎಂದು ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಕಿವಿಮಾತು ಹೇಳಿದರು.

ಕೆಪಿಸಿಸಿ ಅಧ್ಯಕ್ಷರಾಗಿ ಬಿ. ಕೆ. ಹರಿಪ್ರಸಾದ್ ಪದಗ್ರಹಣ ಮಾಡಿದ ಸಮಾವೇಶದಲ್ಲಿ ಮಾತನಾಡಿದ ಅವರು, ಇಷ್ಟು ದಿನ ಏನಾಯ್ತು ಆಯ್ತು, ಯಾರಿಗೆ ಏನು ಬೇಕೋ ಅದನ್ನು ಮಾಡಿಕೊಂಡರು. ಇನ್ನು ಮುಂದೆ ಕಾರ್ಯಕರ್ತರಿಗೆ ಅಧಿಕಾರ ಕೊಡಿ. ನಿಜವಾದ ಕಾರ್ಯಕರ್ತರನ್ನು ಗುರುತಿಸಿ ಪೋಸ್ಟ್ ಕೊಡಿ. ಕಷ್ಟಪಟ್ಟು ಎಲ್ಲರನ್ನೂ ಸಮಾಧಾನ ಮಾಡಿ, ಎಲ್ಲರ ಮನೆಗೂ ಹೋಗಿ ಒಂದುಗೂಡಿಸಿ ಕೆಲಸ ಮಾಡಿ ಎಂದ್ ಡಿ. ಕೆ. ಶಿವಕುಮಾರ್ ಹಾಗೂ ಸಿದ್ದರಾಮಯ್ಯ ವಿರುದ್ಧ ಪರೋಕ್ಷವಾಗಿ ಬೇಸರ ವ್ಯಕ್ತಪಡಿಸಿದರು.

ಸಿಎಂ ಡಿಕೆಶಿ, ಬಿ. ಕೆ. ಹರಿಪ್ರಸಾದ್‌ಗೆ ಕಿವಿಮಾತು : ಡಿ. ಕೆ. ಶಿವಕುಮ್ರಾ, ಬಿ. ಕೆ. ಹರಿಪ್ರಸಾದ್ ಅವರಿಗೆ ಖರ್ಗೆ ಕಿವಿಮಾತ್ ಹೇಳುತ್ತಾ, ಇಬ್ಬರು ಒಂದಾಗಿ ನಡೆಯಿರಿ. ನಿಮ್ಮಲ್ಲಿ ಎಷ್ಟೇ ಡಿಫರೆನ್ಸ್

➘ 4

## ನಗರದ 12 ಕೇಂದ್ರಗಳಲ್ಲಿ ನೀಟ್ ಪರೀಕ್ಷೆ ಪರೀಕ್ಷಾರ್ಥಿಗಳ ತಪಾಸಣೆ

■ ಕನ್ನಡ ಮಾತೃ ಭೂಮಿ ವಾರ್ತೆ

**ರಾಯಚೂರು,ಜೂ.22**-ರಾಷ್ಟ್ರೀಯ ಅರ್ಹತಾ ಹಾಗೂ ಪ್ರವೇಶ ಪರೀಕ್ಷೆ (ನೀಟ್-ಯುಜಿ) 2026ರ ಮರುಪರೀಕ್ಷೆಯನ್ನು ಜಿಲ್ಲೆಯಲ್ಲಿ ಸುಗಮ, ಪಾರದರ್ಶಕ ಹಾಗೂ ಸುರಕ್ಷಿತವಾಗಿ ನಡೆಸಲು ಜಿಲ್ಲಾಡಳಿತ ಮತ್ತು ಸಂಬಂಧಿತ ಇಲಾಖೆಗಳು ವ್ಯಾಪಕ ಸಿದ್ಧತೆಗಳನ್ನು ಕೈಗೊಂಡಿವೆ. ಜಿಲ್ಲೆಯ ವಿವಿಧ ಭಾಗಗಳಲ್ಲಿರುವ 12 ಪರೀಕ್ಷಾ ಕೇಂದ್ರಗಳಲ್ಲಿ ಪರೀಕ್ಷೆ ನಡೆಯಲಿದ್ದು, ಒಟ್ಟು 3,979 ಅಭ್ಯರ್ಥಿಗಳು ಪರೀಕ್ಷೆಗೆ ನೋಂದಾಯಿಸಿಕೊಂಡಿದ್ದಾರೆ.



ಅಭ್ಯರ್ಥಿಗಳು ಯಾವುದೇ ತೊಂದರೆಯಿಲ್ಲದೆ ಪರೀಕ್ಷೆಗೆ ಹಾಜರಾಗಲು ಅಗತ್ಯ ಮೂಲಸೌಕರ್ಯಗಳನ್ನು ಕಲ್ಪಿಸಲಾಗಿದೆ. ಪರೀಕ್ಷಾ ಕೇಂದ್ರಗಳಲ್ಲಿ ಕುಡಿಯುವ ನೀರು, ವಿದ್ಯುತ್, ಶೌಚಾಲಯ ಸೇರಿದಂತೆ ಅಗತ್ಯ ಸೌಲಭ್ಯಗಳನ್ನು ಒದಗಿಸಲಾಗಿದ್ದು, ಪರೀಕ್ಷೆಯ ವೇಳೆ ಯಾವುದೇ ಅಹಿತಕರ

➘ 4

## ಖ್ಯಾತ ನ್ಯಾಯವಾದಿ ರಾಮಾಚಾರ್ಯ ಪಪ್ಪು ನಿಧನ

■ ಕನ್ನಡ ಮಾತೃ ಭೂಮಿ ವಾರ್ತೆ

**ಕಲಬುರಗಿ,ಜೂ.22**-ಖ್ಯಾತ ನ್ಯಾಯವಾದಿಗಳು ಹಾಗೂ ನಗರದ ನೂತನ ವಿದ್ಯಾಲಯ (ಎನ್ ವಿ) ಸಂಸ್ಥೆಯ ಮಾಜಿ ಉಪಾಧ್ಯಕ್ಷರಾದ ರಾಮಾಚಾರ್ಯ ಪಪ್ಪು ಅವರು ಜೂನ್ 21ರಂದು (ರವಿವಾರ) ಬೆಳಿಗ್ಗೆ ಸ್ವಗೃಹದಲ್ಲಿ ನಿಧನರಾದರು.

ಅವರಿಗೆ 86 ವರ್ಷ ವಯಸ್ಸಾಗಿತ್ತು. ಅವರು ಓರ್ವ ಪುತ್ರರಾದ ಎನ್ ವಿ ಸೊಸೈಟಿಯ ಜಂಟಿ ಕಾರ್ಯದರ್ಶಿ ಆನಂದ ಪಪ್ಪು ವಕೀಲರು, ಇಬ್ಬರು ಪುತ್ರಿಯರು ಸೇರಿದಂತೆ ಅಪಾರ ಬಂಧು ಬಳಗವನ್ನು ಅಗಲಿದ್ದಾರೆ.

ರಾಯಚೂರಿನ 'ರಾಯಚೂರ ವಾಣಿ' ಪ್ರಾದೇಶಿಕ ಕನ್ನಡ ದಿನಪತ್ರಿಕೆಯ ವ್ಯವಸ್ಥಾಪಕ ಸಂಪಾದಕರಾಗಿರುವ ಅರವಿಂದ ಎನ್. ಕುಲಕರ್ಣಿ ಅವರು ಮೃತರ ಅಳಿಯಟದಿರು.

ಮೃತರ ಅಂತ್ಯಕ್ರಿಯೆಯನ್ನು ರವಿವಾರ ಸಂಜೆ 5 ಗಂಟೆಗೆ ನಗರದ ಜೇವರ್ಗಿ ರಸ್ತೆಯ ಚಿತ್ತಾರಿ ಅಡ್ಡೆ ಬಳಿಯ ಚಿತಾಗಾರದಲ್ಲಿ ನೆರವೇರಿಸಲಾಗುವುದೆಂದು ಕುಟುಂಬದವರು



ತಿಳಿಸಿದ್ದಾರೆ.

ಧರ್ಮಸಿಂಗ್ ಒಡನಾಡಿ : ರಾಮಾಚಾರ್ಯ ಪಪ್ಪು ವಕೀಲರು ಮಾಜಿ ಮುಖ್ಯಮಂತ್ರಿ ದಿ. ಎನ್. ಧರ್ಮಸಿಂಗ್ ಅವರ ಒಡನಾಡಿಯಾಗಿದ್ದರು. ಧರ್ಮಸಿಂಗ್ ಅವರಿಗೆ ಅತ್ಯಂತ ಆಪ್ತರಾಗಿದ್ದರು.

ಕಾನೂನು ಪಂಡಿತರಾಗಿದ್ದ ಅವರು : ಸುಮಾರು ಆರು ದಶಕಗಳಿಂದ ವಕೀ ಲಿ ವೃತ್ತಿಯಲ್ಲಿ ತೊಡಗಿಸಿಕೊಂಡು ನಾಡಿನಾದ್ಯಟತ ಸುಪ್ರಸಿದ್ಧರಾಗಿದ್ದರು. ಕೃಷ್ಣಾ ನದಿ ನ್ಯಾಯಾಧಿಕರಣದಲ್ಲಿ ಕರ್ನಾಟಕ ರಾಜ್ಯದ ಪರ ವಕಾಲತ್ತು ವಹಿಸಿದ್ದ ವಕೀಲರ ತಂಡದ ಹಿರಿಯ ಸದಸ್ಯರಾಗಿದ್ದರು. ವಕೀಲಿ ವೃತ್ತಿಯ ಜೊತೆಗೆ ಧಾರ್ಮಿಕ, ಸಾಮಾಜಿಕ ಚಟುವಟಿಕೆಗಳಲ್ಲೂ ಸಕ್ರಿಯವಾಗಿ ತೊಡಗಿಸಿಕೊಂಡಿದ್ದರು. ಕಲಬುರಗಿ ನಗರದ ಶ್ರೀ ಜಯತೀರ್ಥ ವಿದ್ಯಾರ್ಥಿ ನಿಲಯದ ಆಡಳಿತ ಮಂಡಳಿ ಪದಾಧಿಕಾರಿಗಳಾಗಿಯೂ ಸೇವೆ ಸಲ್ಲಿಸಿದ್ದರು. ಆಧ್ಯಾತ್ಮ ಜೀವಿಯಾಗಿದ್ದ ಅವರು ನಾಡಿನ ಹಿರಿಯ ವಿದ್ವಾಂಸರಾಗಿದ್ದ ಬನ್ನಂಜೆ ಗೋವಿಂದಾಚಾರ್ಯರ ಆಪ್ತರಾಗಿದ್ದರು. ಅವರ ಅಗಲಿಕೆಯೊಂದಿಗೆ ನಾಡಿನ ಕಾನೂನು ಕ್ಷೇತ್ರದ ಹಿರಿಯ ಕೊಂಡಿಯೊಂದು ಕಳಚಿದಂತಾಗಿದೆ.

ಸಂತಾಪ : ರಾಮಾಚಾರ್ಯ ಪಪ್ಪು ವಕೀಲರ ನಿಧನಕ್ಕೆ ಹಲವಾರು ನ್ಯಾಯವಾದಿಗಳು, ಬ್ರಾಹ್ಮಣ ಸಮಾಜದ ಪ್ರಮುಖರು ಸಂತಾಪ ವ್ಯಕ್ತಪಡಿಸಿದ್ದಾರೆ.ಎನ್ ವಿ ಸಂಸ್ಥೆಯ ಅಧ್ಯಕ್ಷ ಡಾ. ಗೌತಮ ಜಹಾಗೀರದಾರ, ಪ್ರಶಾಂತ ಕೋರಳ್ಳಿ ವಕೀಲರು ಮತ್ತಿತರ ಗಣ್ಯರು ಶೋಕ ವ್ಯಕ್ತಪಡಿಸಿದ್ದಾರೆ.

### ಅಂತರಾಷ್ಟ್ರೀಯ ಯೋಗ ದಿನಾಚರಣೆ

## ನಿಯಮಿತ ಯೋಗ ರೂಢಿಸಿಕೊಂಡರೇ ದೈಹಿಕ ಮತ್ತು ಮಾನಸಿಕ ಆರೋಗ್ಯ-ಬಿ.ವೆಂಕಟಸಿಂಗ್



■ ಕನ್ನಡ ಮಾತೃ ಭೂಮಿ ವಾರ್ತೆ

**ರಾಯಚೂರು,ಜೂ.22**-ಯೋಗವು ಶರೀರಕ್ಕೆ ಆರೋಗ್ಯ, ಮನಸ್ಸಿಗೆ ಆನಂದವನ್ನು ಕೊಟ್ಟು, ಕ್ರಿಯಾಶೀಲವಾಗಿಡುವ ದಿವ್ಯ ಔಷಧವಾಗಿದೆ. ಒತ್ತಡದ ಜೀವನದ ಮಧ್ಯೆ ಈ ಸಾಧನೆಗೆ ದಿನದ ಕನಿಷ್ಠ ಕೆಲ ಸಮಯ ಮೀಸಲಿಡಬೇಕು ಎಂದು ಕರ್ನಾಟಕ ಮಾಹಿತಿ ಹಕ್ಕು ಆಯೋಗದ ಕಲಬುರಗಿ ಪೀಠದ ಆಯುಕ್ತ ಬಿ.ವೆಂಕಟಸಿಂಗ್ ಹೇಳಿದರು.

ಅವರಿಂದು ನಗರದ ಮಹಾತ್ಮಗಾಂಧಿ ಕ್ರೀಡಾಂಗಣದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ, ರಾಯಚೂರು ಮಹಾನಗರ ಪಾಲಿಕೆ, ಆಯುಷ್ ಇಲಾಖೆ, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ವತಿಯಿಂದ ಹಮ್ಮಿಕೊಂಡಿದ್ದ 12ನೇ ಅಂತರರಾಷ್ಟ್ರೀಯ ಯೋಗ ದಿನಾಚರಣೆಯ ಅಂಗವಾಗಿ ಸಾಮೂಹಿಕ ಯೋಗ ಕಾರ್ಯಕ್ರಮವನ್ನು ಸಸಿಗೆನೀರು ಹಾಕುವ ಮೂಲಕ ಉದ್ಘಾಟಿಸಿ ಮಾತನಾಡಿದರು.

ಪ್ರಸ್ತುತ ದಿನಮಾನಗಳಲ್ಲಿ ವಿದ್ಯಾರ್ಥಿಗಳು, ನೌಕರರು, ಯುವಕರು, ಮಹಿಳೆಯರು, ಜನಸಾಮಾನ್ಯರು ಒತಡದ ಜೀವನವನ್ನು ಅನುಭವಿಸುತ್ತಿದ್ದು, ಈ ಒತ್ತಡದಿಂದ ದೂರವಿರಲು ಪ್ರತಿ ದಿನ ಕನಿಷ್ಠ 30 ನಿಮಿಷಗಳವರೆಗಾದರೂ, ವ್ಯಾಯಾಮ, ಉಸಿರಾಟಕ್ಕೆ ಸಂಬಂಧಿಸಿದ ಪ್ರಾಣಾಯಾಮ, ಯೋಗಾಸನಗಳನ್ನು ಮಾಡಬೇಕು. ಇದರಿಂದ ಪ್ರತಿಯೊಬ್ಬರೂ ಸುಧೀರ್ಘ ಆರೋಗ್ಯವನ್ನು ಕಾಪಾಡಿಕೊಳ್ಳಲು ಸಾಧ್ಯವಾಗುತ್ತದೆ ಎಂದರು.

ಪ್ರತಿನಿತ್ಯ 30 ನಿಮಿಷ ಧ್ಯಾನ ಮಾಡಿದ್ದಲ್ಲಿ ಭವಿಷ್ಯದಲ್ಲಿ 30 ವರ್ಷಗಳ ಆಯಸ್ಸು ವೃದ್ಧಿಯಾಗುತ್ತದೆ. ಸ್ಪರ್ಧಾತ್ಮಕ ಯುಗದಲ್ಲಿ ವಿದ್ಯಾರ್ಥಿಗಳು ಸಾಕಷ್ಟು ಒತ್ತಡಕ್ಕೆ ಒಳಗಾಗಿದ್ದಾರೆ. ವಿದ್ಯಾರ್ಥಿಗಳು ನಿರಂತರವಾಗಿ ಯೋಗಭ್ಯಾಸಗಳಲ್ಲಿ ತೊಡಗಿಕೊಳ್ಳಬೇಕು. ಇದರಿಂದ ಪರೀಕ್ಷೆಗಳ ಮೇಲಿನ ಒತ್ತಡವೂ ನಿವಾರಣಯಾಗಿ ಶೈಕ್ಷಣಿಕವಾಗಿ ಮುಂದೆಬರಬಹುದಾಗಿದೆ ಎಂದು ತಿಳಿಸಿದರು.

ಯೋಗ ದೈಹಿಕ, ಮಾನಸಿಕ ಹಾಗೂ ಆಧ್ಯಾತ್ಮಿಕ ಆರೋಗ್ಯವನ್ನು ಕಾಪಾಡುವ ಅತ್ಯುತ್ತಮ ಸಾಧನವಾಗಿದ್ದು, ಪ್ರತಿಯೊಬ್ಬರೂ ತಮ್ಮ ದೈನಂದಿನ ಜೀವನದಲ್ಲಿ ಯೋಗವನ್ನು ಅಳವಡಿಸಿಕೊಳ್ಳಬೇಕು.


ವಿದ್ಯಾರ್ಥಿಗಳು ಪತ್ರಿ ದಿನ ಯೋಗ ಮಾಡುವ ಮೂಲಕ ತಮ್ಮ ಒತ್ತಡ ಜೀವನದಿಂದ ಹೊರಬರಬೇಕು. ಪರೀಕ್ಷೆಯಲ್ಲಿ ಒಳ್ಳೆಯ ಫಲಿತಾಂಶವನ್ನು ಪಡೆಯಬೇಕೆಂದರು.

ಇದೇ ವೇಳೆ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಅರುಣಾಂಗ್ಷುಗಿರಿ ಮಾತನಾಡಿ, ಇಡೀ ಜಗತ್ತಿಗೆ ಯೋಗವು ಭರತ ದೇಶ ನೀಡಿದ ಕೊಡುಗೆಯಾಗಿದೆ. ಆದರೆ ನಮ್ಮ ದೇಶದಲ್ಲಿಯೇ ಅತಿ ಕಡಿಮೆ ಜನರು ಯೋಗ ಮಾಡುತ್ತಿರುವುದು ಬೇಸರದ ಸಂಗತಿಯಾಗಿದೆ.

ಮೊಬೈಲ್ ಫೋನ್‌ಗಳ ಹೆಚ್ಚಿನ ಬಳಕೆಯಿಂದ ಇಂದಿನ ಯುವಕರಲ್ಲಿ ಏಕಾಗ್ರತೆ ಕಡಿಮೆಯಾಗುತ್ತಿದೆ. ಯೋಗ ಮಾಡಿದ್ದಷ್ಟು ವಯೋವೃದ್ಧಿಯಾಗುತ್ತದೆ ಎಂದು ಹೇಳಿದರು.

➘ 4

## ಬಿಜೆಪಿಯಿಂದ ಅಂತರಾಷ್ಟ್ರೀಯ ಯೋಗ ದಿನಾಚರಣೆ ಯೋಗದಿಂದ ರೋಗ ದೂರ-ಡಾ.ಶಿವರಾಜ ಪಾಟೀಲ್



■ ಕನ್ನಡ ಮಾತೃ ಭೂಮಿ ವಾರ್ತೆ

**ರಾಯಚೂರು,ಜೂ.22**-ಬಿಜೆಪಿ ಯುವ ಮೋರ್ಚಾ ವತಿಯಿಂದ ವಿಶ್ವ ಯೋಗ ದಿನಾಚರಣೆ ಅಂಗವಾಗಿ ನಗರದ ರತ್ನಗಿರಿ ಬೆಟ್ಟ ಅಯ್ಯಪ್ಪ ದೇವಸ್ಥಾನದ ಆವರಣದಲ್ಲಿ ವಿಶ್ವ ಯೋಗ ದಿನಾಚರಣೆಯ ವಿಶೇಷ ಯೋಗ ಕಾರ್ಯಕ್ರಮವನ್ನು ಆಯೋಜಿಸಲಾಗಿತ್ತು.

ಶಾಸಕ ಎಸ್. ಶಿವರಾಜ್ ಪಾಟೀಲ್ ಹಾಗೂ ಬಿಜೆಪಿ ಯುವ ಮೋರ್ಚಾ ಅಧ್ಯಕ್ಷ ಎನ್. ವಿನಾಯಕ್ ರಾವ್ ಅವರ ನೇತೃತ್ವದಲ್ಲಿ ಕಾರ್ಯಕ್ರಮ ನಡೆಯಿತು.

ಯೋಗವು ದೇಹಕ್ಕೆ ಆರೋಗ್ಯ, ಮನಸ್ಸಿಗೆ ಶಾಂತಿ ಹಾಗೂ ಜೀವನಕ್ಕೆ ಸಮತೋಲನ ನೀಡುವ ಅಮೂಲ್ಯ ಸಾಧನೆಯಾಗಿದೆ ಎಂಬ ಸಂದೇಶದೊಂದಿಗೆ ನಡೆದ

➘ 4

## ವಿಧಾನ ಪರಿಷತ್ ಸದಸ್ಯ ವಸಂತಕುಮಾರರಿಗೆ ಸಚಿವ ಸ್ಥಾನನೀಡಲಿ-ಪಿ.ಯಲ್ಲಪ್ಪ

■ ಕನ್ನಡ ಮಾತೃ ಭೂಮಿ ವಾರ್ತೆ

**ರಾಯಚೂರು,ಜೂ.22**-ವಿಧಾನ ಪರಿಷತ್ ಸದಸ್ಯರಾಗಿರುವ ಎ.ವಸಂತಕುಮಾರ ಇವರಿಗೆ ಸಚಿವ ಸ್ಥಾನ ನೀಡಿ ಹಿರಿಯ ಸಚಿವರಾಗಿರುವ ಕೆ.ಎಚ್.ಮುನಿಯಪ್ಪನವರಿಗೆ ಉಪ ಮುಖ್ಯಮಂತ್ರಿ ಸ್ಥಾನ ನೀಡಬೇಕೆಂದು ಮಾದಿಗ ಮಹಾಸಭಾದ ಅಧ್ಯಕ್ಷ ಪಿ.ಯಲ್ಲಪ್ಪ ಒತ್ತಾಯಿಸಿದರು.

ಅವರಿಂದು ಮಾಧ್ಯಮಗೋಷ್ಟಿ ಉದ್ದೇಶಿಸಿ ಮಾತನಾಡಿ ಎನ್‌ಎಸ್‌ಯುಐ ಅಧ್ಯಕ್ಷರಾಗಿ, 11 ವರ್ಷ ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷರಾಗಿ, ಪಕ್ಷದ ಸಂಘಟನೆಯಲ್ಲಿ ತೊಡಗಿಸಿಕೊಂಡಿರುವ ಎ.ವಸಂತಕುಮಾರ ಕೆಪಿಸಿಸಿ ಕಾರ್ಯಾಧ್ಯಕ್ಷರಾಗಿ ಸೇವೆ ಸಲ್ಲಿಸುತ್ತಿದ್ದಾರೆ. ಕಲ್ಯಾಣ ಕರ್ನಾಟಕ ಭಾಗದಲ್ಲಿ ವಿಧಾನಸಭೆ, ಲೋಕಸಭಾ ಚುನಾವಣೆಯಲ್ಲಿ ಪಕ್ಷದ ಅಭ್ಯರ್ಥಿಗಳ ಗೆಲುವಿಗೆ ಶ್ರಮಿಸಿದ್ದಾರೆ. ವಿಧಾನ ಪರಿಷತ್ ಸದಸ್ಯರಾಗಿ 22 ಕೋಟಿ ರೂ ಅನುದಾನವನ್ನು ಮಂಜೂರಿಗೆ ಶ್ರಮವಹಿಸಿ ಅಭಿವೃದ್ಧಿ ಕಾರ್ಯಗಳಿಗೆ ಚಾಲನೆ ನೀಡಿದ್ದಾರೆ. ಕಲ್ಯಾಣ ಕರ್ನಾಟಕ ಭಾಗದಲ್ಲಿ ಏಕೈಕ ನಾಯಕರಾಗಿರುವ ಎ.ವಸಂತಕುಮಾರ ಇವರಿಗೆ ಸಚಿವ ಸ್ಥಾನ ನೀಡುವ ಮೂಲಕ ಜಿಲ್ಲೆಗೂ ಪ್ರಾತಿನಿಧ್ಯ ನೀಡಬೇಕೆಂದರು. ಎನ್.ಎಸ್.ಬೋಸರಾಜ



ಇವರಿಗೆ ಸಚಿವ ಸ್ಥಾನ ನೀಡಬೇಕೆಂದು ಮಾದಿಗ ಸಮಾಜದ ಕಾಂಗ್ರೆಸ್ ಮುಖಂಡರು ಒತ್ತಾಯಿಸಿರಬಹುದು. ಮಾದಿಗ ಸಮಾಜದ ಎ.ವಸಂತಕುಮಾರ ಇವರಿಗೆ ಸಚಿವ ಸ್ಥಾನ ನೀಡಬೇಕೆನ್ನುವದು ನಮ್ಮ ಒತ್ತಾಯವಾಗಿದೆ ಎಂದರು.

ಎ.ವಸಂತಕುಮಾರ ಇವರ ತಂದೆ ದಿವಂಗತ ಆಂಜಿನೇಯ್ಯ ಇವರು ಸಹ ಕಾಂಗ್ರೆಸ್ ಪಕ್ಷದ ಅಧ್ಯಕ್ಷರಾಗಿ, ನಗರಸಭೆ ಅಧ್ಯಕ್ಷರಾಗಿ 50 ವರ್ಷ ಕಾಂಗ್ರೆಸ್ ಪಕ್ಷ ಕಟ್ಟಿಬೆಳೆಸಲು ಕಾರಣೀಭೂತರಾಗಿದ್ದಾರೆ. ವಿಧಾನ ಪರಿಷತ್ ಸದಸ್ಯರಾಗಿರುವ ವಸಂತಕುಮಾರಿಗೆ ಸಚಿವ ಸ್ಥಾನ ನೀಡುವದು ಸೂಕ್ತವಾಗಿದೆ ಎಂದರು.

ಕರುಣಾಕರ ಕಟ್ಟಿಮನಿ ವಕೀಲ ಮಾತನಾಡಿ ಎ.ವಸಂತಕುಮಾರ ಇವರು ಲಿಂಗಸೂಗೂರು ವಿಧಾನಸಭಾ ಕ್ಷೇತ್ರಕ್ಕೆ ಸ್ಪರ್ಧಿಸಿದ್ದಾಗ ನೀಡಿದ್ದ ಜಾತಿ ಪ್ರಮಾಣವನ್ನು ಸಹಾಯಕ ಆಯುಕ್ತರ ಸಮಿತಿ ಪರಿಶೀಲಿಸಿ ಮಾದಿಗ ಸಮಾಜವೆಂದು ಧೃಢೀಕರಿಸಿದೆ. ಮಾದಿಗ ಸಮಾಜದವರಲ್ಲ ಎನ್ನುವ ವಾದಕ್ಕೆ ಅರ್ಥವಿಲ್ಲ ಎಂದರು. ಹರಿಜನವಾಡದಲ್ಲಿಯೇ ಹುಟ್ಟಿ ಬೆಳೆದು ಸಮಾಜ ಭಾಗವಾಗಿರುವ ಅವರ ವಿರುದ್ಧ ಆರೋಪಗಳಲ್ಲಿ ಹುರುಳಿಲ್ಲ ಎಂದರು. ಈ ಸಂದರ್ಬದಲ್ಲಿ ನಗರಸಭೆಮಾಜಿ ಸದಸ್ಯ ಚೆನ್ನಪ್ಪ ,ಜೆ.ತಿಮಪ್ಪ, ಎನ್.ಕೆ.ನಾಗರಾಜ, ಜೆ.ಮಾರೆಪ್ಪ, ಕೆ.ಪಿ. ಅನಿಲಕುಮಾರ, ಪರಶುರಾಮ, ಪ್ರಭಾಕರ, ಜನಾರ್ಧನ ಹಳ್ಳಿ ಬೆಂಚಿ, ಜೆ.ಸತ್ಯನಾಥ, ಬಾಬುಭಂಡಾರಿ, ಜೆ.ರಾಜು, ಮುನಿಸ್ವಾಮಿ ಉಪಸ್ಥಿತರಿದ್ದರು.


## ಮದರಸಾ ಮೂಲಭೂತ ಸೌಕರ್ಯಕ್ಕೆ 50 ಲಕ್ಷ ಅನುದಾನ: ಎ. ವಸಂತಕುಮಾರ್‌ಗೆ ಸನ್ಮಾನ

■ ಕನ್ನಡ ಮಾತೃ ಭೂಮಿ ವಾರ್ತೆ

**ರಾಯಚೂರು,ಜೂ.21**-ನಗರದ ಜ್ಯೋತಿ ಕಾಲೋನಿಯಲ್ಲಿರುವ ಮಹಿಳಾ ಮದರಸಾ ಬನಾತ್ ಫೈಜಾನ್-ಎ-ರಜಾ ಲಿಲ್ ಮದರಸಾದ ಮೂಲಭೂತ ಸೌಕರ್ಯಗಳ ಅಭಿವೃದ್ಧಿಗಾಗಿ ರಾಜ್ಯ ಸರ್ಕಾರದಿಂದ 50 ಲಕ್ಷ ಅನುದಾನ ಮಂಜೂರು ಮಾಡಿಸಿಕೊಟ್ಟ ಹಿನ್ನೆಲೆಯಲ್ಲಿ ವಿಧಾನ ಪರಿಷತ್ ಸದಸ್ಯ ಎ. ವಸಂತಕುಮಾರ್ ಅವರನ್ನು ಮದರಸಾ ಆಡಳಿತ ಮಂಡಳಿಯವರು ಸನ್ಮಾನಿಸಿ ಅಭಿನಂದಿಸಿದರು.

ಮದರಸಾ ಆಡಳಿತ ಮಂಡಳಿಯ ಮನವಿಯ ಮೇರೆಗೆ ಎ. ವಸಂತಕುಮಾರ್ ಅವರು ಸರ್ಕಾರಕ್ಕೆ ಶಿಫಾರಸು ಸಲ್ಲಿಸಿದ್ದು,

ಅದರ ಆಧಾರದ ಮೇಲೆ 50 ಲಕ್ಷ ಅನುದಾನ ಮಂಜೂರಾಗಿದೆ. ಈ ಅನುದಾನದಿಂದ ಮದರಸಾದ ಮೂಲಭೂತ ಸೌಕರ್ಯಗಳು ಅಭಿವೃದ್ಧಿಗೊಂಡು ಮುಸ್ಲಿಂ ಮಹಿಳೆಯರ ಶಿಕ್ಷಣಕ್ಕೆ ಹೆಚ್ಚಿನ ಅನುಕೂಲವಾಗಲಿದೆ ಎಂದು ಆಡಳಿತ



ಮಂಡಳಿಯವರು ತಿಳಿಸಿದರು.

ಸನ್ಮಾನ ಸ್ವೀಕರಿಸಿದ ಎ. ವಸಂತಕುಮಾರ್ ಮಾತನಾಡಿ, ಮಹಿಳಾ ಶಿಕ್ಷಣಕ್ಕೆ ಸರ್ಕಾರ ಹೆಚ್ಚಿನ ಪ್ರೋತ್ಸಾಹ ನೀಡುತ್ತಿದ್ದು, ಲಭ್ಯವಾಗುವ ಸೌಲಭ್ಯಗಳನ್ನು ಸದ್ಬಳಕೆ ಮಾಡಿಕೊಳ್ಳಬೇಕು. ಮಹಿಳೆಯರು ಶಿಕ್ಷಣ ಪಡೆದರೆ ಕುಟುಂಬ ಹಾಗೂ ಸಮಾಜದ ಅಭಿವೃದ್ಧಿಗೆ ಮಹತ್ತರ ಕೊಡುಗೆ ನೀಡಲು ಸಾಧ್ಯವಾಗುತ್ತದೆ ಎಂದು ಹೇಳಿದರು.

ಈ ಸಂದರ್ಭದಲ್ಲಿ ಮದರಸಾ ಆಡಳಿತ ಮಂಡಳಿಯ ಮನವಿಯನ್ನು ಸರ್ಕಾರದ ಗಮನಕ್ಕೆ ತಂದು ಅನುದಾನ ಮಂಜೂರಾಗಲು ಸಹಕಾರ ನೀಡಿದ ಡಾ. ರಝಾಕ್ ಉಸ್ತಾದ್ ಅವರನ್ನೂ ಆಡಳಿತ ಮಂಡಳಿಯವರು ಸನ್ಮಾನಿಸಿದರು.

ಕಾರ್ಯಕ್ರಮದಲ್ಲಿ ಮೌಲಾನಾ ಶಕ್ಷಾವಲಿ ಸೋಹರವರ್ಧಿ, ಹಾಫೀಜ್ ಕಮರ್ ಅಲಿ ಅಶ್ರಫಿ, ಹಾಫೀಜ್ ಮೊಹಮ್ಮದ್ ಖಲೀಲ್, ಹಾಫೀಜ್ ನಿಸಾರ್, ಮೌಲಾನಾ ಸೈಯದ್ ಅಜರುದ್ದೀನ್, ಮೌಲಾನಾ ಜೀಲಾನಿ ಅಶ್ರಫಿ ಸೇರಿದಂತೆ ಆಡಳಿತ ಮಂಡಳಿಯ ಸದಸ್ಯರು ಹಾಗೂ ಇತರರು ಉಪಸ್ಥಿತರಿದ್ದರು.

# ಸಿರುಗುಪ್ಪ: ಘನತ್ಯಾಜ್ಯ ವಿಲೇವಾರಿ ಘಟಕಕ್ಕೆ ಜಿಲ್ಲಾಧಿಕಾರಿ ನಾಗೇಂದ್ರ ಪ್ರಸಾದ್ ಭೇಟಿ



ಕನ್ನಡ ಮಾತೃ ಭೂಮಿ ವಾರ್ತೆ

**ಸಿರುಗುಪ್ಪ,**ನಗರದ ಹೊರ ವಲಯದಲ್ಲಿರುವ ನಗರಸಭೆಯ ಘನತ್ಯಾಜ್ಯ ವಿಲೇವಾರಿ ಘಟಕಕ್ಕೆ ಜಿಲ್ಲಾಧಿಕಾರಿ ನಾಗೇಂದ್ರ ಪ್ರಸಾದ್ ಭೇಟಿ ನೀಡಿ ಪರಿಶೀಲನೆ ನಡೆಸಿ ಪೌರಾಯುಕ್ತರಿಂದ ಮಾಹಿತಿ ಪಡೆದರು.

ಘನ ತ್ಯಾಜ್ಯ ವಿಲೇವಾರಿ ಘಟಕದಲ್ಲಿ ನಗರ ಸಭೆಯ ಸಿಬ್ಬಂದಿ ಸಮರ್ಪಕವಾಗಿ ಕಾರ್ಯನಿ ರ್ವಹಿಸುತ್ತಿರುವ ಬಗ್ಗೆ ಪರಿಶೀಲನೆ ನಡೆಸಲು ಭೇಟಿ ನೀಡಿದ ಜಿಲ್ಲಾಧಿಕಾರಿಗಳು ಮಾತನಾಡಿ ಘನ ವಿಲೇವಾರಿ ಘಟಕದಲ್ಲಿ ಕಾರ್ಮಿಕರು ಕಸವನ್ನು ಸಮರ್ಪಕವಾಗಿ ನಿರ್ವಹಣೆ ಮಾಡಬೇಕು ಕಸ ನಿರ್ವಹಣೆ ಮಾಡಿದ ಬಗ್ಗೆ ದಾಖಲೆ ನಿರ್ವಹಿಸಬೇಕು ಸಾರ್ವಜನಿಕರಿಗೆ ಯಾವುದೇ ರೀತಿಯಲ್ಲಿ ತೊಂದರೆ ಯಾಗದಂತೆ ವಿಲೇವಾರಿ ಘಟಕದಲ್ಲಿ ಜನ ತ್ಯಾಜ್ಯವನ್ನು ನಿರ್ವಹಣೆ ಮಾಡಬೇಕೆಂದು ಸೂಚಿಸಿದರು ಈ ಘಟಕದಲ್ಲಿ ಕಾರ್ಯನಿರ್ವಹಿಸುತ್ತಿರುವ ಯಂತ್ರಗಳ ಕಾರ್ಯನಿರ್ವಹಣೆ ಮತ್ತು ಅವುಗಳ ಸುಸ್ಥಿತಿ ಬಗ್ಗೆ ವರದಿ ನೀಡಬೇಕೆಂದು ಪೌರಾಯುಕ್ತರಿಗೆ ಸೂಚಿಸಿದರು

ಘಟಕದಲ್ಲಿ ಕಾರ್ಯ ನಿರ್ವಹಿಸುವ ವಿವಿಧ ವಿಭಾಗಗಳನ್ನು ಪರಿಶೀಲನೆ ನಡೆಸಿದ ಜಿಲ್ಲಾಧಿಕಾರಿಗಳು ಅಧಿಕಾರಿಗಳಿಂದ ಮಾಹಿತಿ ಪಡೆದರು ತಹಶೀಲ್ದಾರ್ ಗೌಸಿಯಾ ಬೇಗಂ ಪೌರಾಯುಕ್ತ ಗಂಗಾಧರ ಪರಿಸರ ಅಧಿಕಾರಿ ದಿಲೀಪ್ ಮತ್ತು ಸಿಬ್ಬಂದಿ ಇದ್ದರು.

# ಕುಂಬಾರಪೇಟ,ಲಿಂಗಸೂಗುರು ಡಾಂಬರ್ ರಸ್ತೆ ಅಗಲೀಕರಣ ಬ್ರಿಡ್ಜ್ ಶಾಶ್ವತ ತಡೆ ಗೋಡೆಗೆ ಸಚಿವ ಸತೀಶ್ ಜಾರಕಿಹೊಳಿಗೆ ಮನವಿ



ಕನ್ನಡ ಮಾತೃ ಭೂಮಿ ವಾರ್ತೆ

**ಸುರಪುರ,**ಸುರಪುರ ತಾಲೂಕಿನ, ಕುಂಬಾರಪೇಟ ಮಾರ್ಗವಾಗಿ ಲಿಂಗಸೂಗುರು ತಾಲೂಕಿಗೆ ಹೋಗುವ ಡಾಂಬರ ರಸ್ತೆಯು ದೇವಾಪುರ ಗ್ರಾಮದ ಹತ್ತಿರವಿರುವ ಬ್ರಿಡ್ಜಗೆ ಎಡ-ಬಲ ಭಾಗದಲ್ಲಿ ತಡೆ ಗೋಡೆ ಇರುವುದಿಲ್ಲ. ಈ ರಸ್ತೆಯು ತುಂಬಾ ಇಕ್ಕಟಾಗಿದ್ದು, ಈ ರಸ್ತೆಯು ಬೀದರ-ಬೆಂಗಳೂರು ರಾಜ್ಯ ಹೆದ್ದಾರಿ ಆಗಿರುವುದರಿಂದ ದಿನನಿತ್ಯ ಈ ರಸ್ತೆಯಲ್ಲಿ ಸುಮಾರು ಭಾರಿ ವಾಹನಗಳು ಸಂಚರಿಸುತ್ತಿದ್ದು, ಜನಸಾಮಾನ್ಯರಿಗೆ ತೋದರೆ ಉಂಟಾಗುತ್ತಿದೆ ಎಂದು ಲೋಕೋಪಯೋಗಿ ಇಲಾಖೆ ಸಚಿವ ರಾದ ಮಾನ್ಯ ಸತೀಶ್ ಜಾರಕಿಹೊಳಿ ಅವರಿಗೆ ಮನವಿ ಸಲ್ಲಿಸಿದರು.

ಈ ಸೇತುವೆಯ ಎಡ-ಬಲ ಭಾಗದಲ್ಲಿ ಸಾಕಷ್ಟು ತೆಗ್ಗು-ದಿನ್ನೆಗಳು ಕೂಡಿರುವುದರಿಂದ ವಾಹನಗಳು ಅಪಘಾತವಾಗಿ ಸೇತುವೆಯಿಂದ ಉರುಳಿ ಬಿದ್ದು ಸಾಕಷ್ಟು ಪ್ರಾಣಗಳು ಕಳೆದುಕೊಂಡಿದ್ದು ಇರುತ್ತದೆ. ಸಾರ್ವಜನಿಕರು ಜೀವ ಕೈಯಲ್ಲಿಡಿದುಕೊಂಡು ಪ್ರಯಾಣಿಸು ವಂತಾಗಿದೆ.

ಕಳೆದ ದಿನಗಳ ಹಿಂದೆ ಸುರಪುರ ಮಾರ್ಗವಾಗಿ ಚಲಿಸುತ್ತಿರುವ ಕಾರಿಗೆ ಖಾಸಗಿ ವಾಹನ ಬಸ್ ಮುಖಾಮುಖಿಯಾಗಿ ಡಿಕ್ಕಿಯಾಗಿ 09 ಜನರು ಅಗ್ನಿಗೆ ಆಹುತಿಯಾಗಿದ್ದಾರೆ. ಈ ರಸ್ತೆಯ ಮೇಲೆ ಹಲವಾರು ಸಂಬಂಧಿಸಿದ ಅಧಿಕಾರಿಗಳ ಚಲಿಸುತ್ತಿದ್ದರೂ ಕೂಡ ಯಾವೊಬ್ಬ ಅಧಿಕಾರಿಯೂ ಕೂಡ ಗಮನಹರಿಸಿರುವುದಿಲ್ಲ. ಹಾಗೂ ಈ ಕುರಿತು ಸಾರ್ವಜನಿಕರು ಹಾಗೂ ಸಂಘಟನೆಗಳು ಸಂಬಂಧಿಸಿದ ಅಧಿಕಾರಿಗಳಿಗೆ ಹಲವಾರು ಬಾರಿ ಮನವಿ ಮಾಡಿಕೊಂಡರೂ ಸಹ ಈವರೆಗೆ ಯಾವುದೇ ಪ್ರಯೋಜನವಾಗಿರುವುದಿಲ್ಲ.

ಆದ್ದರಿಂದ ದಯಾಳುಗಳಾದ ತಾವುಗಳು ಸದರಿ ವಿಷಯವನ್ನು ಕೂಲಕುಲಷವಾಗಿ ಸ್ಮಾರಿಕವಾಗಿ ಪರಿಶೀಲಿಸಿ ಹಾಗೂ ಗಂಭೀರವಾಗಿ ಪರಿಗಣಿಸಿ, ಈ ರಸ್ತೆಯ ಹತ್ತಿರವಿರುವ ಪ್ರಡ್ಡಗೆ ಪಡೆ-ಬಲ ಭಾಗದಲ್ಲಿ ಕಡೆ ಗೋಡೆ ನಿರ್ಮಿಸಬೇಕು ಹಾಗೂ ತೆಗ್ಗು-ದಿನ್ನೆಗಳನ್ನು ಶಾಶ್ವತವಾಗಿ ಮುಚ್ಚಿ ಈ ರಸ್ತೆಯ ಅನುಕೂಲ ಮಾಡಿಕೊಡಬೇಕೆಂದು ಮನವಿ ಮಾಡಿದರು

ಈ ಸಂದರ್ಭದಲ್ಲಿ ತಾಲೂಕು ಸಂಚಾಲಕರಾದ ತಿಪ್ಪಣ್ಣ ಶೆಳ್ಳಗಿ, ಮುಖಂಡರಾದ ಶೇಖರ ಬಡಿಗೇರ ಮಂಗಳೂರು, ಮುತ್ತು.ಬಿ.ದೇವತ್ಕಲ್, ಪರಮಣ್ಣ ಉಪಸ್ಥಿತರಿದ್ದರು

# ಶಾಲೆಯಲ್ಲಿ ಶನಿವಾರ ಸಂಭ್ರಮಾಚರಣೆ

ಕನ್ನಡ ಮಾತೃ ಭೂಮಿ ವಾರ್ತೆ

**ಮುದಗಲ್,**ಸ್ಥಳೀಯ ವೆಂಕಟರಾಯನ ಪೇಟೆ ಯ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಶನಿವಾರ ಸಂಭ್ರಮ ಕಾರ್ಯಕ್ರಮವನ್ನು ನಡೆಸಲಾಯಿತು. ಶಾಲೆಯ ಮುಖ್ಯ ಗುರು ಸುಭಾಷ್ ಭಾವಿಕಟ್ಟಿ ಕಾರ್ಯ ಕ್ರಮವನ್ನು ಉದ್ದೇಶಿಸಿ ಪ್ರಾಸ್ತಾವಿಕವಾಗಿ ಮಾತನಾಡಿ, ಶನಿವಾರ ಸಂಭ್ರಮ ಕಾರ್ಯಕ್ರಮದ ಮೂಲಮ ಉದ್ದೇಶದ ಕುರಿತು ಮಕ್ಕಳಿಗೆ ತಿಳಿಯಪಡಿಸಿದರು.

ವಿಕಲಚೇತನರ ಸಂಘಟನೆಯ ಮುಖಂ ಡ ಸುರೇಶ ಭಂಡಾರಿ ಮಾತನಾಡಿ, ಶಾಲೆಯ ಮಕ್ಕಳಲ್ಲಿ ವಿಕಲಚೇತನರ ತಾರತಮ್ಯ ನೀತಿ,ಹಾಗೂ ಸರ್ಕಾರದ ಮೂಲ ಸೌಕರ್ಯಗಳ ಬಗ್ಗೆ ಮಕ್ಕಳೊಂ ದಿಗೆ ಕೆಲ ಕಾಲ ಸಂವಾದ ನಡೆಸಿದರು. ಸಮಾಜದಲ್ಲಿರುವ ವಿಕಲಚೇತನರಿಗೆ ಯಾವುದೇ ರೀತಿಯ ತೊಂದರೆಗಳಾಗ ದಂತೆ ನೋಡಿಕೊಳ್ಳುವ ಜವಾಬ್ದಾರಿ ನಮ್ಮೆಲ್ಲರ ಮೇಲಿದೆ ಎಂದರು.

ವಿಕಲಚೇ ತನರಿಗೆ ಸರ್ಕಾರ ಅನೇಕ ಸೌಲಭ್ಯಗಳನ್ನು ಕಲ್ಪಿಸುತ್ತಾ ಬಂದಿದ್ದು ಸಕಾಲಕ್ಕೆ ಯೋಜ ನೆಗಳ ಸದುಪಯೋಗ ಪಡೆದುಕೊಂಡು ಸ್ವಾವಲಂಭಿ ಉತ್ತಮ ಜೀವನ ನಡೆಸಲು ಮುಂದಾಗಲು ಸಹಕಾರವಾಗುವುದು ಎಂದರು. ಈ ಸಂದರ್ಭದಲ್ಲಿ ಶಿಕ್ಷಕರಾದ ಶಶಿಕಲಾ, ಅಂಜಲೀನಮ್ಮ, ಪಾರ್ವತೆಮ್ಮ, ರತ್ನ, ಪ್ರಮುಖರಾದ ಹುಸೇನ್ ಭಾಷಾ ಹಾಗೂ ಇತರರಿದ್ದರು.



# ಜೆಜೆಎಂ ಯೋಜನೆಯಲ್ಲಿ ಭಾರಿ ಅವ್ಯವಸ್ಥೆ ಆರೋಪ; ಸಂಸದ ಸಾಗರ್ ಖಂಡ್ರೆ ಅವರಿಗೆ ಗ್ರಾಮಸ್ಥರ ದೂರು



ಕನ್ನಡ ಮಾತೃ ಭೂಮಿ ವಾರ್ತೆ

**ಕಮಲನಗರ,**ಗ್ರಾಮಸ್ಥರ ಮನೆ ಬಾಗಿಲಿಗೆ ಶುದ್ಧ ಕುಡಿಯುವ ನೀರು ತಲುಪಿಸುವ ಮಹತ್ವಾಕಾಂಕ್ಷಿ ಜಲ್ ಜೀವನ್ ಮಿಷನ್ (ಜೆಜೆಎಂ) ಯೋಜನೆಯಡಿ ಕೊರೆದ ಬಾವಿಯು ಇಂದಿಗೂ ಸಾರ್ವಜನಿಕರ ಉಪಯೋಗಕ್ಕೆ ಬಾರದೆ ನಿರುಪಯುಕ್ತವಾಗಿ ಉಳಿದಿದೆ. ಲಕ್ಷಾಂತರ ರೂಪಾಯಿ ವೆಚ್ಚದ ಕಾಮಗಾರಿ ಜನರಿಗೆ ಯಾವುದೇ ಪ್ರಯೋಜನ ನೀಡದಿರುವ ಹಿನ್ನೆಲೆಯಲ್ಲಿ ಸಾರ್ವಜನಿಕ ಹಣ ದುರ್ಬಳಕೆಯಾಗಿರುವ ಗಂಭೀರ ಆರೋಪ ಕೇಳಿಬಂದಿದೆ.

ಕಮಲನಗರ ತಾಲೂಕಿನ ಹೊಳಸಮುದ್ರ ಗ್ರಾಮದಲ್ಲಿ ಕುಡಿಯುವ ನೀರಿನ ಸಮಸ್ಯೆ ನಿವಾರಿಸುವ ಉದ್ದೇಶದಿಂದ ಜೆಜೆಎಂ ಯೋಜನೆಯಡಿ ಬಾವಿ ಕೊರೆಸಲಾಗಿತ್ತು. ಆದರೆ ಬಾವಿ ನಿರ್ಮಾಣಗೊಂಡು ಹಲವು ತಿಂಗಳುಗಳು ಕಳೆದರೂ ಅದರ ಮೂಲಕ ಗ್ರಾಮಸ್ಥರಿಗೆ ಯಾವುದೇ ರೀತಿಯ ನೀರಿನ ಸೌಲಭ್ಯ ಒದಗಿಸಲಾಗಿಲ್ಲ. ಸದರಿ ಬಾವಿಯಿಂದ ಇದುವರೆಗೆ ಒಂದು ಹನಿ ನೀರನ್ನು ಸಹ ಸಾರ್ವಜನಿಕ ಬಳಕೆಗೆ ನೀಡದಿರುವುದು ಗ್ರಾಮಸ್ಥರ ಅಸಮಾಧಾನಕ್ಕೆ ಕಾರಣವಾಗಿದೆ.

ಈ ಕುರಿತು ಸಂಸದ ಸಾಗರ್ ಖಂಡ್ರೆ ಅವರಿಗೆ ಸಲ್ಲಿಸಿರುವ ಮನವಿಯಲ್ಲಿ, ಯೋಜನೆಗಾಗಿ ಬಿಡುಗಡೆಯಾದ ಅನುದಾನವನ್ನು ಸಮರ್ಪಕವಾಗಿ ಬಳಸದೆ ಕಾಮಗಾರಿಯನ್ನು ಅಪೂರ್ಣವಾಗಿ ಬಿಟ್ಟಿರುವುದರಿಂದ ಸಾರ್ವಜನಿಕ ಹಣ ದುರ್ಬಳಕೆಯಾಗಿರುವ ಅನುಮಾನ ವ್ಯಕ್ತಪಡಿಸಲಾಗಿದೆ. ಆದ್ದರಿಂದ ಪ್ರಕರಣದ ಕುರಿತು ಸಮಗ್ರ ತನಿಖೆ ನಡೆಸಿ, ಸಂಬಂಧಪಟ್ಟ ಅಧಿಕಾರಿಗಳು ಹಾಗೂ ಗುತ್ತಿಗೆದಾರರ ವಿರುದ್ಧ ಸೂಕ್ತ ಕ್ರಮ ಕೈಗೊಳ್ಳುವಂತೆ ಒತ್ತಾಯಿಸಲಾಗಿದೆ.

ಅಲ್ಲದೆ, ಬಾವಿಯನ್ನು ತಕ್ಷಣ ಕಾರ್ಯರೂಪಕ್ಕೆ ತಂದು ಗ್ರಾಮಸ್ಥರಿಗೆ ಶುದ್ಧ ಕುಡಿಯುವ ನೀರಿನ ಸೌಲಭ್ಯ ಕಲ್ಪಿಸಬೇಕು ಎಂದು ಮನವಿಯಲ್ಲಿ ಆಗ್ರಹಿಸಲಾಗಿದೆ.

ಜನರ ದಾಹ ನೀಗಿಸಲು ಜಾರಿಗೆ ತಂದ ಯೋಜನೆಯೇ ಈಗ ಪ್ರಶ್ನೆಗಳ ಸುಳಿಯಲ್ಲಿ ಸಿಲುಕಿದ್ದು, ಸಂಬಂಧಪಟ್ಟ ಅಧಿಕಾರಿಗಳು ಶೀಘ್ರ ಕ್ರಮ ಕೈಗೊಂಡು ಗ್ರಾಮಸ್ಥರ ಸಮಸ್ಯೆಗೆ ಪರಿಹಾರ ಕಲ್ಪಿಸಬೇಕೆಂಬುದು ಸಾರ್ವಜನಿಕರ ಆಗ್ರಹವಾಗಿದೆ.

ಈ ಸಂದರ್ಭದಲ್ಲಿ ಪ್ರಭು ಶಿರಗಿರೆ, ಪ್ರದೀಪ ಪಾಟೀಲ್, ಪ್ರಭು ಬೆಣ್ಣೆ, ಅನೀಲ ಬೀರಗೆ ಹಾಗೂ ಸಂದೀಪ ಬಿರಾದಾರ ಉಪಸ್ಥಿತರಿದ್ದರು.

# ರಹೀಂಖಾನ್‌ರಿಗೆ ಸಚಿವ ಸ್ಥಾನ ನಿಯೋಗದಿಂದ ಇಂದು ವರಿಷ್ಠರ ಭೇಟಿ

ಕನ್ನಡ ಮಾತೃ ಭೂಮಿ ವಾರ್ತೆ

**ಬೀದರ್,**ಶಾಸಕ ರಹೀಂಖಾನ್ ಅವರಿಗೆ ರಾಜ್ಯದ ನೂತನ ಸರ್ಕಾರದಲ್ಲಿ ಸಂಪುಟ ದರ್ಜೆ ಸಚಿವ ಸ್ಥಾನ ನೀಡುವ ಸಂಬಂಧ ಜಿಲ್ಲೆಯ ಕ್ರೈಸ್ತ ಮುಖಂಡರ ನಿಯೋಗ ಬೆಂಗಳೂರಿನಲ್ಲಿ ಭಾನುವಾರ ಜೂನ್ 21ರಂದು ಕಾಂಗ್ರೆಸ್ ವರಿಷ್ಠರನ್ನು ಭೇಟಿ ಮಾಡಲಿದೆ. ಬೆಂಗಳೂರಿನಲ್ಲಿ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ್ ಖರ್ಗೆ, ಪ್ರಧಾನ ಕಾರ್ಯದರ್ಶಿ ವೇಣುಗೋಪಾಲ್, ರಾಜ್ಯ ಉಸ್ತುವಾರಿ ರಣದೀಪ್‌ಸಿಂಗ್ ಸುರ್ಜೆವಾಲಾ,

ಕೆಪಿಸಿಸಿ ಅಧ್ಯಕ್ಷ ಬಿ.ಕೆ. ಹರಿಪ್ರಸಾದ್ ಹಾಗೂ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರನ್ನು ಭೇಟಿಯಾಗಿ ಮನವಿ ಪತ್ರ ಸಲ್ಲಿಸಲಾಗುವುದು ಎಂದು ಇಂಡಿಯನ್ ಕ್ರಿಶ್ಚಿಯನ್ ವೆಲ್‌ಫೇರ್ ಅಸೋಸಿಯೇಷನ್ ರಾಜ್ಯ ಅಧ್ಯಕ್ಷ ಸಂಜಯ್ ಜಾಗೀರದಾರ್ ಅವರು ತಿಳಿಸಿದ್ದಾರೆ.

ರಹೀಂಖಾನ್ ಅವರು ಕ್ರೈಸ್ತ ಸಮುದಾಯ ಸೇರಿದಂತೆ ಸರ್ವ ಸಮುದಾಯಗಳ ಜನರ ಬಗ್ಗೆ ಅಪಾರ ಕಾಳಜಿ ಹೊಂದಿದ್ದಾರೆ. ಎಲ್ಲ ಸಮುದಾಯದವರ ಆಶೀರ್ವಾದದಿಂದ ಬೀದರ್‌ನಿಂದ ನಾಲ್ಕು ಸಲ ಶಾಸಕರಾಗಿದ್ದಾರೆ.

ಎರಡು ಬಾರಿ ಸಚಿವರಾಗಿ ಉತ್ತಮ ಕೆಲಸ ಮಾಡಿದ್ದಾರೆ. ಅಭಿವೃದ್ಧಿ ಕಾರ್ಯಗಳ ಜತೆಗೆ ಸರ್ವ ಸಮುದಾಯಗಳ ಜನರ ಕಷ್ಟ, ಸುಖಗಳಲ್ಲಿ ಭಾಗಿಯಾಗಿದ್ದಾರೆ.

ಜನ ಪರ ಕಾರ್ಯಗಳಿಗಾಗಿ ಅವರಿಗೆ ಸಂಪುಟದಲ್ಲಿ ಮತ್ತೆ ಅವಕಾಶ ಕೊಡಬೇಕು. ಪಕ್ಷದ ವರಿಷ್ಠರ ತಮ್ಮ ಮನವಿಯನ್ನು ಮನ್ನಿಸುತ್ತಾರೆ ಎಂಬ ವಿಶ್ವಾಸ ಇದೆ ಎಂದು ಅವರು ಹೇಳಿಕೆಯಲ್ಲಿ ವ್ಯಕ್ತಪಡಿಸಿದ್ದಾರೆ.

ಮುಖಂಡರಾದ ಜೀವನ್ ಚಿದ್ರಿ, ಜಾಕೋಬ್ ಮುಸ್ತಾಪುರಕರ್, ಪಿಂಟು (ಜಾನ್ಸನ್), ಸೈಮನ್, ಯೇಶಪ್ಪ, ಯಶವಂತ, ಪ್ರವೀಣಕುಮಾರ್, ಜಯಕುಮಾರ್, ಜೈಶೀಲ, ಸಾಲೋಮನ್ ಮತ್ತಿತರರು ನಿಯೋಗದಲ್ಲಿ ಇರಲಿದ್ದಾರೆ ಎಂದು ಅವರು ತಿಳಿಸಿದ್ದಾರೆ.

## ಅತಿಥಿ ಶಿಕ್ಷಕರಿಗೆ ಅವಹೇಳನಕಾರಿ ಸ್ಟೇಟಸ್ ಆರೋಪ:

# ಪ್ರಭಾರ ಮುಖ್ಯ ಶಿಕ್ಷಕರ ವಿರುದ್ಧ ಕ್ರಮಕ್ಕೆ ಒತ್ತಾಯ

ಕನ್ನಡ ಮಾತೃ ಭೂಮಿ ವಾರ್ತೆ

**ಯಾದಗಿರಿ,** ಯಾದಗಿರಿ ಜಿಲ್ಲೆಯ ಅತಿಥಿ ಶಿಕ್ಷಕರ ಬಗ್ಗೆ ಸಾಮಾಜಿಕ ಜಾಲತಾಣದಲ್ಲಿ ಅವಹೇಳನಕಾರಿ ವಾಟ್ಸಪ್ ಸ್ಟೇಟಸ್ ಹಾಕಿರುವ ಆರೋಪದ ಹಿನ್ನೆಲೆಯಲ್ಲಿ ಅರಕೇರಾ (ಕೆ) ಸರ್ಕಾರಿ ಮಾದರಿ ಹಿರಿಯ ಪ್ರಾಥಮಿಕ ಶಾಲೆಯ ಪ್ರಭಾರ ಮುಖ್ಯ ಶಿಕ್ಷಕ ಶಾಂತಪ್ಪ ಯಾಳಗಿ ವಿರುದ್ಧ ಸಮಗ್ರ ತನಿಖೆ ನಡೆಸಿ ಸೂಕ್ತ ಶಿಸ್ತು ಕ್ರಮ ಕೈಗೊಳ್ಳುವಂತೆ ಕರ್ನಾಟಕ ರಾಷ್ಟ್ರ ಸಮಿತಿ ಪಕ್ಷದ ರಾಜ್ಯ ಎಸ್.ಸಿ./ಎಸ್.ಟಿ. ಘಟಕ ಹಾಗೂ ಯಾದಗಿರಿ ಜಿಲ್ಲಾ ಸಮಿತಿ ಶಾಲಾ ಶಿಕ್ಷಣ ಇಲಾಖೆಯ ಉಪ ನಿರ್ದೇಶಕರಿಗೆ (ಡಿಡಿಪಿಐ) ದೂರು ಸಲ್ಲಿಸಿದೆ.

ಯಾದಗಿರಿ ಜಿಲ್ಲೆಯ ಅತಿಥಿ ಶಿಕ್ಷಕರಿಗೆ ಸರಿಯಾಗಿ ಅರ್ಜಿ ಬರೆಯಲು ಬರುವುದಿಲ್ಲ. ಅಂತವರು ಮಕ್ಕಳಿಗೆ ಹೇಗೆ ಕಲಿಸುತ್ತಾರೆ? ಎಂಬ ಅರ್ಥ ಬರುವ ರೀತಿಯಲ್ಲಿ ವಾಟ್ಸಪ್ ಸ್ಟೇಟಸ್ ಪ್ರಕಟಿಸಿರುವುದು ಜಿಲ್ಲೆಯ ಅತಿಥಿ ಶಿಕ್ಷಕರ ಆತ್ಮಗೌರವಕ್ಕೆ ಧಕ್ಕೆ ಉಂಟುಮಾಡಿದ್ದು, ಇಡೀ ಶಿಕ್ಷಕ ಸಮುದಾಯವನ್ನು ಅವಮಾನಿಸಿದಂತಾಗಿದೆ ಎಂದು ದೂರಿನಲ್ಲಿ ಆರೋಪಿಸಲಾಗಿದೆ.

ಅಲ್ಲದೆ, ಅತಿಥಿ ಶಿಕ್ಷಕರ ನೇಮಕಾತಿಗೆ ಸಂಬಂಧಿಸಿದಂತೆ ಶಾಲೆಯಿಂದ ಪ್ರಕಟಿಸಲಾದ ನೋಟಿಸ್‌ನಲ್ಲಿಯೇ ಅರ್ಹ ಅಭ್ಯರ್ಥಿಗಳಿಂದ ಎಂಬ ಪದದ ಬದಲಿಗೆ



ಅರ್ಹ ಅರ್ಭರ್ಥಿಗಳಿಂದ ಎಂದು ಬರವಣಿಗೆ ದೋಷ ಕಂಡುಬಂದಿರುವುದನ್ನು ಉಲ್ಲೇಖಿಸಿರುವ ದೂರುದಾರರು, ಇತರರ ಬರವಣಿಗೆ ಸಾಮರ್ಥ್ಯವನ್ನು ಪ್ರಶ್ನಿಸುವ ಮುನ್ನ ತಮ್ಮ ಪ್ರಕಟಣೆಗಳಲ್ಲಿನ ಲೋಪಗಳನ್ನು ಗಮನಿಸಬೇಕಿತ್ತು ಎಂದು ಅಭಿಪ್ರಾಯಪಟ್ಟಿದ್ದಾರೆ.

ಇದರ ಜೊತೆಗೆ, ಅತಿಥಿ ಶಿಕ್ಷಕರಿಂದ ಪೊಲೀಸ್ ಇಲಾಖೆಯ ಎನ್.ಒ.ಸಿ. ತರಲು ಸೂಚಿಸಿರುವುದು ಸರ್ಕಾರದ ಮಾರ್ಗಸೂಚಿಗಳಲ್ಲಿ ಇಲ್ಲದ ಷರತ್ತಾಗಿದ್ದು, ಕೆಲ ಶಿಕ್ಷಕರ ವಿರುದ್ಧ ವೈಯಕ್ತಿಕ ದ್ವೇಷದ ಹಿನ್ನೆಲೆಯಲ್ಲಿ ಅನಗತ್ಯ ಆರೋಪಗಳನ್ನು ಮಾಡಲಾಗುತ್ತಿದೆ ಎಂಬ ಗಂಭೀರ ಆರೋಪವೂ ದೂರಿನಲ್ಲಿ ಉಲ್ಲೇಖಿಸಲಾಗಿದೆ.

ಸಾರ್ವಜನಿಕ ಸೇವೆಯಲ್ಲಿರುವ ಶಿಕ್ಷಕರು ಜವಾಬ್ದಾರಿಯುತವಾಗಿ ನಡೆದುಕೊಳ್ಳಬೇಕಾಗಿದ್ದು, ಅವರ ಮಾತು ಹಾಗೂ ವರ್ತನೆ ವಿದ್ಯಾರ್ಥಿಗಳು ಮತ್ತು ಸಮಾಜದ ಮೇಲೆ ಪರಿಣಾಮ ಬೀರುವುದರಿಂದ ಈ ಪ್ರಕರಣವನ್ನು ಶಿಕ್ಷಣ ಇಲಾಖೆ ಗಂಭೀರವಾಗಿ ಪರಿಗಣಿಸಬೇಕು ಎಂದು ಮನವಿಯಲ್ಲಿ ಒತ್ತಾಯಿಸಲಾಗಿದೆ.

ಆರೋಪಗಳು ಸಾಬೀತಾದಲ್ಲಿ ಸಂಬಂಧಪಟ್ಟ ಪ್ರಭಾರ ಮುಖ್ಯ ಶಿಕ್ಷಕರಿಂದ ಜಿಲ್ಲೆಯ ಅತಿಥಿ ಶಿಕ್ಷಕರಿಗೆ ಬಹಿರಂಗವಾಗಿ ಕ್ಷಮೆಯಾಚನೆ ಮಾಡಿಸಿ, ಇಲಾಖಾ ನಿಯಮಾನುಸಾರ ಅಗತ್ಯ ಶಿಸ್ತು ಕ್ರಮ ಕೈಗೊಳ್ಳಬೇಕು. ಇಲ್ಲದಿದ್ದರೆ ಡಿಡಿಪಿಐ ಕಚೇರಿ ಎದುರು ಪ್ರತಿಭಟನೆ ಹಮ್ಮಿಕೊಳ್ಳಲಾಗುವುದು ಎಂದು ಕರ್ನಾಟಕ ರಾಷ್ಟ್ರ ಸಮಿತಿ ಪಕ್ಷ ಎಚ್ಚರಿಕೆ ನೀಡಿದೆ.

ಈ ಸಂದರ್ಭದಲ್ಲಿ ಎಸ್.ಸಿ, ಎಸ್ಟಿ ಘಟಕ ರಾಜ್ಯ ಉಪಾಧ್ಯಕ್ಷ ಎಂ ಕ್ರಿಸ್ಟೋಫರ್ ಚಟ್ನಳ್ಳಿ, ರಾಜ್ಯ ಕಾರ್ಯದರ್ಶಿ ರಮೇಶ ಜೆ ಚವ್ಹಾಣ , ಗುರುಮಠಕಲ್ ಪರಾಜಿತ ಎಂ.ಎಲ್.ಎ ಅಭ್ಯರ್ಥಿ ಎಸ್ ನಿಜಲಿಂಗಪ್ಪ, ಜಿಲ್ಲಾ ಪ್ರಧಾನ ಕಾರ್ಯದರ್ಶಿ ಖತಾಲಸಾಬ್, ಜಗನ್ನಾಥ್ ಎಸ್ ಚಿಂತನಹಳ್ಳಿ ಜಿಲ್ಲಾಧ್ಯಕ್ಷರು ಯಾದಗಿರಿ ಯುವ ಘಟಕ ಕಾರ್ಯದರ್ಶಿ ಶಾಂತಕುಮಾರ, ಗ್ಯಾನಯ್ಯ ಮಂಜುಲ್ಕರ್, ಶಂಕರ ರಾಠೋಡ್, ಅರವಿಂದ ರಾಠೋಡ ಉಪಸ್ಥಿತರಿದ್ದರು.

# ಅಂತರಾಷ್ಟ್ರೀಯ ಯೋಗ ದಿನಾಚರಣೆ: ಜಾಥಾ ಮೂಲಕ ವಿಶೇಷ ಅರಿವು



ಕನ್ನಡ ಮಾತೃ ಭೂಮಿ ವಾರ್ತೆ

**ಕೊಪ್ಪಳ,** 12ನೇ ಅಂತರಾಷ್ಟ್ರೀಯ ಯೋಗ ದಿನಾಚರಣೆಯ ಅಂಗವಾಗಿ ಕೊಪ್ಪಳ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಆಯುಷ್ ಇಲಾಖೆ ಹಾಗೂ ಜಿಲ್ಲೆಯ ಸರ್ವಯೋಗ ಸಂಸ್ಥೆಗಳ ಸಹಯೋಗದಲ್ಲಿ ಶನಿವಾರ (ಜೂ. 20ರಂದು) ಕೊಪ್ಪಳ ಜಿಲ್ಲಾ ಕೇಂದ್ರದಲ್ಲಿ ಹಮ್ಮಿಕೊಳ್ಳಲಾದ ಯೋಗ ಜಾಥಾ ಮೂಲಕ ವಿಶೇಷ ಅರಿವು ಮೂಡಿಸಲಾಯಿತು.

ಕೊಪ್ಪಳ ನಗರದ ಶ್ರೀ ಗವಿಮಠ ಆವರಣದಿಂದ ನಡೆದ ಯೋಗ ಜಾಥಾ ಕಾರ್ಯಕ್ರಮಕ್ಕೆ ಜಿಲ್ಲಾ ಆಯುಷ್ ಅಧಿಕಾರಿಗಳಾದ ಡಾ. ಪಿ.ಬಿ.ಹಿರೇಗೌಡರ ಅವರು ಪತಂಜಲಿ ರವರ ಭಾವಚಿತ್ರಕ್ಕೆ ಪುಷ್ಪ ನಮನ ಸಲ್ಲಿಸಿ, ನಂತರ ಹಸಿರು ನಿಶಾನೆ ತೋರಿಸುವುದರ ಮೂಲಕ ಚಾಲನೆ ನೀಡಿದರು.

ಬಳಿಕ ಅವರು ಮಾತನಾಡಿ, ಜೂನ್ 21ರಂದು ಭಾರತ ದೇಶಾದ್ಯಂತ ಮತ್ತು ಜಗತ್ತಿನ 177 ರಾಷ್ಟ್ರಗಳಲ್ಲಿ ಅಂತರಾಷ್ಟ್ರೀಯ ಯೋಗ ದಿನಾಚರಣೆಯನ್ನು ಆಚರಿಸಲಾಗುತ್ತಿದೆ. ಈ ವರ್ಷದ ಘೋಷವಾಕ್ಯವು ''ಆರೋಗ್ಯಕರ ವೃದ್ಧಾಪ್ಯಕ್ಕಾಗಿ ಯೋಗ'' ಎಂಬುವುದಾಗಿದ್ದು, ಇದರ ಭಾಗವಾಗಿ ಇಂದು ಜಿಲ್ಲಾ ಆಯುಷ್ ಇಲಾಖೆ, ಜಿಲ್ಲೆಯ ವಿವಿಧ ಆಯುರ್ವೇಧ ಮಹಾವಿದ್ಯಾಲಯಗಳು ಮತ್ತು ಸರ್ವಯೋಗ ಸಂಸ್ಥೆಗಳ ಸಹಯೋಗದಲ್ಲಿ ಯೋಗಾ ಜಾಥಾ ಮೂಲಕ ಸಾರ್ವಜನಿಕರಲ್ಲಿ ಯೋಗದ ಮಹತ್ವದ ಕುರಿತು ಅರಿವು ಮೂಡಿಸಲಾಗುತ್ತಿದೆ. ಜಿಲ್ಲೆಯಲ್ಲಿ ಕಳೆದ ಸುಮಾರು 400 ದಿನಗಳಿಂದ ''ಯೋಗ ಭಾರತ-365'' ಕಾರ್ಯಕ್ರಮವನ್ನು ಪ್ರತಿನಿತ್ಯ ಬೆಳಿಗ್ಗೆ 5.30 ರಿಂದ 7 ಗಂಟೆಯವರೆಗೆ ಆಚರಿಸುತ್ತಿರುವುದು ಇಡೀ ರಾಜ್ಯಾದ್ಯಂತ ಹೆಸರು ಮಾಡಿದೆ ಎಂದು ಹೇಳಿದರು.

ಈ ಸಂದರ್ಭದಲ್ಲಿ ಕೊಪ್ಪಳ ಜಿಲ್ಲಾ ತರಬೇತಿ ಸಂಸ್ಥೆಯ ಪ್ರಾಚಾರ್ಯರಾದ ಕೃಷ್ಣಮೂರ್ತಿ ದೇಸಾಯಿ, ಶ್ರೀ ಗವಿಸಿದ್ದೇಶ್ವರ ಆಯುರ್ವೇಧ ಮಹಾವಿದ್ಯಾಲಯದ ಪ್ರಾಶುಂಪಾಲರಾದ ಡಾ. ಸಾಲಿಮಠ, ಕೊಪ್ಪಳ ಜಿಲ್ಲೆಯ ಆಯುಷ್ ವೈದ್ಯಾಧಿಕಾರಿಗಳಾದ ಡಾ. ಯಮನಪ್ಪ ಶಿರವಾರ, ಡಾ. ಗುರುರಾಜ್ ಉಮಚಗಿ, ಡಾ. ವಿ.ಆರ್ ತಾಳಿಕೋಟಿ, ಡಾ. ಶರಣಪ್ಪ ಹೈದ್ರಿ, ಡಾ. ರಾಜಶೇಖರ ನಾರಿನಾಳ, ಡಾ. ಕವಿತಾ ಹೆಚ್.ಎಫ್. ಹಾಗೂ ಇತರೆ ವೈದ್ಯಾಧಿಕಾರಿಗಳು, ಶ್ರೀ ಗವಿಸಿದ್ದೇಶ್ವರ, ನಿಂಗೋಜಿ ಮತ್ತು ಅಗಸ್ತ್ಯೆ ಆಯುರ್ವೇಧ ಮಹಾವಿದ್ಯಾಲಯ ವೈದ್ಯಾಧಿಕಾರಿಗಳು ಹಾಗೂ ಪ್ರಾಧ್ಯಾಪಕರು ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು, ಆಯುಷ್ ಇಲಾಖೆ ಸಿಬ್ಬಂದಿ, ಸರ್ವಯೋಗ ಸಂಸ್ಥೆಗಳ ಪ್ರತಿನಿಧಿಗಳು ಹಾಗೂ ಮತ್ತಿತರರು ಉಪಸ್ಥಿತರಿದ್ದರು.

ಗಮನ ಸೆಳೆದ ಯೋಗ ಜಾಥ: ಯೋಗ ಜಾಥವು ಶ್ರೀ ಗವಿಮಠದ ಆವರಣದಿಂದ ಪ್ರಾರಂಭಗೊಂಡು ಗಡಿಯಾರ ಕಂಬದಿಂದ ಅಶೋಕ ಸರ್ಕಲ್ ಮೂಲಕ ತಾಲೂಕು ಕ್ರೀಡಾಂಗಣದವರೆಗೆ ನಡೆಯಿತು. ಜಾಥದಲ್ಲಿ ಶ್ರೀ ಗವಿಸಿದ್ದೇಶ್ವರ ಆಯುರ್ವೇಧ ಮಹಾವಿದ್ಯಾಲಯ, ನಿಂಗೋಜಿ ಆಯುರ್ವೇಧ ಮಹಾವಿದ್ಯಾಲಯ, ಅಗಸ್ತ್ಯೆ ಆಯುರ್ವೇಧ ಮಹಾವಿದ್ಯಾಲಯದ ವಿದ್ಯಾರ್ಥಿಗಳು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಂಡಿದ್ದರು. ಜಾಥದಲ್ಲಿ ಯೋಗ ಮಾಡಿ ಸದಾ ನಗುನಗುತ್ತಾ ಇರಿ, ಯೋಗ ಅಳವಡಿಸೋಣ ಸುಂದರ ಜೀವನ ಕಟ್ಟೋಣ, ಯೋಗ ನಮ್ಮ ಸಂಸ್ಕೃತಿ- ಆರೋಗ್ಯ ನಮ್ಮ ಹಕ್ಕು, ಯೋಗಕ್ಕೆ ಕೈ ಜೋಡಿಸಿ ಆರೋಗ್ಯದತ್ತ ಹೆಜ್ಜೆ ಇಡಿ, ಹೀಗೆ ಯೋಗದ ಮಹತ್ವವನ್ನು ಸಾರುವ ಇತರೆ ಸಂದೇಶ ಫಲಕಗಳು ಎಲ್ಲರ ಗಮನ ಸೆಳೆದವು.

# ಹೊಸ ಕಾರ್ಮಿಕ ಸಂಹಿತೆ-2025 ಜಾಗೃತಿ ಕಾರ್ಯಾಗಾರ



ಕನ್ನಡ ಮಾತೃ ಭೂಮಿ ವಾರ್ತೆ

**ಬಳ್ಳಾರಿ,**ಬಳ್ಳಾರಿ ಜಿಲ್ಲಾ ವಾಣಿಜ್ಯ ಮತ್ತು ಕೈಗಾರಿಕಾ ಸಂಸ್ಥೆ ಹಾಗೂ ಮಿತ್ರಾ ಟೆಕ್ನಾಲಜೀಸ್ ಅವರ ಜಂಟಿ ಆಶ್ರಯದಲ್ಲಿ 'ಹೊಸ ಕಾರ್ಮಿಕ ಸಂಹಿತೆ-2025'ರ ಜಾಗೃತಿ ಕಾರ್ಯಾಗಾರವು ಬಳ್ಳಾರಿ ಜಿಲ್ಲಾ ವಾಣಿಜ್ಯ ಮತ್ತು ಕೈಗಾರಿಕಾ ಸಂಸ್ಥೆಯ ಸಭಾಂಗಣದಲ್ಲಿ ಶನಿವಾರ ನಡೆಯಿತು.

ಇಎಸ್‌ಐಸಿನ ನಿವೃತ್ತ ಅಧಿಕಾರಿ ಶೇಖ್ ಹನೀಫ್ ಅವರು, ಇಎಸ್‌ಐಸಿ ಮತ್ತು ಇಪಿಎಫ್‌ಒಗಳ ಹೊಸ ನಿಯಮಗಳು ಮತ್ತು ಉದ್ಯೋಗಿಗಳ ಸಾಮಾಜಿಕ ಭದ್ರತೆ, ಕಾನೂನುಬದ್ಧ ಸೌಲಭ್ಯಗಳು ಹಾಗೂ ವೇತನ ಪಾವತಿಯ ದಾಖಲೆಗಳ ನಿರ್ವಹಣಾ ವ್ಯವಸ್ಥೆಯ ಕುರಿತು ಸಮಗ್ರ ಮಾಹಿತಿ ನೀಡಿದರು.

ಬಳ್ಳಾರಿ ಜಿಲ್ಲಾ ವಾಣಿಜ್ಯ ಮತ್ತು ಕೈಗಾರಿಕಾ ಸಂಸ್ಥೆಯ ಅಧ್ಯಕ್ಷರಾದ ಅವ್ವಾರ್ ಮಂಜುನಾಥ್ ಅವರು, ಸ್ವಾಗತಿಸಿ, ಪ್ರಾಸ್ತಾವಿಕವಾಗಿ ಮಾತನಾಡಿ, ಹೊಸ ಕಾರ್ಮಿಕ ಸಂಹಿತೆ-2025ರ ಕುರಿತು ಕೈಗಾರಿಕಾ ಮತ್ತು ಉದ್ಯೋಗ ಕ್ಷೇತ್ರದಲ್ಲಿ ಇರುವ ಮಾನವ ಸಂಪನ್ಮೂಲ ವಿಭಾಗದ ಪ್ರತಿಯೊಬ್ಬರೂ ತಿಳಿದುಕೊಂಡು, ಅರ್ಥ ಮಾಡಿಕೊಳ್ಳಬೇಕು. ಈ ಮೂಲಕ ಕೆಲಸಗಾರರಿಗೆ ಹೆಚ್ಚಿನ ಪ್ರಮಾಣದಲ್ಲಿ ಕೇಂದ್ರ ಸರ್ಕಾರದ ಸೌಲಭ್ಯಗಳು ಸಿಗುವಂತೆ ಮುಂಜಾಗ್ರತೆಗಳನ್ನು ಕೈಗೊಳ್ಳಲು ಅನುಕೂಲವಾಗಲಿದೆ ಎಂದರು.

ಅಷ್ಟೇ ಅಲ್ಲ, ಕೆಲಸಗಾರರ ಸಾಮಾಜಿಕ ಭದ್ರತೆ, ಕಾನೂನುಬದ್ಧ ಸೌಲಭ್ಯಗಳು ಹಾಗೂ ಉತ್ತಮವಾದ ಆಡಳಿತವನ್ನು ಪಾಲನೆ ಮಾಡಲು ಅನುಕೂಲವಾಗಲಿದೆ. ಈ ನಿಟ್ಟಿನಲ್ಲಿ ಕೇಂದ್ರ ಸರ್ಕಾರದ 'ಹೊಸ ಕಾರ್ಮಿಕ ಸಂಹಿತೆ-2025' ಅನ್ನು ಪ್ರತಿಯೊಂದು ಸಂಸ್ಥೆಯೂ ಪಾಲನೆ ಮಾಡಬೇಕು ಎಂದರು.

ಬಳ್ಳಾರಿ ಜಿಲ್ಲಾ ವಾಣಿಜ್ಯ ಮತ್ತು ಕೈಗಾರಿಕಾ ಸಂಸ್ಥೆಯ ಗೌರವ ಕಾರ್ಯದರ್ಶಿಗಳಾದ ಕೆ.ಸಿ. ಸುರೇಶಬಾಬು ಅವರು ವಂದನಾರ್ಪಣೆ ಸಲ್ಲಿಸಿದರು.

ಬಳ್ಳಾರಿ ಜಿಲ್ಲಾ ವಾಣಿಜ್ಯ ಮತ್ತು ಕೈಗಾರಿಕಾ ಸಂಸ್ಥೆಯ ಹಿರಿಯ ಉಪಾಧ್ಯಕ್ಷರಾದ ಎಸ್. ದೊಡ್ಡನಗೌಡ, ಉಪಾಧ್ಯಕ್ಷರಾದ ಸೊಂತಾ ಗಿರಿಧರ್, ಜಂಟಿ ಕಾರ್ಯದರ್ಶಿಗಳಾದ, ಡಾ. ಮರ್ಚೇಡ್ ಮಲ್ಲಿಕಾರ್ಜುನಗೌಡ, ವಿ. ರಾಮಚಂದ್ರ, ಖಜಾಂಚಿಗಳಾದ ಸಿ.ಎಸ್. ಸತ್ಯನಾರಾಯಣ, ಈವೆಂಟ್ಸ್ ಕಮಿಟಿ ಚೇರ್ಮನ್ ನೇಕಾರ್ ನಾಗರಾಜ್, ಪತ್ರಿಕಾ ಹಾಗೂ ಮಾಧ್ಯಮ ಕಮಿಟಿ ಚೇರ್ಮನ್ ಟಿ. ಶ್ರೀನಿವಾಸರಾವ್, ಮ್ಯಾಗ್ಜಿನ್ ಕಮಿಟಿ ಚೇರ್ಮನ್ ಕೌಡಕಿ ಹನುಮೇಶ್, ಬುಸ್ಮಾದ ಮರಿಸ್ವಾಮಿರೆಡ್ಡಿ, ಖಾಸಗಿ ಶಾಲೆಗಳ ಮಾನವ ಸಂಪನ್ಮೂಲ ವಿಭಾಗದ ಮುಖ್ಯಸ್ಥರು, ವಿವಿಧ ಕೈಗಾರಿಗಳು - ಸಂಘ ; ಸಂಸ್ಥೆಗಳ ಮುಖ್ಯಸ್ಥರು ಈ ಕಾರ್ಯಾಗಾರದಲ್ಲಿ ಪಾಲ್ಗೊಂಡಿದ್ದರು.

### ಬಳ್ಳಾರಿಯಲ್ಲಿ ನಶಾ ಮುಕ್ತ ಭಾರತ ಅಭಿಯಾನ : ಮಾದಕ ದ್ರವ್ಯ ವಿರೋಧಿ ಜಾಗೃತಿ ಜಾಥಾ

## ಆರೋಗ್ಯವಂತ ಸಮಾಜ ನಿರ್ಮಾಣ ನಮ್ಮೆಲ್ಲರ ಜವಾಬ್ದಾರಿ - ನ್ಯಾ.ಹೊಸಮನೆ

ಕನ್ನಡ ಮಾತೃ ಭೂಮಿ ವಾರ್ತೆ

**ಬಳ್ಳಾರಿ,** ಮಾದಕ ಮುಕ್ತ ಹಾಗೂ ಆರೋಗ್ಯವಂತ ಸಮಾಜದ ನಿರ್ಮಾಣ ಮಾಡುವುದು ನಮ್ಮೆಲ್ಲರ ಆದ್ಯ ಕರ್ತವ್ಯ ಮತ್ತು ಜವಾಬ್ದಾರಿಯಾಗಿದೆ ಎಂದು ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಹಾಗೂ ಹಿರಿಯ ಸಿವಿಲ್ ನ್ಯಾಯಾಧೀಶರಾದ ರಾಜೇಶ್ ಎನ್. ಹೊಸಮನೆ ಅವರು ತಿಳಿಸಿದ್ದಾರೆ.



ಕೇಂದ್ರ ಸರ್ಕಾರದ ನಶಾ ಮುಕ್ತ ಭಾರತ ಅಭಿಯಾನ' ದ ಅಂಗವಾಗಿ ಬಳ್ಳಾರಿ ಜಿಲ್ಲಾ ಪೊಲೀಸ್ ಹಾಗೂ ಬಳ್ಳಾರಿ ಜಿಲ್ಲಾ ನರ್ಸಿಂಗ್ ಅಸೋಸಿಯೇಷನ್ ಜಂಟಿಯಾಗಿ ನಗರದ ಬಿಎಂಸಿಆರ್‌ಸಿ ಮೈದಾನದಲ್ಲಿ ಶನಿವಾರ ಹಮ್ಮಿಕೊಂಡಿದ್ದ ಜಾಗೃತಿ ಕಾರ್ಯಕ್ರಮದಲ್ಲಿ ಭಾಗವಹಿಸಿ ಅವರು ಮಾತನಾಡಿದರು.

ಇಂದಿನ ದಿನಗಳಲ್ಲಿ ದೇಶದ ಯುವಶಕ್ತಿಯು ಮಾದಕ ವ್ಯಸನಗಳ ಜಾಲಕ್ಕೆ ಸಿಲುಕಿ ತತ್ತರಿಸುತ್ತಿರುವುದು ಆತಂಕಕಾರಿ ಸಂಗತಿಯಾಗಿದೆ. ಯುವಜನತೆಯನ್ನು ಈ ಮಾರಕ ಜಾಲದಿಂದ ರಕ್ಷಿಸುವುದು ಇಂದಿನ ತುರ್ತು ಅಗತ್ಯವಾಗಿದೆ ಎಂದು ಪ್ರತಿಪಾದಿಸಿದರು.

ಯುವಶಕ್ತಿ ದೇಶದ ಬೆನ್ನೆಲುಬು. ಅವರು ದಾರಿ ತಪ್ಪದಂತೆ ನೋಡುವುದು ಮತ್ತು ಮಾದಕ ದ್ರವ್ಯಗಳ ಮುಕ್ತ ಸಮಾಜವನ್ನು ನಿರ್ಮಿಸುವುದು ಕೇವಲ ಕಾನೂನು ಸಂಸ್ಥೆಗಳ ಕೆಲಸವಲ್ಲ, ಅದು ಇಡೀ ಸಮಾಜದ ಹೊಣೆಯಾಗಿದೆ ಎಂದು ಅವರು ಕರೆ ನೀಡಿದರು.

ಸಮಾಜದಲ್ಲಿ ಮಾದಕ ವಸ್ತುಗಳ ದುಷ್ಪರಿಣಾಮಗಳ ಕುರಿತು ವ್ಯಾಪಕ ಜಾಗೃತಿ ಮೂಡಿಸುವ ಅಗತ್ಯವಿದ್ದು, ಪ್ರತಿಯೊಬ್ಬರೂ ಈ ನಿಟ್ಟಿನಲ್ಲಿ ಕೈಜೋಡಿಸಬೇಕು ಎಂದು ಅವರು ತಿಳಿಸಿದರು.

ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ. ಸುಮನ್ ಡಿ. ಪೆನ್ನೇಕರ್ ಅವರು ಮಾತನಾಡಿ, ವ್ಯಸನ ಮುಕ್ತ ಭಾರತವನ್ನು ಕಟ್ಟಲು ಪ್ರತಿಯೊಬ್ಬ ನಾಗರಿಕರು ಕೈಜೋಡಿಸಬೇಕು ಮತ್ತು ಯಾವುದೇ ರೀತಿಯ ಅಕ್ರಮ ಮಾದಕ ದ್ರವ್ಯಗಳ ಜಾಲ ಕಂಡುಬಂದಲ್ಲಿ ಸಾರ್ವಜನಿಕರು ತಕ್ಷಣವೇ ಪೊಲೀಸರಿಗೆ ಮಾಹಿತಿ ನೀಡಬೇಕು ಎಂದು ಕರೆ ನೀಡಿದರು.

ಮಾದಕ ದ್ರವ್ಯಗಳ ಹಾವಳಿ ಸಮಾಜವನ್ನು ಮತ್ತು ಯುವ ಪೀಳಿಗೆಯನ್ನು ತಪ್ಪು ದಾರಿಗೆ ಎಳೆಯುತ್ತಿದೆ. ಈ ಪಿಡುಗನ್ನು ಬುಡಸಮೇತ ಕಿತ್ತೆಸೆಯಲು ಕೇವಲ ಪೊಲೀಸ್ ಇಲಾಖೆಯ ಶ್ರಮ ಮಾತ್ರ ಸಾಲದು, ಸಾರ್ವಜನಿಕರ ಸಹಭಾಗಿತ್ವವೂ ಅತ್ಯಂತ ಅಗತ್ಯವಾಗಿದೆ ಎಂದರು.

ಮಾದಕ ದ್ರವ್ಯಗಳ ದುಷ್ಪರಿಣಾಮಗಳ ಬಗ್ಗೆ ಪ್ರತಿಯೊಬ್ಬರೂ ತಮ್ಮ ಸುತ್ತಮುತ್ತಲಿನವರಲ್ಲಿ ಜಾಗೃತಿ ಮೂಡಿಸಬೇಕು.

ಜಿಲ್ಲೆಯಲ್ಲಿ ಎಲ್ಲೇ ಆದರೂ ಅಕ್ರಮ ಗಾಂಜಾ, ಡ್ರಗ್ಸ್ ಮಾರಾಟ ಅಥವಾ ಸಾಗಾಟ ಕಂಡುಬಂದಲ್ಲಿ ನಾಗರಿಕರು ನಿರ್ಭೀತಿಯಿಂದ ಪೊಲೀಸ್ ಇಲಾಖೆಗೆ ಮಾಹಿತಿ ನೀಡಬಹುದು ಎಂದರು.

ಮಾಹಿತಿ ನೀಡುವ ಸಾರ್ವಜನಿಕರ ಹೆಸರನ್ನು ಯಾವುದೇ ಕಾರಣಕ್ಕೂ ಬಹಿರಂಗಪಡಿಸದೆ, ಗೌಪ್ಯವಾಗಿಡಲಾಗುವುದು ಎಂದು ಅವರು ಭರವಸೆ ನೀಡಿದ ಅವರು, ಯುವಜನತೆ ಇಂತಹ ದುಶ್ಚಟಗಳಿಗೆ ಬಲಿಯಾಗದಂತೆ ಪೋಷಕರು ಸಹ ತಮ್ಮ ಮಕ್ಕಳ ದಿನನಿತ್ಯದ ಚಟುವಟಿಕೆಗಳ ಮೇಲೆ ನಿಗಾ ಇಡಬೇಕು ಎಂದು ಮನವಿ ಮಾಡಿದರು.

ಇದೇ ವೇಳೆ ಮಾದಕ ವಸ್ತುಗಳಿಂದ ದೂರವಿರುತ್ತೇನೆ ಎಂಬ ಪ್ರತಿಜ್ಞಾ ವಿಧಿಯನ್ನು ಸ್ವೀಕಾರ ಮಾಡಲಾಯಿತು.

**ಜಾಗೃತಿ ಜಾಥಾಕ್ಕೆ ಚಾಲನೆ:**

ಅಂತರರಾಷ್ಟ್ರೀಯ ಮಾದಕ ದ್ರವ್ಯ ದುರುಪಯೋಗ ಮತ್ತು ಅಕ್ರಮ ಸಾಗಾಟ ವಿರೋಧಿ ದಿನದ ಅಂಗವಾಗಿ ಹಮ್ಮಿಕೊಳ್ಳಲಾಗಿದ್ದ ವಿಶೇಷ ಜಾಗೃತಿ ಜಾಥಾಕ್ಕೆ ಹಸಿರು ನಿಶಾನೆ ತೋರಿಸುವ ಮೂಲಕ ಗಣ್ಯರು ಚಾಲನೆ ನೀಡಿದರು.

ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ನವೀನ್ ಕುಮಾರ್, ಅಬಕಾರಿ ಇಲಾಖೆಯ ಉಪ ಆಯುಕ್ತ ಮಂಜುನಾಥ, ಬಳ್ಳಾರಿ ನಗರ ಡಿವೈಎಸ್‌ಪಿ ಗೋವಿಂದ ರಾಜು, ಜಿಲ್ಲಾ ನರ್ಸಿಂಗ್ ಅಸೋಸಿಯೇಷನ್ ಪದಾಧಿಕಾರಿಗಳು ಸೇರಿದಂತೆ ಜಾಥಾದಲ್ಲಿ ನರ್ಸಿಂಗ್ ಕಾಲೇಜಿನ ನೂರಾರು ವಿದ್ಯಾರ್ಥಿಗಳು, ಪೊಲೀಸ್ ಅಧಿಕಾರಿಗಳು ಹಾಗೂ ಸಿಬ್ಬಂದಿಗಳು, ಸಾರ್ವಜನಿಕರು ಭಾಗವಹಿಸಿದ್ದರು.

ಜಾಥಾವು ಬಿಎಂಸಿಆರ್‌ಸಿ ಮೈದಾನದಿಂದ ಆರಂಭಗೊಂಡು ಸುಧಾ ಕ್ರಾಸ್ ವೃತ್ತ, ಇನ್‌ಫ್ಯಾಂಟರಿ ರಸ್ತೆ, ಎಸ್‌ಪಿ ವೃತ್ತ, ಕನಕ ದುರ್ಗಮ್ಮ ದೇವಸ್ಥಾನದ ವೃತ್ತದ ಮೂಲಕ ಎಸ್‌ಪಿ ಕಚೇರಿ ಆವರಣಕ್ಕೆ ತಲುಪಿ ಅಂತ್ಯಗೊಂಡಿತು.

**ಆಕರ್ಷಕ ಕಲಾಕೃತಿಗಳ ಪ್ರದರ್ಶನ:**

ವಿದ್ಯಾರ್ಥಿಗಳು ಮಾದಕ ದ್ರವ್ಯಗಳ ದುಷ್ಪರಿಣಾಮಗಳನ್ನು ಬಿಂಬಿಸುವ ವಿವಿಧ ಫಲಕಗಳನ್ನು ಹಿಡಿದು ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸಿದರು. ವಿಶೇಷವಾಗಿ, ಧೂಮಪಾನ ಮತ್ತು ಮಾದಕ ದ್ರವ್ಯಗಳು ಮನುಷ್ಯನ ಜೀವಕ್ಕೆ ಹೇಗೆ ಕಂಟಕವಾಗುತ್ತವೆ ಎಂಬುದನ್ನು ತೋರಿಸುವ ಡ್ರಗ್ಸ್ ಜೀವವನ್ನು ನಾಶಪಡಿಸುತ್ತವೆ'ಎಂಬ ಸಂದೇಶವುಳ್ಳ ತಲೆಬುರುಡೆಯ ಆಕೃತಿಯು ಎಲ್ಲರ ಗಮನ ಸೆಳೆಯಿತು.

## ಅಳವಂಡಿ ಪೊಲೀಸ್ ಠಾಣೆಯಲ್ಲಿ ದೌರ್ಜನ್ಯ ಆರೋಪ: ಕ್ರಮಕ್ಕೆ ಒತ್ತಾಯ

ಕನ್ನಡ ಮಾತೃ ಭೂಮಿ ವಾರ್ತೆ

**ಕೊಪ್ಪಳ,** ತಾಲೂಕಿನ ಅಳವಂಡಿ ಪೊಲೀಸ್ ಠಾಣೆಯ ಪಿಎಸ್‌ಐ ಪ್ರಹ್ಲಾದ್ ನಾಯಕ್ ಮತ್ತು ಠಾಣಾ ಕಾನಿಸ್ಟೇಬಲ್ ರವರು ವಿಚಾರಣೆ ನೆನಪದಲ್ಲಿ ತೀವ್ರ ತೊಂದರೆ ಉಂಟು ಮಾಡಿ ಅವಾಚ್ಯ ಶಬ್ದಗಳಿಂದ ಬೈದು ನಮಗೆ ಹಿಂಸೆ ನೀಡಿದ್ದಾರೆಂದು ಬೋಚನಹಳ್ಳಿ ಗ್ರಾಮದ ಯಲ್ಲಪ್ಪ ಮೇಟಿ ಮತ್ತು ಬಸವರಾಜ್ ಬಂಡಿ ರವರು ಜಂಟಿಯಾಗಿ ಆರೋಪಿಸಿ ಅವರ ವಿರುದ್ಧ ದೂರು ನೀಡಿ ಕ್ರಮಕ್ಕೆ ಒತ್ತಾಯಿಸಿದ್ದಾರೆ.



ಈ ಕುರಿತು ಶನಿವಾರದಂದು ನಗರದ ಪತ್ರಿಕಾ ಭವನದಲ್ಲಿ ಏರ್ಪಡಿಸಿದ ಸುದ್ದಿಗೋಷ್ಠಿಯಲ್ಲಿ ಮಾಧ್ಯಮದೊಂದಿಗೆ ಮಾತನಾಡಿ ಆರೋಪಿಸಿ ಅವರ ವಿರುದ್ಧ ಇಲಾಖೆಗೆ ಮತ್ತು ಸರ್ಕಾರಕ್ಕೆ ದೂರು ನೀಡಿ ಒತ್ತಾಯಿಸಿದ್ದಾರೆ.

ಕಾನೂನು ವಿಧ್ಯಾರ್ಥಿಗಳಾದ ಯಲ್ಲಪ್ಪ ತಂದೆ ಸುರೇಶಪ್ಪ ಮೇಟಿ (ಅಂಗವಿಕಲ) ವಯಸ್ಸು : 26, ವಿಳಾಸ : ಬೋಚನಹಳ್ಳಿ ಮತ್ತು ಬಸವರಾಜ ತಂದೆ ಗೋಣೆಪ್ಪ ಬಂಡಿ ವಯಸ್ಸು : 26, ವಿಳಾಸ : ಬೋಚನಹಳ್ಳಿ, ರವಿವಾರ 14-ರಂದು ರಾತ್ರಿ 8:30 ಕ್ಕೆ ಅಳವಂಡಿಯ ಪೊಲೀಸ್ ಠಾಣೆಗೆ ಹೋಗಿದ್ದೆವು ಕಾರಣ ನನ್ನ ಸ್ನೇಹಿತನಾದ ಮರಿತಿಮ್ಮಪ್ಪನನ್ನು ಸಿವಿಲ್ ವ್ಯಾಜ್ಯಕ್ಕೆ ಸಂಬಂಧಿಸಿದಂತೆ ನೋಟಿಸ್ ಕೊಡದೆ ಕರೆದುಕೊಂಡು ಹೊಗಿದ್ದರು, ಇದನ್ನು ಪ್ರಶ್ನೆ ಮಾಡಲು ನಾವುಗಳು ಠಾಣೆಗೆ ಹೋದಾಗ ಮರಿತಿಮ್ಮಪ್ಪನ ಮೇಲೆ ಠಾಣೆಯಲ್ಲಿ ಹಲ್ಲೆ ಮಾಡಿದ್ದರು. ಈ ಘಟನೆಯನ್ನು ಯಲ್ಲಪ್ಪರವರು ತಮ್ಮ ಮೋಬೈಲ್ ನಲ್ಲಿ ಸೆರೆಹಿಡಿಯುತ್ತಿದ್ದರು ಅದನ್ನು ಗಮನಿಸಿದ ಪಿ.ಎಸ್. ಐ ಪ್ರಹ್ಲಾದ್ ನಾಯಕ್ ರವರು ಮೊಬೈಲ್ ಕಸಿದುಕೊಂಡು, ಅವಾಚ್ಯ ಶಬ್ದಗಳಿಂದ ನಿಂದಿಸಿ ಅಂಗವಿಕಲನಾದ ಯಲ್ಲಪ್ಪರವರ ಮೇಲೆ ಮನಬಂದಂತೆ ದೈಹಿಕ ಹಲ್ಲೆ ನಡೆಸಿದರು, ಹೊಡೆಯುವ ಹಕ್ಕು ನಿಮಗೆ ಇಲ್ಲಾ ಎಂದು ಪ್ರಶ್ನಿಸಿದ ಬಸವರಾಜನ ಮೇಲೂ ಏಕಾಏಕಿ ಕಾನಸ್ಟೇಬಲ್‌ಗಳು ಹಲ್ಲೆ ನಡೆಸಿದರು ಮತ್ತು ರೂಮಿನಲ್ಲಿ ನಮ್ಮಿಬ್ಬರನ್ನು ಕೂಡಿಹಾಕಿ ಥಳಿಸಿದ್ದಾರೆ. ನಂತರ ಮೋಬೈಲ್ನಲ್ಲಿ ಸಂಪೂರ್ಣ ಸೆರೆಹಿಡಿದಿದ್ದ ವಿಡೀಯೋಗಳನ್ನ ನಮ್ಮಿಂದ ಬಲವಂತವಾಗಿ ಡಿಲೀಟ್ ಮಾಡಿಸಿದ್ದಾರೆ. ಕಾನೂನು ಕೊಟ್ಟಿರುವಂತಹ ಅಧಿಕಾರವನ್ನು ಪೋಲಿಸ್ ರವರು ದೂರುಪಯೋಗ ಪಡಿಸಿಕೊಂಡಿದ್ದಾರೆ.

ಈ ಎಲ್ಲಾ ಘಟನೆಯು ಅಳವಂಡಿ (583226) ಠಾಣೆಯ ಸಿಸಿಟಿವಿ ಫೂಟೇಜ್ ನಲ್ಲಿ ಸೆರೆಯಾಗಿದ್ದು ಈ ಘಟನೆಯ ಕುರಿತು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳು ಕೊಪ್ಪಳ ಇವರಿಗೆ ಕಾನೂನು ವಿಧ್ಯಾರ್ಥಿಗಳ ಸಂಘ ಮತ್ತು ನೊಂದ ವಿಧ್ಯಾರ್ಥಿಗಳಿಂದ ದೂರನ್ನು ದಿ 15-ರಂದು ಸಲ್ಲಿಸಿದ್ದು, ಜಿಲ್ಲಾ ಪೋಲಿಸ್ ದೂರುಗಳ ಪ್ರಾಧಿಕಾರ ಜಿಲ್ಲಾ ಆಡಳಿತ ಭವನ ಕೊಪ್ಪಳ ಇವರಿಗೆ ದೂರನ್ನು 17- ರಂದು ಸಲ್ಲಿಸಿದ್ದು, ಮಾನವ ಹಕ್ಕುಗಳ ಆಯೋಗಕ್ಕೆ ಕೂಡ ದೂರನ್ನು ನೀಡಿದ್ದು ಮತ್ತು ರಾಜ್ಯಪಾಲರು, ಮುಖ್ಯ ಮಂತ್ರಿಗಳು, ಗೃಹ ಸಚಿವರು, ವಿರೋಧ ಪಕ್ಷದ ನಾಯಕರು, ಪೋಲಿಸ್ ಮಹಾನಿರ್ದೇಶಕರು, ಕರ್ನಾಟಕ ಸರ್ಕಾರ ಬೆಂಗಳೂರು ಇವರಿಗೂ ಕೂಡ ದೂರನ್ನು ಸಲ್ಲಿಸಿದ್ದೆವೆ, ಈ ಘಟನೆಯ ಕುರಿತು ಯಾವುದೇ ರೀತಿಯ ಕ್ರಮ ವಹಿಸದಿದ್ದಲ್ಲಿ ರಾಜ್ಯ ಮಟ್ಟದಲ್ಲಿ ಕಾನೂನು ವಿಧ್ಯಾರ್ಥಿಗಳ ಸಂಘದಿಂದ ಬೃಹತ್ ಪ್ರತಿಭಟನೆ ಮಾಡಲಾಗುವುದು ಎಂದು ಎಲ್ಲಪ್ಪ ತಂದೆ ಸುರೇಶಪ್ಪ ಮೇಟಿ ಬೋಚನಹಳ್ಳಿ ಮತ್ತು ಬಸವರಾಜ್ ತಂದೆ ಗೋಣೆಪ್ಪ ಬಂಡಿ ಭೋಚನಹಳ್ಳಿ ಅವರು ಜಂಟಿ ಪ್ರಕಟಣೆ ಮೂಲಕ ತಿಳಿಸಿ ದೂರು ನೀಡಿ ಕೂಡಲೇ ಸಂಬಂಧಿಸಿದವರು ತಪ್ಪಿತಸ್ಥರ ವಿರುದ್ಧ ಕಾನೂನು ಕ್ರಮ ಜರುಗಿಸಬೇಕೆಂದು ಒತ್ತಾಯಿಸಿದ್ದಾರೆ,

## ಹಿರಿಯರನ್ನು ಗೌರವದಿಂದ ಕಾಣಬೇಕು - ಪಕೀರಪ್ಪ ಮೂಲಿಮನಿ

ಕನ್ನಡ ಮಾತೃ ಭೂಮಿ ವಾರ್ತೆ

**ಕುಕನೂರು,** ಹಿರಿಯರನ್ನು ನಾವು ಗೌರವದಿಂದ ಕಾಣಬೇಕು ಎಂದು ಗ್ರಾಪಂ ಕಾರ್ಯ ದರ್ಶಿ ಫಕೀರಪ್ಪ ಮೂಲಿಮನಿ ಹೇಳಿದರು.



ನೆಲಜೇರಿ ಗ್ರಾಮ ಪಂಚಾಯತ್ ಗ್ರಂಥಾಲಯ ಹಾಗೂ ಅರಿವು ಕೇಂದ್ರದಲ್ಲಿ ಕಲಿಕಾ ಟಾಟಾ ಟ್ರಸ್ಟ್ ವತಿಯಿಂದ ಹಮ್ಮಿಕೊಂಡಿದ್ದ ಹಿರಿಯ ನಾಗರಿಕರ ದಿನಾಚರಣೆಯ ಕಾರ್ಯಕ್ರಮದಲ್ಲಿ ಕೇಕ್ ಕತ್ತರಿಸುವ ಮೂಲಕ ಚಾಲನೆ ನೀಡಿ ಮಾತನಾಡಿದರು.

ಗ್ರಾಮೀಣ ಪ್ರದೇಶದಲ್ಲಿ ಹಿರಿಯರನ್ನು ಗೌರವಿಸುವ ಮೂಲಕ ಪೂರ್ವಜರ ಕಾಲದಿಂದಲೂ ಬಂದಿರುವ ಸಂಸ್ಕೃತಿ ಇದನ್ನು ಯುವ ಜನಾಂಗವು ಮುಂದುವರಿಸಿಕೊಂಡು ಹೋಗಬೇಕು, ಶತಾಯುಷಿ ಬದುಕು ಮೂಲಕ ಹಿರಿಯರ ಮಾರ್ಗದರ್ಶನೊಂದಿಗೆ ಮುನ್ನಡೆಯಲಿ ಇಂದಿನ ದಿನಮಾನದಲ್ಲಿ ತಂದೆ ತಾಯಿರನ್ನು ಪೂಜ್ಯಭಾವನೆಯಿಂದ ಕಾಣುವುದು ಅಪರೂಪವಾಗಿದೆ. ಅಂತಹ ಸನ್ಮಾಗವನ್ನು ಅನುಸರಿಸಬೇಕಿದೆ ಎಂದರು.

ಗ್ರಂಥಾಲಯ ಮೇಲ್ವಿಚಾರಕ ದೇವರಾಜ್ ಮ್ಯಾದನೇರಿ ಮಾತನಾಡಿ, ಪೂರ್ವಜರ ಕಾಲದಿಂದಲೂ ಹಿರಿಯರಿ ಗೌರವ ಕೊಟ್ಟು ನಡೆಯುಂತಹ ಪರಂಪರೆ ಉಳಿಸಿಕೊಳ್ಳಬೇಕು. ಯುವ ಪೀಳಿಗೆಗೆ ಆಚಾರ್ ವಿಚಾರ ತಿಳಸಬೇಕು. ಮಹಿಳೆಯರನ್ನು ಗೌರವಯುತ ಕಾಣಬೇಕು ಎಂದರು.

ಗ್ರಾಪಂ ಕಾರ್ಯದರ್ಶಿ ಯಮನೂರಪ್ಪ ವಾಲ್ಮೀಕಿ, ಕಂಪ್ಯೂಟರ್ ಆಪರೇಟರ್ ಮಂಜುಳಾ ಉಸಗಲಿ, ಕಾಯಕ ಮಿತ್ರ ಲಲಿತಾ ಹೊಸೂರು, ಗ್ರಾಮ ಹಿರಿಯರ ಕೇಂದ್ರದ ಪೇರಕಿ ಅಮೃತಾ ಡಿ. ಭಾವಿಕಟ್ಟಿ, ಹಿರಿಯರಾದ ಅಂದಾನಪ್ಪ ಕಲ್ಲಭಾವಿ, ಶಂಕ್ರಪ್ಪ ಕುರಿ, ಆನಂದಸ್ವಾಮಿ,

ಬಸಮ್ಮ ಭಾವಿಕಟ್ಟಿ, ಅನಸೂಯಾ ಹನಮನಾಳ,ದ್ಯಾಮವ್ವ ಕಲ್ಲಭಾವಿ, ಬಸವಂತೆವ್ವ ಹೊಸಳ್ಳಿ, ಗಂಗವ್ವ ಭಾವಿಕಟ್ಟಿ,ರೇಣುಕಾ ಲಂಡೇರ್, ರೇಖಾ ಮಾಲಿಪಾಟೀಲ್,ಸುಭಾಷ್ ಮಾಲಿ ಪಾಟೀಲ್ ಇದ್ದರು

# ರಾಯಚೂರು ಬದಲು ಧಾರವಾಡಕ್ಕೆ ಏಮ್ಸ್ ಸ್ಥಳಾಂತರಕ್ಕೆ ಕೇಂದ್ರ ಸಚಿವ ಪ್ರಲ್ಹಾದ್ ಕುತಂತ್ರ: ಹೋರಾಟಗಾರರ ಆರೋಪ

ಕನ್ನಡ ಮಾತೃ ಭೂಮಿ ವಾರ್ತೆ

**ಕಲಬುರ್ಗಿ,** ಕೇಂದ್ರದಲ್ಲಿ ಮೋದಿ ಸರ್ಕಾರ ಅಧಿಕಾರಕ್ಕೆ ಬಂದ ನಂತರ ಮುಂಬಯಿ ಕರ್ನಾಟಕದ ಬಲಿಷ್ಠ ಪ್ರಭಾವಿ ನಾಯಕರು ಸೇರಿದಂತೆ ಪ್ರಸ್ತುತ ಕೇಂದ್ರ ಸಚಿವ ಪ್ರಲ್ಹಾದ್ ಜೋಶಿ ಅವರು ಕಲ್ಯಾಣ ಕರ್ನಾಟಕ ಅಭಿವೃದ್ಧಿ ವಿರೋಧಿಯಾಗಿದ್ದಾರೆ. ರಾಯಚೂರಿನಲ್ಲಿ ಸ್ಥಾಪಿತವಾಗಬೇಕಾಗಿರುವ ಏಮ್ಸ್‌ನ್ನು ಧಾರವಾಡಕ್ಕೆ ಸ್ಥಳಾಂತರಿಸಲು ಕುತಂತ್ರ ಮಾಡುತ್ತಿದ್ದಾರೆ ಎಂದು ಕಲ್ಯಾಣ ಕರ್ನಾಟಕ ಹೋರಾಟ ಸಮಿತಿಯ ಗೌರವಾಧ್ಯಕ್ಷ ಬಸವರಾಜ್ ದೇಶಮುಖ ಮತ್ತು ಸಂಸ್ಥಾಪಕ ಅಧ್ಯಕ್ಷ ಡಾ.ಲಕ್ಷ್ಮಣ ದಸ್ತಿ ಅವರು ಆಕ್ರೋಶ ಹೊರಹಾಕಿದ್ದಾರೆ.




371ನೇ ಜೇ ಕಲಂ ತಿದ್ದುಪಡಿ ಸ್ಥಾನಮಾನ ಪಡೆದಿರುವ ಹಿಂದುಳಿದ ಕಲ್ಯಾಣ ಕರ್ನಾಟಕ ಪ್ರದೇಶದ ಅಭಿವೃದ್ಧಿ ಬಗ್ಗೆ ವಿರೋಧಿಯಾಗಿ ವರ್ತಿಸುತ್ತಾ ಕರ್ನಾಟಕ ರಾಜ್ಯದಲ್ಲಿ ಉತ್ತರ ಕರ್ನಾಟಕವೆಂದರೆ ಕೇವಲ ಕಿತ್ತೂರು ಕರ್ನಾಟಕವೆಂದು ಪ್ರಧಾನಿ ಸೇರಿದಂತೆ ಕೇಂದ್ರದ ಎಲ್ಲ ಸಚಿವರಲ್ಲಿ ಅಭಿಪ್ರಾಯ ಮೂಡಿಸುತ್ತಾ

ಕೇಂದ್ರದ ಬಹುತೇಕ ಯೋಜನೆಗಳು, ಹೊಸ ರೈಲ್ವೆ ಸೇರಿದಂತೆ ಕೇಂದ್ರದ ಎಲ್ಲ ಅಭಿವೃದ್ಧಿ ಯೋಜನೆಗಳು ಧಾರವಾಡ ಸೇರಿದಂತೆ ಮುಂಬಯಿ ಕರ್ನಾಟಕಕ್ಕೆ ತೆಗೆದುಕೊಂಡು ಹೋಗುತ್ತಿದ್ದಾರೆ. ನಿರಂತರವಾಗಿ ಕೇಂದ್ರ ಸಚಿವ ಜೋಶಿ ಅವರು ಕಲ್ಯಾಣ ಕರ್ನಾಟಕ ಪ್ರದೇಶಕ್ಕೆ ಮಲತಾಯಿ ಧೋರಣೆ ಅನುಸರಿಸುತ್ತಿದ್ದಾರೆ. ಅದರಂತೆ ಕೇಂದ್ರ ಸರ್ಕಾರವು ಸಹ ಇವರ ಮಾರ್ಗದರ್ಶನದಂತೆ ವರ್ತಿಸುತ್ತಿದೆ ಎಂದು ಅವರು ಜಂಟಿ ಹೇಳಿಕೆಯಲ್ಲಿ ಖಂಡಿಸಿದ್ದಾರೆ.

ಕೇಂದ್ರ ಸರ್ಕಾರ ಕರ್ನಾಟಕ ರಾಜ್ಯಕ್ಕೆ ಏಮ್ಸ್ ಮಂಜೂರು ಮಾಡಲು ತೀರ್ಮಾನಿಸಿದೆ.ಅದರಂತೆ ಕೇಂದ್ರ, ಸರ್ಕಾರ ಕರ್ನಾಟಕ ರಾಜ್ಯದ ಯಾವ ಜಿಲ್ಲೆಗಳಲ್ಲಿ ಏಮ್ಸ್ ಸ್ಥಾಪನೆ ಮಾಡಬೇಕೆಂದು ರಾಜ್ಯ ಸರ್ಕಾರಕ್ಕೆ ಅಭಿಪ್ರಾಯ ಕೇಳಿತ್ತು ಇದಕ್ಕೆ ಪೂರಕವಾಗಿ ರಾಜ್ಯ ಸರ್ಕಾರ ಕಲ್ಯಾಣ ಕರ್ನಾಟಕ ಪ್ರದೇಶದ ಅತ್ಯಂತ ಹಿಂದುಳಿದ ಮತ್ತು ಮಹಾತ್ವಾಕಾಂಕ್ಷಿ ಜಿಲ್ಲೆಯಾದ ರಾಯಚೂರು ಜಿಲ್ಲೆಯಲ್ಲಿ ಏಮ್ಸ್ ಆಸ್ಪತ್ರೆ ಸ್ಥಾಪನೆ ಮಾಡಬೇಕೆಂದು ಅಧಿಕೃತ ಪ್ರಸ್ತಾವನೆ ಸಲ್ಲಿಸಲಾಗಿದೆ. ಅದರಂತೆ ವೈದ್ಯಕೀಯ ಶಿಕ್ಷಣ ಸಚಿವ ಡಾ. ಶರಣಪ್ರಕಾಶ್ ಪಾಟೀಲ್ ಅವರ ನೇತೃತ್ವದಲ್ಲಿ ನಿಯೋಗದ ಮೂಲಕ ದೆಹಲಿಗೆ ಭೇಟಿ ನೀಡಿ ಕೇಂದ್ರದ ಆಗಿನ ಆರೋಗ್ಯ ಸಚಿವ ಮನಸುಖ ಮಾಂಡವೀಯರವರಿಗೆ ಭೇಟಿ ಮಾಡಿ ಪ್ರಸ್ಥಾವನೆ ಸಲ್ಲಿಸಲಾಗಿತ್ತು ಎಂದು ಅವರು ಹೇಳಿದರು.

ಈ ಸಂದರ್ಭದಲ್ಲಿ ರಾಯಚೂರು ಮತ್ತು ಕೊಪ್ಪಳ ಜಿಲ್ಲೆಗಳ ಸಂಸದರು, ಶಾಸಕರು, ಕಲ್ಯಾಣ ಕರ್ನಾಟಕ ಹೋರಾಟ ಸಮಿತಿಯ ಸಂಸ್ಥಾಪಕ ಅಧ್ಯಕ್ಷ ಡಾ.ಲಕ್ಷ್ಮಣ ದಸ್ತಿ ಸೇರಿದಂತೆ ಏಮ್ಸ್ ಹೋರಾಟ ಸಮಿತಿಯ ಸಂಚಾಲಕ ಡಾ. ಬಸವರಾಜ್ ಕಳಸ ಸೇರಿದಂತೆ ಆಯ್ದು ಪ್ರಮುಖ ಹೋರಾಟಗಾರರು ದೆಹಲಿ ಭೇಟಿ ಸಂದರ್ಭದಲ್ಲಿ ಭಾಗವಹಿಸಿದರು. ಆಗಿನ ಕೇಂದ್ರದ ಆರೋಗ್ಯ ಸಚಿವ ಮನಸುಖ ಮಾಂಡವೀಯ ರವರು ರಾಜ್ಯ ಸರ್ಕಾರ ಸೂಚಿಸಿದ ಸ್ಥಳದಲ್ಲಿಯೆ ಏಮ್ಸ್ ಸ್ಥಾಪನೆ ಮಾಡುವ ಬಗ್ಗೆ ಭರವಸೆ ನೀಡಿದರು. ಕರ್ನಾಟಕದ ಆಗಿನ ಮುಖ್ಯಮಂತ್ರಿ, ಸಿದ್ದರಾಮಯ್ಯನವರು ಸಹ ಪ್ರಧಾನಿಗೆ ಸಮಕ್ಷಮ ಭೇಟಿ ಮಾಡಿ ರಾಯಚೂರಿನಲ್ಲಿ ಏಮ್ಸ್ ಆಸ್ಪತ್ರೆ ಸ್ಥಾಪನೆ ಮಾಡವ ಬಗ್ಗೆ ಅಧಿಕೃತ ಪ್ರಸ್ಥಾವನೆ ಸಲ್ಲಿಸಿದ್ದಾರೆ.

ಕರ್ನಾಟಕ ರಾಜ್ಯದಲ್ಲಿ ಏಮ್ಸ್ ಸ್ಥಾಪನೆ ಆಗಬೇಕಾದರೆ ಧಾರವಾಡದಲ್ಲಿ ಸ್ಥಾಪನೆ ಮಾಡಲು ಕೇಂದ್ರದ ಉನ್ನತ ಮಟ್ಟದ ಸಮಿತಿಯಿಂದ ಕೇಂದ್ರ ಸಚಿವ ಜೋಶಿ ಅವರು ಮೂರು ವರ್ಷಗಳ ಹಿಂದೆ ಪೂರ್ವಭಾವಿ ಪರಿಶೀಲನೆ ಕಾರ್ಯ ಸಹ ಮಾಡಿಸಿದ್ದಾರೆ ಎಂದು ಅವರು ದೂರಿದ್ದಾರೆ.

ಒಟ್ಟಾರೆ ಕೇಂದ್ರ ಸಚಿವ ಪ್ರಲ್ಹಾದ ಜೋಶಿ ಅವರು ಈ ಹಿಂದೆ ನಂಜುಂಡಪ್ಪ ವರದಿ ರಾಯಚೂರಿಗೆ ಐಐಟಿ ನೀಡಲು ಶಿಫಾರಸು ಮಾಡಿದರು ಸಹ ಇದಕ್ಕೆ ಕ್ಯಾರೆ ಎನ್ನದೆ ತಮ್ಮದೆ ಆದ ರಾಜಕೀಯ ಪ್ರಭಾವ ಬಳಿಸಿಕೊಂಡು ಐಐಟಿ ಧಾರವಾಡಕ್ಕೆ ಸ್ಥಳಾಂತರ ಮಾಡಿಸಿಕೊಂಡರು, ಅದೆ ರೀತಿ ಏಮ್ಸ್ ಆಸ್ಪತ್ರೆ, ಕಲ್ಯಾಣ ಕರ್ನಾಟಕದ ರಾಯಚೂರಿಗೆ ಸಿಗದಂತೆ ಕುಟಿಲ ತಂತ್ರ ಅನುಸರಿಸುತ್ತಿದ್ದಾರೆ ಎಂದು ಅವರು ಆಕ್ರೋಶ ಹೊರಹಾಕಿದ್ದಾರೆ.

ಭಾರತ ಸರ್ಕಾರದ ಅತ್ಯಂತ ಹಿಂದುಳಿದ 112 ಮಹಾತ್ವಾಕಾಂಕ್ಷಿ ಜಿಲ್ಲೆಗಳಲ್ಲಿ ಒಂದಾದ ಮತ್ತು ಕರ್ನಾಟಕ ರಾಜ್ಯದ ಕಲ್ಯಾಣ ಕರ್ನಾಟಕದ ಅತ್ಯಂತ ಹಿಂದುಳಿದ ಜಿಲ್ಲೆಯಾದ ರಾಯಚೂರು ಜಿಲ್ಲೆಗೆ ಏಮ್ಸ್ ಆಸ್ಪತ್ರೆ ಮಂಜೂರು ಮಾಡಿ ಸ್ಥಾಪನೆ ಮಾಡಬೇಕೆಂದು ಒತ್ತಾಯಿಸಿ ಸುಮಾರು ಐದು ವರ್ಷಗಳಿಂದ ಅಂದರೆ 1500 ದಿನಗಳಿಂದ ಭಾರತ ಮತ್ತು ಕರ್ನಾಟಕದಲ್ಲಿಯೇ ಧೀರ್ಘ ಕಾಲದಿಂದ ಚಾರಿತ್ರಿಕ ನಿರಂತರವಾಗಿ ನಡೆಸಿಕೊಂಡು ಬರುತ್ತಿರುವ ಅನಿರ್ದಿಷ್ಟ ಧರಣಿ ಸತ್ಯಾಗ್ರಹಕ್ಕೆ ಗಂಭೀರವಾಗಿ

ಪರಿಗಣಿಸಿ ಕೇಂದ್ರ ಸರ್ಕಾರ ವಿಶೇಷವಾಗಿ ಪ್ರಧಾನಿ ಭಾರತ ಸರ್ಕಾರದಿಂದ 371ನೇ ಜೇ ಕಲಂ ತಿದ್ದುಪಡಿ ಸ್ಥಾನಮಾನ ಪಡೆದಿರುವ ಹಿಂದುಳಿದ ಕಲ್ಯಾಣ ಕರ್ನಾಟಕ ಪ್ರದೇಶದ ಮಹಾತ್ವಾಕಾಂಕ್ಷಿ ಜಿಲ್ಲೆಯಾದ ರಾಯಚೂರಿಗೆ ಏಮ್ಸ್ ಮಂಜೂರು ಮಾಡಿ ಸ್ಥಾಪನೆ ಮಾಡಿದರೆ

ಕರ್ನಾಟಕ, ತೆಲಂಗಾಣ, ಆಂಧ್ರ ಪ್ರದೇಶದ ಹದಿನಾಲ್ಕು ಜಿಲ್ಲೆಗಳ ಲಕ್ಷಾಂತರ ರೋಗಿಗಳಿಗೆ ಆರೋಗ್ಯ ದೃಷ್ಟಿಯಿಂದ ಅನುಕೂಲವಾಗುವುದು ಈ ಬಗ್ಗೆ ಗಂಭೀರವಾಗಿ

ಪರಿಗಣಿಸಿ ಹಿಂದುಳಿದ ಕಲ್ಯಾಣ ಕರ್ನಾಟಕ ಪ್ರದೇಶಕ್ಕೆ ನ್ಯಾಯ ಒದಗಿಸಲು ಅವರು ಒತ್ತಾಯಿಸಿದ್ದಾರೆ.

## ಆರ್.ಎಸ್.ಎಸ್. ದಲಿತರಿಗಲ್ಲವೇ? ದಲಿತರು ಹಿಂದೂಗಳಲ್ಲವೇ? ಜ್ಯೋತಿ ಪ್ರಶ್ನೆ

ಕನ್ನಡ ಮಾತೃ ಭೂಮಿ ವಾರ್ತೆ

**ಕೊಪ್ಪಳ,** ಸಂವಿಧಾನ, ನೆಲದ ಕಾನೂನಿನ ಪ್ರಕಾರ ಪ್ರಶ್ನೆ ಮಾಡುವದು ಮೋದಿ ಕಾಲದಲ್ಲಿ ತಪ್ಪು ಎನ್ನುವದಾದರೆ ಸಂವಿಧಾನಕ್ಕೆ ನೆಲೆ ಎಲ್ಲಿ?, ಆರ್.ಎಸ್.ಎಸ್. ಬಗ್ಗೆ ದಲಿತರು ಪ್ರಶ್ನೆ ಮಾಡಬಾರದು ಎಂದರೆ ದಲಿತರು ಹಿಂದೂಗಳೇ ಅಲ್ಲ ಎಂದು ಭಾಗವತ್ ಘೋಷಣೆ ಮಾಡುತ್ತಾರಾ ಎಂದು ಜಿಲ್ಲಾ ಮಹಿಳಾ ಕಾಂಗ್ರೆಸ್ ಅಧ್ಯಕ್ಷೆ ಜ್ಯೋತಿ ಎಂ. ಗೊಂಡಬಾಳ ಪ್ರಶ್ನೆ ಮಾಡಿದ್ದಾರೆ.

ಅವರು ಈ ಕುರಿತು ಮಾಧ್ಯಮ ಹೇಳಿಕೆ ಬಿಡುಗಡೆ ಮಾಡಿದ್ದು, ಬಿಜೆಪಿಯಲ್ಲಿ ದಲಿತರು ಕೇವಲ ಅಲ್ಲಿನ ಮನುವಾದಿ ಜನರ ರಕ್ಷಣೆಗಾಗಿ ಇರುವದು ಎನ್ನುವದಕ್ಕೆ ಬಿಜೆಪಿ ದಲಿತ ಸಂಸದ ರಮೇಶ ಜಿಗಜಿಣಗಿ ಅವರು ಗೃಹ ಸಚಿವ ಪ್ರಿಯಾಂಕ್ ಖರ್ಗೆ ವಿರುದ್ಧ ಮಾತನಾಡಿ ತೋರಿಸಿದ್ದಾರೆ. ದಲಿತರು ಆರ್.ಎಸ್.ಎಸ್. ತಡವಬಾರದು, ದಲಿತರಿಗ್ಯಾಕೆ ಬೇಕು ಅದರ ಉಸಾಬರಿ ಎನ್ನುವ ಮೂಲಕ ದಲಿತರು ಈಗಲೂ ಶೂದ್ರರು, ಅವರು ಪ್ರಶ್ನೆ ಮಾಡಲು ಸಹ ಯೋಗ್ಯರಲ್ಲ ಎನ್ನುವಂತಿದೆ. ಅಲ್ಲದೇ ಬಿಜೆಪಿಯ ಕೆಲವು ಮುಖಂಡರು ಖರ್ಗೆ ಅವರನ್ನು ಸಂಬೋಧಿಸುತ್ತಾ, ಮಲ್ಲಿಕಾರ್ಜುನ ಖರ್ಗೆ ಅವರನ್ನು ಏಕವಚನದಲ್ಲಿ ಹೀಯಾಳಿಸಿದ್ದಾರೆ, ಮೋದಿಗಿಂತ ಹೆಚ್ಚು ಬಾರಿ ಜನರಿಂದ ಆಯ್ಕೆಯಾದ ಮೋದಿಗಿಂತ ವಯಸ್ಸಿನಲ್ಲಿ ಜ್ಞಾನದಲ್ಲಿ ಬಹಳಷ್ಟು ಎತ್ತರದಲ್ಲಿ ಇರುವ ಖರ್ಗೆ ಅವರ ಬಗ್ಗೆ ಇನ್ನೊಮ್ಮೆ ಸ್ವಾಭಿಮಾನಿ ದಲಿತರು ಸುಮ್ಮನಿರಲ್ಲ.

ಇನ್ನು ದೇಶ ಅಂದರೆ ಧರ್ಮ ಅಲ್ಲ ದೇಶ ಅಂದರೆ ಇಲ್ಲಿನ ಜನ ಅನ್ನುವದು ನೆನಪಿರಲಿ. ಖರ್ಗೆ ಅವರ ಜೊತೆಗೆ ಇಡೀ ದೇಶದ ಸ್ವಾಭಿಮಾನಿ ದಲಿತರೆಲ್ಲರೂ ಇದ್ದೇವೆ. ದೇಶದ ನೂರಾರು ದಲಿತ ಮಹಿಳೆಯರು ದೌರ್ಜನ್ಯ, ಅತ್ಯಾಚಾರ, ಕೊಲೆಗೆ ಬಲಿಯಾದಾಗ ಪ್ರಶ್ನೆ ಮಾಡದ, ಪತ್ರಿಕಾ ಗೋಷ್ಠಿಯಲ್ಲಿ ಮಾತನಾಡದ ಜಿಗಜಿಣಗಿ ಈಗ ಮಾಧ್ಯಮದ ಮುಂದೆ ಬಂದಿರುವದು ಅತ್ಯಂತ ನಾಚಿಕೆ ತರಿಸುವ ಕೆಲಸ ಎಂದು ಗೊಂಡಬಾಳ ದೂರಿದ್ದಾರೆ. ಗೃಹ ಸಚಿವರಾಗಿ ಕಾನೂನು ಪ್ರಕಾರ ಪ್ರಶ್ನೆ ಮಾಡುವದನ್ನೇ ತಪ್ಪು ಎನ್ನುವದಾದರೆ ಬಿಜೆಪಿ ಆಡಳಿತದಲ್ಲಿ ಸಾಮಾನ್ಯ ದಲಿತರ ಪರಿಸ್ಥಿತಿ ಏನು ಎಂದು ಪ್ರಶ್ನೆ ಮಾಡಿದ್ದಾರೆ.

ಅಷ್ಟಕ್ಕೂ ಮೋಹನ್ ಭಾಗವತ್ ಅವರು ಮೋದಿಗಿಂತ ದೊಡ್ಡವರಾಗಿರಬಹುದು ಆದರೆ ಸಂವಿಧಾನಕ್ಕಿಂತ ದೊಡ್ಡವರಲ್ಲ, ಒಂದು ಸಂಘಟನೆ, ಅದೂ ಕಾನೂನಿನ ಮಾನ್ಯತೆ ಇಲ್ಲದ ಜನರ ಗುಂಪನ್ನು ಧರ್ಮಕ್ಕೆ ಸಮಾನ ಎನ್ನುವದಾದರೆ ಹಿಂದೂ ಎನ್ನುವದು ಧರ್ಮವೇ ಎಂಬ ಪ್ರಶ್ನೆ ನಮ್ಮನ್ನು ಕಾಡುತ್ತಿದೆ. ಆದರೆ ಆ ಹಿಂದೂ ಎಂಬ ಜೀವನ ಶೈಲಿಗೆ ಮಾನ್ಯತೆ ಕೊಟ್ಟಿದ್ದು ಅಂಬೇಡ್ಕರ್ ಮತ್ತು ನೆಹರು ಅವರು ಎಂಬ ತಿಳುವಳಿಕೆ ಇದ್ದರೆ ಉತ್ತಮ ಎಂದು ಗೊಂಡಬಾಳ ಎಚ್ಚರಿಸಿದ್ದಾರೆ.

## ಸಮಾಜದಲ್ಲಿ ಉತ್ತಮ ಜೀವನ ನಡೆಸಲು ಆಸರೆಯಾದ ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ - ರೋಹಿತಾಕ್ಷ

ಕನ್ನಡ ಮಾತೃ ಭೂಮಿ ವಾರ್ತೆ

**ಸಿರುಗುಪ್ಪ,** ತಾಲೂಕಿನ ಬಗ್ಗೂರು ಗ್ರಾಮ ಪಂಚಾಯತಿ ವ್ಯಾಪ್ತಿಯ ಶ್ರೀನಗರ ಕ್ಯಾಂಪ್ ನಿವಾಸಿ ಅಂಬಮ್ಮರವರಿಗೆ ಶ್ರೀ ಕ್ಷೇತ್ರ, ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆಯ ಜ್ಞಾನವಿಕಾಸ ಕಾರ್ಯಕ್ರಮದಡಿ ವಾತ್ಸಲ್ಯ ಮನೆ ನಿರ್ಮಾಣದ ಕುರಿತು ಭೂಮಿ ಪೂಜೆ ನೆರವೇರಿಸಲಾಯಿತು.



ನಂತರ ಮಾತನಾಡಿದ ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆಯ ಜಿಲ್ಲಾ ನಿರ್ದೇಶಕ ರೋಹಿತಾಕ್ಷರವರು ಪೂಜ್ಯ ಡಾ.ಡಿ.ವೀರೇಂದ್ರ, ಹೆಗ್ಗಡೆಯವರು ಹಾಗೂ ಮಾತೃ ಹೇಮಾವತಿ ವಿ. ಹೆಗ್ಗಡೆಯವರ

ಮಾರ್ಗದರ್ಶನದಲ್ಲಿ ಅಸಹಾಯಕ ವ್ಯಕ್ತಿಗಳು ಯಾರ ಪೋಷಣೆಯು ಇಲ್ಲದೆ ಹಾಗೂ ಕನಿಷ್ಠ ಮೂಲಭೂತ ಸೌಲಭ್ಯಗಳಿಲ್ಲದೆ ಅತ್ಯಂತ ದುಸ್ಥಿತಿಯಲ್ಲಿ ಜೀವನವನ್ನು ನಡೆಸುತ್ತಿರುವವರನ್ನು ಗುರುತಿಸಿ ಅವರಿಗೆ ವಾಸಿಸಲು ವಾತ್ಸಲ್ಯ ಮನೆ ನಿರ್ಮಾಣ ಮಾಡಿ ಶೌಚಾಲಯ ಮತ್ತು ಸ್ನಾನಗೃಹ ವ್ಯವಸ್ಥೆ ಮಾಡಿ ಕೊಡುವುದಾಗಿದೆ, ಇದಕ್ಕಾಗಿ ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆಯ ಮೂಲಕ ಹಣಕಾಸಿನ ನೆರವನ್ನು ಒದಗಿಸಲಾಗುತ್ತಿದ್ದು ಇದರಿಂದ ಉತ್ತಮ ಜೀವನ ನಡೆಸಲು ಅನುಕೂಲವಾಗುತ್ತದೆ ಅಲ್ಲದೆ ಜ್ಞಾನವಿಕಾಸ ಕಾರ್ಯಕ್ರಮದಡಿ ಈವರೆಗೆ ರಾಜ್ಯಾದ್ಯಾಂತ 18,847 ಜನ ಫಲಾನುಭವಿಗಳು ಮಾಸಾಶನ ಪಡೆಯುತ್ತಿದ್ದು, ರಾಜ್ಯಾದ್ಯಾಂತ ಹೊಸ ಮನೆ 942 ರಚನೆ ಮಾಡಲಾಗಿದೆ, 166 ಹಳೆ ಮನೆ ದುರಸ್ಥಿ ಮಾಡಲಾಗಿದೆ, ಮತ್ತು 238 ಜನರಿಗೆ ಶೌಚಾಲಯ, ಸ್ನಾನಗೃಹ ರಚನೆ ಮಾಡಿಕೊಡಲಾಗಿದೆ.

61 ಫಲಾನುಭವಿಗಳ ಮನೆಗಳಿಗೆ ಸೋಲಾರ್, ವಿದ್ಯುತ್, ನಲ್ಲಿ ನೀರಿನ ಅಳವಡಿಕೆ ಮಾಡಿಕೊಡಲಾಗಿದ್ದು, 2049 ಜನರಿಗೆ ವಾತ್ಸಲ್ಯ ಮಿಕ್ಸ್ ಆಹಾರ ಕಿಟ್ ವಿತರಣೆ ಮಾಡಲಾಗಿದೆ, 102 ಜನ ಮಕ್ಕಳಿಗೆ ವಾತ್ಸಲ್ಯ ವಿದ್ಯಾನಿಧಿ ಒದಗಣೆ ಮಾಡಲಾಗಿದ್ದು, 127 ವಾತ್ಸಲ್ಯ ಕುಟುಂಬದ ನೆರವಿಗೆ ಪೋಷಕರನ್ನು ನೇಮಿಸಿದ್ದು ಮತ್ತು ಆಹಾರ ಪೂರೈಕೆಗೆ ಕುಟುಂಬಗಳಿಗೆ 127 ಟಿಫಿನ್ ಬಾಕ್ಸ್ ವಿತರಿಸಲಾಗಿದೆ. ಈವರೆಗೆ ವಾತ್ಸಲ್ಯ ಕಾರ್ಯಕ್ರಮಕ್ಕಾಗಿ 11 ಕೋಟಿ 03 ಲಕ್ಷದ 88 ಸಾವಿರ ರೂಪಾಯಿ ವಿನಿಯೋಗಿಸಲಾಗಿದೆ. ಜನಮಂಗಳ ಕಾರ್ಯಕ್ರಮದಡಿ 31850 ವಿಶೇಷ ಚೇತನರಿಗೆ ಪರಿಕರಗಳನ್ನು ನೀಡಲಾಗಿದೆ, ಇದಕ್ಕಾಗಿ 9 ಕೋಟಿ 6 ಲಕ್ಷದ 65 ಸಾವಿರ ರೂಪಾಯಿ ಮೊತ್ತ ವಿನಿಯೋಗಿಸಲಾಗಿದೆ ಎಂದು ತಿಳಿಸಿದರು.

ಈ ಸಂದರ್ಭ ತಾಲೂಕು ಕ್ಷೇತ್ರ ಯೋಜನಾಧಿಕಾರಿ ಎಸ್. ವಸಂತ ಬಗ್ಗೂರು ಗ್ರಾಮ ಪಂಚಾಯತಿ ಮಾಜಿ ಅಧ್ಯಕ್ಷ ಮರಿಯಪ್ಪ ಜಿಲ್ಲಾ ಜನಜಾಗೃತಿ ವೇದಿಕೆಯ ಸದಸ್ಯ ನಾಗೇಶಪ್ಪ, ಭೂದಾನಿಗಳು ವೀರೇಶ, ಜ್ಞಾನವಿಕಾಸ ಸಮನ್ವಯ ಅಧಿಕಾರಿ ಪ್ರಿಯಾ, ಸೇವಾ ಪ್ರತಿನಿಧಿ ವಾಣಿ, ಯಶೋಧ, ವಾತ್ಸಲ್ಯ ಫಲಾನುಭವಿ ಅಂಬಮ್ಮ ಹಾಗೂ ಊರಿನ ಗಣ್ಯರು ಗ್ರಾಮಸ್ಥರು ಉಪಸ್ಥಿತರಿದ್ದರು.

...ಮೊದಲನೇ ಪುಟದಿಂದ

# ಒಗ್ಗಟ್ಟಾಗಿ ಕೆಲಸ ಮಾಡಿ, ಇನ್ಮುಂದೆ ಪಕ್ಷದ ನಿಜವಾದ ಕಾರ್ಯಕರ್ತರನ್ನು ಗುರುತಿಸಿ ಹುದ್ದೆ ಕೊಡಿ-ಖರ್ಗೆ

ಬಂದರೂ ಒಳಗೆ ಕೂತು ಚರ್ಚೆ ಮಾಡಿ. ಇಡೀ ಪಾರ್ಟಿ ಮೇಲೆ ಪರಿಣಾಮ ಬೀರುತ್ತದೆ. ಎಐಸಿಸಿಗೆ ಕೆಟ್ಟ ಹೆಸರು ತರಬೇಡಿ. ಅಧಿಕಾರ ಹಸ್ತಾಂತರ ಸುಸೂತ್ರವಾಗಿ ನಡೆದಿದೆ. ಅದಕ್ಕಾಗಿ ಸುರ್ಜೇವಾಲಾಗೆ ಅಭಿನಂದನೆ ಸಲ್ಲಿಸುತ್ತೇನೆ ಎಂದು ತಿಳಿಸಿದರು.

ಸಾವಿರಾರು ವರ್ಷಗಳಿಂದ ಆಡಳಿತ ಮಾಡುವವರೇ ಮುಂದುವರಿಯಬೇಕು ಎಂಬುದು ಬಿಜೆಪಿಯವರ ಉದ್ದೇಶ. ಇದಕ್ಕಾಗಿಯೇ ಆರ್‌ಎಸ್‌ಎಸ್, ಎಬಿವಿಪಿ ಅವರಿಗೇ ಸಪೋರ್ಟ್ ಮಾಡೋದು. ಮೋದಿ ಕರ್ನಾಟಕಕ್ಕೆ ಏನು ಕೊಟ್ಟಿದ್ದಾರೆ?. ಮೋದಿ ಕೊಟ್ಟಿದ್ದು ನಿರುದ್ಯೋಗ, ಬೆಲೆ ಏರಿಕೆ. ಮೋದಿಗೆ ದೊಡ್ಡ ಸಂಕಟವೊಂದು ಬರುತ್ತದೆ ಕಾದು ನೋಡಿ. ಸಿಎಂ ಈಗ ಯುವಕರು. ಯುವಕರು ಅನ್ನೋ ಹಾಗೇನಿಲ್ಲ, ಅವನೂ ಮುದ್ಯಾ ಆಗಿದ್ದಾನೆ. ಅವನಿಗೂ ಮೊಮ್ಮಗಳು ಬಂದಿದ್ದಾಳೆ. ಯುವಕರಂತೆ ಓಡಾಡ್ತಾರೆ. ಬಿ. ಕೆ ಹರಿಪ್ರಸಾದ್, ಡಿ. ಕೆ. ಶಿವಕುಮಾರ್ ಇಬ್ಬರೂ ಒಟ್ಟಿಗೆ ಕೆಲಸ ಮಾಡುತ್ತಾರೆ. ಅವರಿಗೆ ಮಾರ್ಗದರ್ಶನ ಮಾಡುವುದಕ್ಕೆ ಎಲ್ಲ ನಾಯಕರಿದ್ದಾರೆ ಎಂದು ಕಿವಿಮಾತು ಹೇಳಿದರು.

ಆರ್‌ಎಸ್‌ಎಸ್ ಹುಡುಗರು ತುಂಬ್ತಾ ಇದ್ದಾರೆ. ಆರ್‌ಎಸ್‌ಎಸ್ ಹಿನ್ನೆಲೆ ಇರುವವರಿಗೆ ಶಿಕ್ಷಕರನ್ನಾಗಿ ಮಾಡ್ತಿದ್ದಾರೆ. ಖಖ ಹಿನ್ನೆಲೆ ಇರುವವರಿಗೆ ವೈಸ್ ಚಾನ್ಸಲರ್ ಮಾಡ್ತಿದ್ದಾರೆ. ರಾಜಕೀಯ ಹಿಡಿತ ತಮ್ಮ ಕೈಲಿ ಇರಬೇಕು ಎಂದು ಹೀಗೆ ಮಾಡ್ತಿದ್ದಾರೆ. ಮೋದಿ ದೇಶ ಹಾಳು ಮಾಡ್ತಿದ್ದಾರೆ. ಟ್ರಂಪ್ ಇಡೀ ಪ್ರಪಂಚ ಹಾಳು ಮಾಡ್ತಿದ್ದಾನೆ. ಮತ್ತೆ ವಿ ಆರ್ ಗುಡ್ ಫ್ರೆಂಡ್ಸ್ ಅಂತಾರೆ. ಟ್ರಂಪ್ ಹೀಗೆ ಮಾಡದೇ ಇದ್ದರೆ ಡೀಸೆಲ್- ಪೆಟ್ರೋಲ್ ಬೆಲೆ ಏರುತ್ತಿರಲಿಲ್ಲ. ಮೋದಿ ಟ್ರಂಪ್ ಫ್ರೆಂಡ್ ಫ್ರೆಂಡ್ ಅಂದುಕೊಂಡು ನಮ್ಮ ವಿದೇಶಿ ನೀತಿಯನ್ನೇ ತೆಗೆದುಬಿಟ್ಟರು. ಇವನು ನನ್ನ ಫ್ರೆಂಡು, ಅವನು ನನ್ನ ಫ್ರೆಂಡು ಅಂತ ಎಲ್ಲರ ಕೊರಳಿಗೆ ಬಿದ್ದೂ ಬಿದ್ದೂ ನಮಗೆ ಹಾಳು ಮಾಡಿದ್ದಾರೆ ಎಂದು ಖರ್ಗೆ ಆರೋಪಿಸಿದರು.

ರಾಮ ಮಂದಿರದಲ್ಲಿ ಪೂಜಾರಿಯೇ ದುಡ್ಡು ಹೊಡೆಯುತ್ತಿದ್ದಾರೆ : ರಾಮನ ಹೆಸರಲ್ಲಿ ಕೋಟ್ಯಂತರ ರೂಪಾಯಿ ಲೂಟಿ ಮಾಡೋರು ಬಿಜೆಪಿಯವರು. ಹಿಂದೆ ರಾಮ ಮಂದಿರ ನಿರ್ಮಾಣಕ್ಕೆ ರಥ ಯಾತ್ರೆ ಮಾಡಿದವರು ಅಡ್ವಾಣಿ. ಆಗ ಜನರೆಲ್ಲ ಇಟ್ಟಿಗೆ, ದುಡ್ಡು, ಬಂಗಾರ ಕೊಟ್ಟರು. ಅದಕ್ಕೆಲ್ಲ ಲೆಕ್ಕವೇ ಇಲ್ಲ. ಪುಣ್ಯಾತ್ಮ ಮಾರಾಯ ಕತ್ತರಿ ಹಚ್ಚಿ, ಹುಂಡಿ ದುಡ್ಡು ಇವರ ಶಿಷ್ಯರು ಲೂಟಿ ಮಾಡ್ತಿದ್ದಾರೋ, ಮತ್ಯಾರು ಹೊಡೆಯುತ್ತಿದ್ದಾರೋ ತನಿಖೆ ಆಗಬೇಕು. ಎಸ್‌ಐಟಿ ತನಿಖೆ ಆಗಬೇಕು. ರಾಮನ ಹೆಸರಲ್ಲಿ ಲೂಟಿ ಮಾಡ್ತಿದ್ದಾರೆ. ಧರ್ಮದ ಹೆಸರಲ್ಲಿ ಈ ದೇಶದಲ್ಲಿ ಲೂಟಿ ಆಗ್ತಿದೆ. ರಾಮ ಮಂದಿರ ದುಡ್ಡಲ್ಲೂ ಲೂಟಿ ಮಾಡ್ತಾರೆ ಇವರು ಎಂದು ಖರ್ಗೆ ದೂರಿದರು.

ರಾಜ್ಯಗಳಿಗೆ ಪರೀಕ್ಷೆ ನಡೆಸುವ ಅಧಿಕಾರ ಕೊಡಿ : ನೀಟ್ ಎಕ್ಸಾಂ ಯಾಕೆ ಎರಡನೇ ಸಲ ಆಯ್ತು?. ಶಿಕ್ಷಣ ಸಚಿವ ರಾಜೀನಾಮೆ ಕೊಡಬೇಕು. ನೀಟ್ ತಂದಿದ್ಯಾಕೆ?. ಬಡವರ ಮಕ್ಕಳಿಗೆ ಅನುಕೂಲ ಆಗಲಿ ಅಂತ. ಎಲ್ಲರಿಗೆ ಅನುಕೂಲ ಆಗಲಿ ಅಂತ ನೀಟ್ ಬಂತು. ಇವರಿಗೆ ಎಕ್ಸಾಂ ನಡೆಸೋದಕ್ಕೆ ಆಗಲ್ಲ. ಕಷ್ಟಪಟ್ಟು ಓದಿದ ವಿದ್ಯಾರ್ಥಿಗಳಿಗೆ ಮೋಸ ಮಾಡಿದವರು ಯಾರು?. ಧರ್ಮೇಂದ್ರ ಪ್ರಧಾನ್. ಸಿಇಟಿ ಮಾದರಿಯಲ್ಲೇ ಎಲ್ಲ ರಾಜ್ಯಗಳಲ್ಲೂ ಆಗಲಿ. ಪಿಯುಸಿ ಮಾರ್ಕ್ಸ್ ಸೇರಿಸಿ ರ್‍ಯಾಂಕ್ ಕೊಡಿ. ನೀಟ್ ಪರೀಕ್ಷೆಗಾಗಿಯೇ ಈಗ ಬಡವರು ದುಡ್ಡು ಖರ್ಚು ಮಾಡಬೇಕು. ರಾಜ್ಯಗಳಿಗೇ ಪರೀಕ್ಷೆ ಅಧಿಕಾರ ಕೊಡಿ. ಪಿಯುಸಿ ಹಾಗೂ ಸಿಇಟಿ ಮಾದರಿ ರ್‍ಯಾಂಕ್ ನೀಡಿದರೆ ಯಾರಿಗೂ ಅನ್ಯಾಯ ಆಗಲ್ಲ ಎಂದು ಆಗ್ರಹಿಸಿದರು.

ಪ್ರತಿ ರಾಜ್ಯದಲ್ಲಿ ಪರೀಕ್ಷೆ ನಡೆಸುವ ಸ್ವಾತಂತ್ರ್ಯ ನೀಡಿ. ಅದರಲ್ಲೂ ಕೆಲ ರಾಜ್ಯಗಳಲ್ಲಿ ನ್ಯೂನತೆ ಇದೆ. ರಾಹುಲ್ ಗಾಂಧಿ ಅನ್ಯಾಯಕ್ಕೆ ಒಳಗಾದ ವಿದ್ಯಾರ್ಥಿಗಳ ಪರವಾಗಿ ಇದ್ದಾರೆ. ನಾವೆಲ್ಲ ಒಂದಾಗಿ ಹೋರಾಟ ಮಾಡಿದರೆ ಈ ಸರ್ಕಾರ ಇರೋದಿಲ್ಲ. ಬಡವರ ಮೇಲೆ ಟ್ಯಾಕ್ಸ್ ಹಾಕಿ ಲೂಟಿ ಮಾಡುತ್ತಿದ್ದಾರೆ. ಇದೆಲ್ಲದರ ವಿರುದ್ಧ ನಾವು ಹೋರಾಟ ಮಾಡಬೇಕು ಎಂದು ಕರೆ ನೀಡಿದರು.

ನಾವು ಒಗ್ಗಟ್ಟಾಗಿ ಕೆಲಸ ಮಾಡಬೇಕಾಗಿದೆ : ಇದೇ ವೇಳೆ ಮಾತನಾಡಿದ ಕಾಂಗ್ರೆಸ್ ಕರ್ನಾಟಕ ಉಸ್ತುವಾರಿ ರಣದೀಪ್ ಸಿಂಗ್ ಸುರ್ಜೇವಾಲ ಅವರು, ಬಿಜೆಪಿ ಅವರಿಗೆ ಅವಕಾಶ ನೀಡಿದರೆ, ಗ್ಯಾರಂಟಿ ಕಿತ್ತು ಹಾಕ್ತಾರೆ. ನಾವು ಗ್ಯಾರಂಟಿ ರಕ್ಷಣೆ ಮಾಡುತ್ತೇವೆ. ವಿರೋಧ ಪಕ್ಷದವರು ಕಾಂಗ್ರೆಸ್ ಮೇಲೆ ಅಷ್ಟೇ ಅಲ್ಲ, 1.22 ಮಹಿಳೆಯರ ಮೇಲೆ ಹಲ್ಲೆ ಮಾಡ್ತಿದ್ದಾರೆ. ಗ್ಯಾರಂಟಿ ಫಲಾನುಭವಿಗಳ ಮೇಲೆ ಬಿಜೆಪಿ ಹಲ್ಲೆ ಮಾಡುತ್ತಿದೆ. ನಾವು ಒಗ್ಗಟ್ಟಾಗಿ ಕೆಲಸ ಮಾಡಬೇಕಾಗಿದೆ ಎಂದು ಕರೆ ನೀಡಿದರು. ಕೇಂದ್ರ ಸರ್ಕಾರ ರಾಜ್ಯದ ಜನರಿಗೆ ಅನ್ಯಾಯ ಮಾಡುತ್ತಿದೆ. ಬಿಜೆಪಿ ಸರ್ಕಾರ ಸಂವಿಧಾನದ ವಿರುದ್ಧ ಹೋರಾಟ ಮಾಡುತ್ತಿದೆ. ನಾವು ವೇದಿಕೆ ಮೇಲೆ ಸಂವಿಧಾನ ಹಂಚಿದ್ದೇವೆ. ಬಿಜೆಪಿ ಸರ್ಕಾರ ಅಲ್ಪಸಂಖ್ಯಾತ, ಒಬಿಸಿ ಮತದಾರರ ಹಕ್ಕು ಕಿತ್ತುಕೊಳ್ಳುತ್ತಿದೆ. ಎಸ್‌ಐಆರ್ ಮಾಡಿ ಮತಗಳನ್ನು ಕಿತ್ತು ಹಾಕ್ತಿದೆ, ನಿಮ್ಮ ಹಕ್ಕು ಕಸಿದುಕೊಳ್ತಿದೆ. ಹರಿಪ್ರಸಾದ್, ಸಿಎಂ, ಡಿ. ಕೆ. ಶಿವಕುಮಾರ್ ಅವರಿಗೆ ಜವಾಬ್ದಾರಿ ಹೆಚ್ಚಾಗಿದ್. ಸಂವಿಧಾನ ಮಾತ್ರವಲ್ಲ, ರಾಜ್ಯದ ಜನರ ಹಿತ್ ನೀವು ಕಾಪಾಡಬೇಕಾಗಿದೆ ಎಂದು ಕರೆ ನೀಡಿದರು.

# ನಿಯಮಿತ ಯೋಗ ರೂಢಿಸಿಕೊಂಡರೇ ದೈಹಿಕ ಮತ್ತು ಮಾನಸಿಕ ಆರೋಗ್ಯ-ಬಿ.ವೆಂಕಟಸಿಂಗ್

ಇದಕ್ಕೂ ಮೊದಲು ನಗರದ ಮಹಾತ್ಮಗಾಂಧಿ ಜಿಲ್ಲಾ ಕ್ರೀಡಾಂಗಣದಲ್ಲಿ ಯೋಗ ದಿನಾಚರಣೆ ಅಂಗವಾಗಿ ಯೋಗ ಶಿಕ್ಷಕರು ವಿದ್ಯಾರ್ಥಿಗಳಿಗೆ ಹಾಗೂ ಸಾರ್ವಜನಿಕರಿಗೆ ವಿವಿಧ ಯೋಗಾಸನಗಳ ಅಭ್ಯಾಸ ಮಾಡಿಸಿದರು.

ಕಾರ್ಯಕ್ರಮದಲ್ಲಿ ಪಾಲ್ಗೊಂಡಿದ್ದ ಗಣ್ಯರು, ವಿದ್ಯಾರ್ಥಿಗಳು, ಯೋಗ ಸಂಸ್ಥೆಗಳ ಪದಾಧಿಕಾರಿಗಳು, ಸಾರ್ವಜನಿಕರು ಯೋಗ ಅಭ್ಯಾಸ ಮಾಡಿದರು. ನಂತರ ಯೋಗ ಸ್ಪರ್ಧೆಯಲ್ಲಿ ವಿಜೇತರಿಗೆ ಪ್ರಮಾಣಪತ್ರ ವಿತರಿಸಲಾಯಿತು.

ಪ್ರಶಸ್ತಿ ವಿತರಣೆ: 12ನೇ ಅಂತರರಾಷ್ಟ್ರೀಯ ಯೋಗ ದಿನಾಚರಣೆಯ ಅಂಗವಾಗಿ ವಿವಿಧ ಸ್ಪರ್ಧೆಗಳನ್ನು ಹಮ್ಮಿಕೊಳ್ಳಲಾಗಿದ್ದು, ಸ್ಪರ್ಧೆಯಲ್ಲಿ ವಿಜೇತರಾದ ವಿವಿಧ ವಯೋಮಾನದ ಬಾಲಕ, ಬಾಲಕಿಯರಿಗೆ ವಿವಿಧ ಗಣ್ಯರಿಂದ ಪ್ರಶಸ್ತಿ ಪತ್ರ ಹಾಗೂ ಪದಕವನ್ನು ನೀಡಿ, ಗೌರವಿಸಲಾಯಿತು. ನಂತರ ರಾಯಚೂರಿನ ನವ ಚೇತನ ಶಾಲೆಯ ವಿದ್ಯಾರ್ಥಿಗಳಿಂದ ಯೋಗ ನೃತ್ಯ ಮಾಡಲಾಯಿತು. ಈ ಸಂದರ್ಭದಲ್ಲಿ ಪ್ರಜಾಪಿತ ಬ್ರಹ್ಮಕುಮಾರಿ ಈಶ್ವರೀಯ ವಿಶ್ವವಿದ್ಯಾಲಯದ ಮುಖ್ಯಸ್ಥೆ ಸ್ಮಿತಾ ಅಕ್ಕ, ಸಹಾಯಕ ಆಯುಕ್ತ ಹಾಗೂ ಪ್ರಭಾರ ಅಪರ ಜಿಲ್ಲಾಧಿಕಾರಿ ಡಾ.ಹಂಪಣ್ಣ ಸಜ್ಜನ್, ರಾಯಚೂರು ಮಹಾನಗರ ಪಾಲಿಕೆಯ ಕಂದಾಯ ವಿಭಾಗದ ಉಪ ಆಯುಕ್ತೆ ಸಂತೋಷ ರಾಣಿ, ಜಿಲ್ಲಾ ಆಯುಷ್ ಇಲಾಖೆಯ ಅಧಿಕಾರಿ ಡಾ.ಶಂಕರಗೌಡ ಪಾಟೀಲ, ರಾಯಚೂರು ಮಹಾನಗರ ಪಾಲಿಕೆಯ ಸದಸ್ಯ ಕಾರ್ಯದರ್ಶಿ ಕೃಷ್ಣ ಶಾವಂತಗೇರಾ, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕ ವೀರೇಶ ನಾಯಕ, ಸಾರ್ವಜನಿಕ ಶಿಕ್ಷಣ ಇಲಾಖೆಯ ಉಪ ನಿರ್ದೇಶಕ ಮಲ್ಲಿಕಾರ್ಜುನ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿ ಸುನೀತಾ, ಯೋಗ ಶಿಕ್ಷಕ ತಿಮ್ಮಪ್ಪ ವಡ್ಡೆಪಲ್ಲಿ, ಯೋಗ ನ್ಯಾಚೋರೋಪತಿ ವೈದ್ಯಾಧಿಕಾರಿ ಡಾ.ಪೂಜಾ ಸೇರಿದಂತೆ ವಿವಿಧ ಸಂಘ, ಸಂಸ್ಥೆಯ ಮುಖಂಡರು, ವಿದ್ಯಾರ್ಥಿಗಳು, ಸಾರ್ವಜನಿಕರು ಇದ್ದರು.

# ಕಲಾವಿದರನ್ನು ಗುರುತಿಸುವುದು ಬಹಳ ವಿರಳ-ಬಸವರಾಜ್ ಹೂಗಾರ

ಫಾತಿಮಾ ಹುಸೇನ್ ಮಾತನಾಡಿ, ಕಲೆ ಸಾಹಿತ್ಯ ಸಂಸ್ಕೃತಿ ಪರಂಪರೆಯನ್ನು ಉಳಿಸಿ ಬೆಳೆಸಬೇಕಾದರೆ ಇಂತಹ ಕಲಾ ವೇದಿಕೆಗಳು ಕಾರ್ಯನಿರ್ವಹಿಸುತ್ತವೆ. ನಮ್ಮ ನಾಡಿನ ಕಲೆಯನ್ನು ಉಳಿಸಿ ಬೆಳೆಸಬೇಕು ಎಂದು ಹೇಳಿದರು. ವೀರೇಂದ್ರ ಪಾಟೀಲ್ ಹರವಿ ಮಾತನಾಡಿ, ಜಿಲ್ಲೆಯಲ್ಲಿ ಕಲಾವಿದರಿಗೆ ಕೊರತೆ ಇಲ್ಲ. ಇಲ್ಲಿ ಸಾಕಷ್ಟು ಜನ ಕಲಾವಿದರಿದ್ದಾರೆ. ಈ ಭಾಗದ ಕಲಾವಿದರ ಬೆಳೆಯಬೇಕಾದರೆ ಪ್ರೋತ್ಸಾಹ ಇಲ್ಲ. ಇಂತಹ ಕಲಾವಿದರನ್ನು ರಾಜ್ಯ ರಾಷ್ಟ್ರ ಅಂತರಾಷ್ಟ್ರೀಯ ಮಟ್ಟದಲ್ಲಿ ಬೆಳೆಯಲು ನಾವೆಲ್ಲರೂ ತನುಮನ ಧನ ದಿಂದ ಪ್ರೋತ್ಸಹಿಸಬೇಕು ಎಂದು ಹೇಳಿದರು.ದಂಡಪ್ಪ ಬಿರಾದಾರ್ ಮಾತನಾಡಿ ಕಲ್ಯಾಣ ಕರ್ನಾಟಕದಲ್ಲಿ ಸಂಗೀತ ನೃತ್ಯ ನಾಟಕ ಬಯಲಾಟ ಕಲಾವಿದರು ಅತಿ ಹೆಚ್ಚು ಕಲಾವಿದರು ಇದ್ದಾರೆ. ಇಂತಹ ಕಲಾವಿದರನ್ನು ಯಾರು ಗುರುತಿಸುವುದಿಲ್ಲ ಸಮಾಜ ಮತ್ತು ರಾಜಕೀಯದವರು ಇಂತಹ ಕಲಾವಿದರನ್ನು ಗುರುತಿಸಬೇಕು ಎಂದರು.ಈ ವೇಳೆ ಪಂಪಾಪತಿ ಹೂಗಾರ, ಬಿ ಹೆಚ್ ಗುಂಡಳ್ಳಿ ಮಾತನಾಡಿದರು, ಈ ಸಂದರ್ಭದಲ್ಲಿ ಗೌರವಾಧ್ಯಕ್ಷ ಉಗ್ರ ನರಸಿಂಹಪ್ಪ ಹೂಗಾರ,ಜಿಲ್ಲಾಧ್ಯಕ್ಷ ಈರಣ್ಣ ಹೂಗಾರ್, ಮಹಾದೇವಪ್ಪ, ಶಾಂತ ಕುಲಕರ್ಣಿ, ಸೈಯದ್ ಮಝುರ್ ಪಾಷಾ ವಕೀಲರು, ಮಲ್ಲಿಕಾರ್ಜುನ್ ಹೂಗಾರ್ ಆಲೂರು, ಕೃಷ್ಣಪ್ಪ, ಭಾಗವಹಿಸಿದ್ದರು.

# ನಗರದ 12 ಕೇಂದ್ರಗಳಲ್ಲಿ ನೀಟ್ ಪರೀಕ್ಷೆ ಪರೀಕ್ಷಾರ್ಥಿಗಳ ತಪಾಸಣೆ

ಘಟನೆಗಳು ನಡೆಯದಂತೆ ಮುನ್ನೆಚ್ಚರಿಕೆ ಕ್ರಮಗಳನ್ನು ಕೈಗೊಳ್ಳಲಾಗಿದೆ. ಪರೀಕ್ಷೆಗೆ ಹಾಜರಾದ ಅಭ್ಯರ್ಥಿಗಳನ್ನು ತಪಾಸಣೆ ನಡೆಸಲಾಯಿತು. ಬಂಗಾರ ಆಭರಣ ಹಾಗೂ ನಿಷೇಧಿತ ವಸ್ತುಗಳ ತಪಾಸಣೆ ನಡೆಸಲಾಯಿತು.ಪರೀಕ್ಷೆಯ ಭದ್ರತೆ ಮತ್ತು ಪಾರದರ್ಶಕತೆಯನ್ನು ಖಚಿತಪಡಿಸಿಕೊಳ್ಳುವ ಉದ್ದೇಶದಿಂದ ಎಲ್ಲಾ ಪರೀಕ್ಷಾ ಕೇಂದ್ರಗಳಲ್ಲಿ ಸಿಸಿಟಿವಿ ಕ್ಯಾಮೆರಾಗಳ ಮೂಲಕ ನಿರಂತರ ಕಣ್ಗಾವಲು ವ್ಯವಸ್ಥೆ ಮಾಡಲಾಗಿದೆ. ಜೊತೆಗೆ, ಎಲೆಕ್ಟ್ರಾನಿಕ್ ಸಾಧನಗಳ ದುರುಪಯೋಗ ಹಾಗೂ ಅಕ್ರಮ ಚಟುವಟಿಕೆಗಳನ್ನು ತಡೆಗಟ್ಟಲು ಜಾಮರ್‌ಗಳನ್ನು ಅಳವಡಿಸಲಾಗಿದೆ. ಪರೀಕ್ಷಾ ಕೇಂದ್ರಗಳ ಸುತ್ತಮುತ್ತ ಹೆಚ್ಚುವರಿ ಪೊಲೀಸ್ ಸಿಬ್ಬಂದಿಯನ್ನು ನಿಯೋಜಿಸಲಾಗಿದ್ದು, ಕಾನೂನು ಸುವ್ಯವಸ್ಥೆ ಕಾಪಾಡಲು ವಿಶೇಷ ಗಮನ ನೀಡಲಾಗಿದೆ.ಅಭ್ಯರ್ಥಿಗಳ ಅನುಕೂಲಕ್ಕಾಗಿ ಸಾರಿಗೆ ವ್ಯವಸ್ಥೆ, ತುರ್ತು ವೈದ್ಯಕೀಯ ನೆರವು ಹಾಗೂ ಸಂಚಾರ ನಿರ್ವಹಣೆಗೆ ಸಂಬಂಧಿಸಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು ಸಮನ್ವಯದಿಂದ ಕಾರ್ಯನಿರ್ವಹಿಸುತ್ತಿದ್ದಾರೆ. ಪರೀಕ್ಷಾ ಕೇಂದ್ರಗಳ ಪ್ರವೇಶ ದ್ವಾರಗಳಲ್ಲಿ ಕಟ್ಟುನಿಟ್ಟಿನ ತಪಾಸಣೆ ನಡೆಸಲಾಗುತ್ತಿದ್ದು, ರಾಷ್ಟ್ರೀಯ ಪರೀಕ್ಷಾ ಸಂಸ್ಥೆ (ಎನ್‌ಟಿಎ) ಹೊರಡಿಸಿರುವ ಮಾರ್ಗಸೂಚಿಗಳನ್ನು ಕಟ್ಟುನಿಟ್ಟಾಗಿ ಪಾಲಿಸಲು ಸೂಚಿಸಲಾಗಿದೆ.ಭಾರತದ ಅತಿದೊಡ್ಡ ವೈದ್ಯಕೀಯ ಪ್ರವೇಶ ಪರೀಕ್ಷೆಗಳಲ್ಲಿ ಒಂದಾಗಿರುವ ನೀಟ್ ಪರೀಕ್ಷೆಯನ್ನು ಯಾವುದೇ ಲೋಪದೋಷಗಳಿಲ್ಲದೆ ಯಶಸ್ವಿಯಾಗಿ ನಡೆಸಲು ಜಿಲ್ಲಾಡಳಿತ, ಶಿಕ್ಷಣ ಇಲಾಖೆ, ಪೊಲೀಸ್ ಇಲಾಖೆ ಹಾಗೂ ಆರೋಗ್ಯ ಇಲಾಖೆ ಅಧಿಕಾರಿಗಳು ಸಮನ್ವಯದೊಂದಿಗೆ ಸಕಲ ಸಿದ್ಧತೆಗಳನ್ನು ಪೂರ್ಣಗೊಳಿಸಿದ್ದಾರೆ. ಪರೀಕ್ಷೆ ನ್ಯಾಯಯುತ ಹಾಗೂ ಪಾರದರ್ಶಕವಾಗಿ ನಡೆಯುವ ವಿಶ್ವಾಸವನ್ನು ಅಧಿಕಾರಿಗಳು ವ್ಯಕ್ತಪಡಿಸಿದ್ದಾರೆ.

# ಹತ್ತರಗಿ ಟೋಲ್ ನಾಕಾದಲ್ಲಿ ಎಂಇಎಸ್ ಕಾರ್ಯಕರ್ತರಿಗೆ ಪೊಲೀಸರ ತಡೆ

■ ಕನ್ನಡ ಮಾತೃ ಭೂಮಿ ವಾರ್ತೆ

**ಬೆಳಗಾವಿ,**ಕೇಂದ್ರ ಗೃಹ ಸಚಿವ ಅಮಿತ್ ಶಾ ಅವರನ್ನು ಭೇಟಿಯಾಗಿ ಗಡಿಭಾಗದ ಮರಾಠಿ ಭಾಷಿಕರ ಸಮಸ್ಯೆಗಳನ್ನು ಮನವರಿಕೆ ಮಾಡಿ ಕೊಡಲು ಕೊಲ್ಲಾಪುರಕ್ಕೆ ತೆರಳುತ್ತಿದ್ದ ಎಂಇಎಸ್ ನಾಯಕರು ಹಾಗೂ ಕಾರ್ಯಕರ್ತರನ್ನು ಶನಿವಾರ ಹತ್ತರಗಿ ಟೋಲ್ ನಾಕಾದಲ್ಲಿ ಪೊಲೀಸರು ತಡೆಹಿಡಿದರು.



ಬೆಳಗಾವಿ ಸೇರಿದಂತೆ ಗಡಿ ಪ್ರದೇಶಗಳ ಮರಾಠಿ ಭಾಷಿಕರಿಗೆ ಅನ್ಯಾಯವಾಗುತ್ತಿದ್ದು, ಅವರ ಹಕ್ಕುಗಳನ್ನು ಕರ್ನಾಟಕ ಸರ್ಕಾರ ನಿರಂತರವಾಗಿ ನಿರ್ಲಕ್ಷಿಸುತ್ತಿದೆ ಎಂದು ಆರೋಪಿಸಿ ಎಂಇಎಸ್ ಮುಖಂಡರು ಅಮಿತ್ ಶಾ ಅವರಿಗೆ ಮನವಿ ಸಲ್ಲಿಸಲು ಮುಂದಾಗಿದ್ದರು.ಆದರೆ, ಶಾಂತಿ ಮತ್ತು ಕಾನೂನು ಸುವ್ಯವಸ್ಥೆ ಕಾಪಾಡುವ ಉದ್ದೇಶದಿಂದ ಪರಿಸ್ಥಿತಿಯನ್ನು ಅವಲೋಕಿಸಿದ ಪೊಲೀಸರು ಕಾರ್ಯಕರ್ತರನ್ನು ಮುಂದಕ್ಕೆ ತೆರಳಲು ಅವಕಾಶ ನೀಡಲಿಲ್ಲ.ಕೇಂದ್ರ ಗೃಹ ಸಚಿವ ಅಮಿತ್ ಶಾ ಅವರು ಶನಿವಾರ ಮಹಾರಾಷ್ಟ್ರದ ಕೊಲ್ಲಾಪುರಕ್ಕೆ ಭೇಟಿ ನೀಡಿರುವ ಹಿನ್ನೆಲೆಯಲ್ಲಿ ಎಂಇಎಸ್ ಕಾರ್ಯಕರ್ತರು ಅವರನ್ನು ಭೇಟಿಯಾಗಲು ಪ್ರಯತ್ನಿಸಿದ್ದರು.

# ಸರ್ಕಾರಿ ಶಾಲಾ ಮಕ್ಕಳಿಗೆ ಇನ್ನರ್ ವೀಲ್ ಆಫ್ ಬಳ್ಳಾರಿ ಟ್ರಸ್ಟ್‌ವತಿಯಿಂದ ಊಟದ ತಟ್ಟೆಗಳ ವಿತರಣೆ

■ ಕನ್ನಡ ಮಾತೃ ಭೂಮಿ ವಾರ್ತೆ

**ಬಳ್ಳಾರಿ,**ನಗರದ 35ನೇ ವಾರ್ಡಿನ ಇಂದಿರಾನಗರದಲ್ಲಿರುವ ಡಾ. ಬಿ.ಆರ್. ಅಂಬೇಡ್ಕರ್ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯ ವಿದ್ಯಾರ್ಥಿಗಳಿಗೆ ಇನ್ನರ್ ವೀಲ್ ಕ್ಲಬ್ ಆಫ್ ಬಳ್ಳಾರಿ ವತಿಯಿಂದ ಸುಮಾರು 250 ಊಟದ ತಟ್ಟೆಗಳನ್ನು ವಿತರಿಸಲಾಯಿತು. ವಾರ್ಡ್ ಸದಸ್ಯ ಶ್ರೀನಿವಾಸುಲು ಮಿಂಚು ಅವರ ನೇತೃತ್ವದಲ್ಲಿ ನಡೆದ ಈ ಕಾರ್ಯಕ್ರಮದಲ್ಲಿ ವಿದ್ಯಾರ್ಥಿಗಳ ಮಧ್ಯಾಹ್ನದ ಊಟದ ವ್ಯವಸ್ಥೆಗೆ ನೆರವಾಗುವ ಉದ್ದೇಶದಿಂದ ತಟ್ಟೆಗಳನ್ನು ವಿತರಿಸಲಾಯಿತು. ಈ ಸಂದರ್ಭದಲ್ಲಿ ಮಾತನಾಡಿದ ಗಣ್ಯರು, ಸರ್ಕಾರಿ ಶಾಲೆಗಳ ಅಭಿವೃದ್ಧಿಗೆ ಹಾಗೂ ಮಕ್ಕಳ ಮೂಲಭೂತ




ಅಗತ್ಯಗಳ ಪೂರೈಕೆಗೆ ಸಮಾಜದ ವಿವಿಧ ಸಂಘ-ಸಂಸ್ಥೆಗಳು ಕೈಜೋಡಿಸುವುದು ಶ್ಲಾಘನೀಯ ಕಾರ್ಯ ಎಂದು ಅಭಿಪ್ರಾಯಪಟ್ಟರು.

ಈ ಕಾರ್ಯಕ್ರಮದಲ್ಲಿ ಇನ್ನರ್ ವೀಲ್ ಕ್ಲಬ್ ಆಫ್ ಬಳ್ಳಾರಿಯ ಸಂಸ್ಥಾಪಕ ಅಧ್ಯಕ್ಷೆ ಅಲ್ಲಂ ರಚನಾ, ನಾಮ ಸುಧಾ, ಅಶ್ವಿನಿ ಮುರಾರಿ, ರೂಪ ನಾಗಳ್ಳಿ ಸೇರಿದಂತೆ ಕ್ಲಬ್‌ನ ಸದಸ್ಯರು ಭಾಗವಹಿಸಿದ್ದರು ಹಾಗೂ ಶಾಲೆಯ ಮುಖ್ಯ ಶಿಕ್ಷಕರಾದ ಹೊನ್ನೂರ್ ಬಿ. ಶಿಕ್ಷಕರಾದ ಎಂ. ಶಾಂತಕುಮಾರಿ, ಸಿದ್ದಪ್ಪ, ಗೋನಾಲ್, ಮಲ್ಲಿಕಾ ಬೇಗಂ, ಕೆ. ಕಲ್ಪನಾ, ಅನುಪಮ, ನೀಲಾವತಿ, ರಾಜೇಶ್ವರಿ, ರೇಣುಕಾ ಹಾಗೂ ಸುವರ್ಣ ಉಪಸ್ಥಿತರಿದ್ದು, ವಿದ್ಯಾರ್ಥಿಗಳ ಪರವಾಗಿ ದಾನಿಗಳ ಸೇವಾ ಮನೋಭಾವವನ್ನು ಅಭಿನಂದಿಸಿದರು.

# ಬಿ. ನಾಗೇಂದ್ರ ಸಚಿವರಾಗಲೆಂದು ದರ್ಗಾದಲ್ಲಿ ವಿಶೇಷ ಪ್ರಾರ್ಥನೆ

■ ಕನ್ನಡ ಮಾತೃ ಭೂಮಿ ವಾರ್ತೆ

**ಬಳ್ಳಾರಿ,** ಬಳ್ಳಾರಿ ಗ್ರಾಮಾಂತರ ಕ್ಷೇತ್ರದ ಶಾಸಕ ಬಿ. ನಾಗೇಂದ್ರ ಅವರು ರಾಜ್ಯ ಸಚಿವ ಸಂಪುಟದಲ್ಲಿ ಸ್ಥಾನ ಪಡೆಯಲೆಂದು ಕಾಂಗ್ರೆಸ್ ಮುಖಂಡರು ಹಾಗೂ ಕಾರ್ಯಕರ್ತರು ವಿಶೇಷ ಪ್ರಾರ್ಥನೆ ಸಲ್ಲಿಸಿದರು.

ಬಳ್ಳಾರಿ ತಾಲೂಕಿನ ಹೊನ್ನಳ್ಳಿ ಗ್ರಾಮದಲ್ಲಿರುವ ಹಜರತ್ ದಿವಾನ ಪೀರ್ ದರ್ಗಾಕ್ಕೆ ಭೇಟಿ ನೀಡಿದ ಕಾಂಗ್ರೆಸ್ ಮುಖಂಡರು, ದರ್ಗಾದಲ್ಲಿ ಚಾದರ್ ಹೊದಿಸಿ ಪ್ರಾರ್ಥನೆ ಸಲ್ಲಿಸಿದರು. ಬಿ. ನಾಗೇಂದ್ರ ಅವರಿಗೆ ಸಚಿವ ಸ್ಥಾನ ದೊರೆಯುವುದರೊಂದಿಗೆ ಜಿಲ್ಲೆಯ ಅಭಿವೃದ್ಧಿಗೆ ಮತ್ತಷ್ಟು ವೇಗ ಸಿಗಲಿ ಎಂದು ಅವರು ಬೇಡಿಕೊಂಡರು.ರಾಜ್ಯದಲ್ಲಿ ಸಚಿವ ಸಂಪುಟ ವಿಸ್ತರಣೆಯ ಕುರಿತು ಚರ್ಚೆಗಳು ನಡೆಯುತ್ತಿರುವ ಹಿನ್ನೆಲೆಯಲ್ಲಿ ಕಾಂಗ್ರೆಸ್ ಕಾರ್ಯಕರ್ತರ ಈ ನಡೆ ರಾಜಕೀಯ ವಲಯದಲ್ಲಿ ಗಮನ ಸೆಳೆದಿದೆ. ಬಿ. ನಾಗೇಂದ್ರ ಅವರಿಗೆ ಸಚಿವ ಸ್ಥಾನ ದೊರೆಯುವ ನಿರೀಕ್ಷೆಯಲ್ಲಿ ಅವರ ಬೆಂಬಲಿಗರು ವಿವಿಧ ಧಾರ್ಮಿಕ ಕೇಂದ್ರಗಳಲ್ಲಿ ವಿಶೇಷ ಪೂಜೆ ಹಾಗೂ ಪ್ರಾರ್ಥನೆಗಳನ್ನು ನಡೆಸುತ್ತಿರುವುದು ಕಂಡುಬಂದಿದೆ.ಈ ಸಂದರ್ಭದಲ್ಲಿ ಕಾಂಗ್ರೆಸ್‌ನ ಹಲವು ಮುಖಂಡರು, ಕಾರ್ಯಕರ್ತರು ಹಾಗೂ ನಾಗೇಂದ್ರ ಅವರ ಬೆಂಬಲಿಗರು ಉಪಸ್ಥಿತರಿದ್ದರು.



# ಚಾಣಕ್ಯ ಕುದುರೆ ವ್ಯಾಪಾರ ಮಾಡ್ತಿರಲಿಲ್ಲ: ಡಿಕೆಶಿ ಯಾವೂರಿಗೆ ಚಾಣಾಕ್ಷ? ಸಿಎಂ ವಿರುದ್ಧ ಆರ್. ಅಶೋಕ್ ವಾಗ್ದಾಳಿ

**ಬೆಳಗಾವಿ,ಜೂ.21-**ಚಾಣಕ್ಯ ಎಂದೂ ಕುದುರೆ ವ್ಯಾಪಾರ ಮಾಡುತ್ತಿರಲಿಲ್ಲ. ಈಗ ಕುದುರೆ ವ್ಯಾಪಾರ ಮಾಡುವ ಡಿಕೆಶಿ ಚಾಣಕ್ಯ ಆಗಲು ಹೇಗೆ ಸಾಧ್ಯ ಎಂದು ವಿಪಕ್ಷ ನಾಯಕ ಆರ್. ಅಶೋಕ್ ಲೇವಡಿ ಮಾಡಿದರು.

ವಿಧಾನ ಪರಿಷತ್ ಚುನಾವಣೆ ಬಳಿಕ ಸಿಎಂ ಡಿಕೆಶಿ ತಂತ್ರ ಚಾಣಕ್ಯ ತಂತ್ರ ಎಂದು ಬಣ್ಣಿಸುತ್ತಿರುವ ವಿಚಾರಕ್ಕೆ ಬೆಳಗಾವಿಯಲ್ಲಿ ಪ್ರತಿಕ್ರಿಯಿಸಿದ ಅವರು, ಡಿಕೆಶಿ ಚಾಣಾಕ್ಷ ಯಾವೂರಿಗೆ..? ನಾವು 17 ಜನ ಶಾಸಕರನ್ನು ಕರೆದುಕೊಂಡು ಹೋದಾಗ ಈ ಚಾಣಕ್ಯ ಎಲ್ಲಿದ್ದ? ಡಿಕೆಶಿ ಆಗ ಮಂತ್ರಿ ಇದ್ದರು. ಆಗ ನಮ್ಮ ಜೊತೆಗೆ ಅವರ ಶಾಸಕರು ಬಂದಿದ್ದರು ಎಂದು ತಿರುಗೇಟು ಕೊಟ್ಟರು.

2019ರಲ್ಲಿ ಕಾಂಗ್ರೆಸ್ ಶಾಸಕರು ಮುಂಬೈಗೆ ಹೋದಾಗ ಇದೇ ಕಾಂಗ್ರೆಸ್ ನಾಯಕರು ಕುದುರೆ ವ್ಯಾಪಾರ ಅಂದಿದ್ದರು. ನಮ್ಮ ಜೊತೆಗೆ ಕಾಂಗ್ರೆಸ್ ಶಾಸಕರು ಬಂದಾಗ ಆಪರೇಷನ್ ಕಮಲ ಅಂತಾ ಹೇಳಿದ್ದೀರಿ. ನಮಗೆ ಬುದ್ಧಿ ಹೇಳ್ತಿರಾ? ಈಗ ನೀವು




ಮಾಡಿದ್ದೇನು? ನಾಚಿಕೆ ಆಗಲ್ಲವಾ..? ಕಾಂಗ್ರೆಸ್‌ಗೆ ಇದು ತಿರುಗುಬಾಣ ಆಗುತ್ತದೆ. ನಾವೇ ಉತ್ತರ ಕೊಡುತ್ತೇವೆ ಎಂದು ಆರ್. ಅಶೋಕ್ ಕೈ ನಾಯಕರಿಗೆ ಎಚ್ಚರಿಕೆ ಕೊಟ್ಟರು.

ಪರಿಷತ್ ಚುನಾವಣೆಯಲ್ಲಿ ಪಕ್ಷಕ್ಕೆ ದ್ರೋಹ, ವಂಚನೆ ಬಗೆದಿರುವುದು ನಿಜ. ಯಾವ ಶಾಸಕ ದ್ರೋಹ ಮಾಡಿದ್ದಾರೆ ಗೊತ್ತಿಲ್ಲ. ಆ ಕಾರಣಕ್ಕೆ ಅಧ್ಯಕ್ಷರ ಜೊತೆಗೆ ಮಾತನಾಡುತ್ತೇವೆ. ಈ ವಿಚಾರವಾಗಿ ಚರ್ಚಿಸಲು ನಮ್ಮ ಹೈಕಮಾಂಡ್ ನಾಯಕರ ಭೇಟಿಗೆ ಸಮಯ ಕೇಳಿದ್ದೇವೆ. ಚುನಾವಣೆಯಲ್ಲಿ ಕಾಂಗ್ರೆಸ್ ಕುದುರೆ ವ್ಯಾಪಾರ, ಹಣದ ಹೊಳೆ ಹರಿಸಿರುವುದನ್ನು ತಿಳಿಸುತ್ತೇವೆ. ಪರಿಷತ್ ಚುನಾವಣೆಯಲ್ಲಿ ಈ ರೀತಿ ಮಾಡಿರುವುದು ಕಾಂಗ್ರೆಸ್‌ಗೆ ಒಳ್ಳೆಯದಲ್ಲ ಎಂದು ಆರ್. ಅಶೋಕ್ ಹರಿಹಾಯ್ದರು.

ವಿಧಾನಪರಿಷತ್ ಚುನಾವಣೆಯಲ್ಲಿ ಅಡ್ಡ ಮತದಾನದ ಹಿನ್ನೆಲೆ ಆಣೆ ಪ್ರಮಾಣ ಮಾಡಿಸಲು ಬಿಜೆಪಿ ಶಾಸಕರನ್ನು ಧರ್ಮಸ್ಥಳಕ್ಕೆ ಕರೆದುಕೊಂಡು ಹೋಗುವ ಸಂಬಂಧ ವಿಜಯೇಂದ್ರ ನನಗೆ ಫೋನ್ ಮಾಡಿದ್ದರು. ನಾಳೆ ಅವರನ್ನು ಭೇಟಿ ಆಗಿ, ಮಾತುಕತೆ ನಡೆಸುತ್ತೇನೆ. ವಿಜಯೇಂದ್ರ ಮತ್ತು ಹಿರಿಯರ ಜೊತೆಗೆ ಚರ್ಚಿಸಿದ ಬಳಿಕ ಸ್ಪಷ್ಟವಾದ ತೀರ್ಮಾನ ಮಾಡುತ್ತೇವೆ ಎಂದರು.

ಅಡ್ಡಮತದಾನ ಬಗ್ಗೆ ಪಕ್ಷದ ವೇದಿಕೆಯಲ್ಲಿ ಚರ್ಚೆ ಮಾಡಿ, ತಪ್ಪಿತಸ್ಥರಿಗೆ ಬುದ್ಧಿ ಕಲಿಸುತ್ತೇವೆ. ಕೇಂದ್ರ ನಾಯಕರ ಜೊತೆಗೆ ಗಂಭೀರವಾಗಿ ಚರ್ಚೆ ಮಾಡಿ ಕ್ರಮಕ್ಕೆ ಆಗ್ರಹಿಸುತ್ತೇವೆ. ಅಡ್ಡ ಮತದಾನ ಮಾಡಿದವರು ಜನ್ಮದಲ್ಲಿ ಚುನಾವಣೆಗೆ ನಿಲ್ಲಬಾರದು, ಹಾಗೆ ಮಾಡುತ್ತೇವೆ ಎಂದು ಆರ್. ಅಶೋಕ್ ಖಡಕ್ ಎಚ್ಚರಿಕೆ ರವಾನಿಸಿದರು.

# ನಾನು ರಾಜ್ಯಾಧ್ಯಕ್ಷ ಅಂತಾ ರಾಷ್ಟ್ರೀಯ ನಾಯಕರು ಎಲ್ಲೂ ಹೇಳಿಲ್ಲ: ಕೇಂದ್ರ ಸಚಿವ ಪ್ರಲ್ಹಾದ್ ಜೋಶಿ

**ಬೆಳಗಾವಿ,ಜೂ.21-**ರಾಷ್ಟ್ರೀಯ ನಾಯಕರು ನನ್ನನ್ನು ರಾಜ್ಯಾಧ್ಯಕ್ಷ ಅಂತಾ ಎಲ್ಲಿಯೂ ಹೇಳಿಲ್ಲ. ನಾನೂ ಹೇಳಿಲ್ಲ ಎಂದು ಕೇಂದ್ರ ಸಚಿವ ಪ್ರಲ್ಹಾದ್ ಜೋಶಿ ತಿಳಿಸಿದರು.ನಗರದಲ್ಲಿಂದು ಮಾಧ್ಯಮಗಳ ಜೊತೆಗೆ ಮಾತನಾಡಿದ ಅವರು, ಮಾಧ್ಯಮಗಳಲ್ಲಿ ಈ ರೀತಿ ಚರ್ಚೆ ಆಗುತ್ತಿದೆ. ಆ ರೀತಿ ಪ್ರಸ್ತಾವನೆಯೂ ಇಲ್ಲ. ಎಲ್ಲಿಯೂ ಚರ್ಚೆನೂ ಆಗಿಲ್ಲ ಎಂದರು.

ಪಕ್ಷದಲ್ಲಿ ನಾಯಕತ್ವದ ಕೊರತೆಯಿದೆಯೇ ಎಂಬ ಪ್ರಶ್ನೆಗೆ ಉತ್ತರಿಸಿದ ಅವರು, ಯಾವುದೇ ಒಂದು ಘಟನೆಯ ಆಧಾರದ ಮೇಲೆ ನಾಯಕತ್ವ ತೀರ್ಮಾನಿಸಲು ಸಾಧ್ಯವಿಲ್ಲ, ಬಿಜೆಪಿ ಎಲ್ಲಾ ಏಳು-ಬೀಳುಗಳನ್ನು ಎದುರಿಸಿ ಗಟ್ಟಿಯಾಗಿ ನಿಂತಿದೆ. ಅಡ್ಡಮತದಾನವನ್ನು ಬಹಳ ಗಂಭೀರವಾಗಿ ತೆಗೆದುಕೊಂಡಿದ್ದೇವೆ. 2028ಕ್ಕೆ ಬಿಜೆಪಿ ಅಧಿಕಾರಕ್ಕೆ ತರುವ ನಿಟ್ಟಿನಲ್ಲಿ ಕೆಲಸ ಮಾಡುತ್ತಿದ್ದೇವೆ ಎಂದು ಸಮರ್ಥಿಸಿಕೊಂಡರು.ಈ ಬಾರಿ ದೇಶದಲ್ಲಿ ಶೇ.40ರಷ್ಟು ಮಳೆ ಕೊರತೆಯಾಗುವ ಸಾಧ್ಯತೆಯಿದೆ. 'ಸೂಪರ್ ಎಲ್ ನಿನೋ' ದೊಡ್ಡ ಪ್ರಮಾಣದಲ್ಲಿ ಎಫೆಕ್ಟ್ ನೀಡಲಿದೆ. ಕೇಂದ್ರ ಸರ್ಕಾರದಿಂದ ಅಗತ್ಯ ಆಹಾರ ಪೂರೈಕೆ ಹಾಗೂ ಸಂಗ್ರಹಣೆಗೆ ಸಿದ್ಧತೆ ಮಾಡಿಕೊಂಡಿದ್ದೇವೆ. ಆದರೆ, ರಾಜ್ಯದ ಮುಖ್ಯಮಂತ್ರಿಗಳಿಗೆ ಆಡಳಿತದ ಕಡೆ ಗಮನವಿಲ್ಲ. ಚುನಾವಣೆ, ಪದಗ್ರಹಣ ಎಲ್ಲವೂ ಮುಗಿದಿದ್ದರೂ ಮಳೆ ಅಭಾವದ ಪರಿಹಾರ ಕ್ರಮಗಳ ಬಗ್ಗೆ ನಿರ್ಲಕ್ಷ್ಯ ವಹಿಸಲಾಗಿದೆ. ಸಿಎಂ ಗಮನ ಕೇವಲ ದೊಡ್ಡ ಕಾರ್ಯಕ್ರಮಗಳು ಮತ್ತು ಭ್ರಷ್ಟಾಚಾರದ ದುಡ್ಡು ಖರ್ಚು ಮಾಡುವುದರಲ್ಲಿದೆ ಎಂದು ಜೋಶಿ ಆರೋಪಿಸಿದರು.

ಈಗಾಗಲೇ ರಾಜ್ಯದಲ್ಲಿ ನೀರಿನ ಸಮಸ್ಯೆ ಉದ್ಭವಿಸಿದೆ. ಇಂಥ ಪರಿಸ್ಥಿತಿಯಲ್ಲಿ ಎಚ್ಚೆತ್ತುಕೊಳ್ಳದೇ ಇರುವುದು ಸರಿಯಲ್ಲ. ನಿಮ್ಮ ಸಂಪುಟ ವಿಸ್ತರಣೆ ಯಾವಾಗ ಮಾಡುತ್ತಿರೋ ಗೊತ್ತಿಲ್ಲ. ಆದರೆ, ಕಂದಾಯ ಸಚಿವರಿಗೆ ಜವಾಬ್ದಾರಿ ಕೊಡಿ, ಅಧಿಕಾರಿಗಳಿಗೆ ಸೂಚನೆ ಕೊಟ್ಟು ಎಲ್ಲ ರೀತಿಯ ಸಿದ್ಧತೆ ಮಾಡಿಕೊಳ್ಳುವಂತೆ ಅವರು ಒತ್ತಾಯಿಸಿದರು.ಬೆಳಗಾವಿ ಸುವರ್ಣ ವಿಧಾನಸೌಧ ಮುಂದೆ ಅಂತಾರಾಷ್ಟ್ರೀಯ ಯೋಗ್ ದಿನಾಚರಣೆ: ಯೋಗಾಸನ ವೈದ್ಯಕೀಯ ಕ್ಷೇತ್ರದಲ್ಲಿ ಮಹತ್ವದ ಪಾತ್ರ ಹೊಂದಿದ್ದು, ಪ್ರತಿನಿತ್ಯ ಯೋಗಾಸನ ಮಾಡುವುದರಿಂದ ನಮ್ಮ ಶರೀರದಲ್ಲಿನ ರೋಗ ರುಜಿನಗಳನ್ನು ದೂರ ಮಾಡಿಕೊಳ್ಳುವುದರ ಜೊತೆಗೆ ಮನಸ್ಸನ್ನು ಸಮಚಿತ್ತದಿಂದ ಇಟ್ಟುಕೊಳ್ಳಬಹುದಾಗಿದೆ ಎಂದು ಸಚಿವ ಪ್ರಲ್ಹಾದ್ ಜೋಶಿ ಹೇಳಿದರು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಮಹಾನಗರ ಪಾಲಿಕೆ ಬೆಳಗಾವಿ ಹಾಗೂ ಜಿಲ್ಲಾ ಆಯುಷ್ ಇಲಾಖೆ ಸಹಯೋಗದಲ್ಲಿ ಇಂದು ಸುವರ್ಣ ವಿಧಾನಸೌಧ ಮುಂದೆ ಜರುಗಿದ 12ನೇ ಅಂತಾರಾಷ್ಟ್ರೀಯ ಯೋಗ ದಿನಾಚರಣೆ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಅವರು ಮಾತನಾಡಿದರು.

ಬದಲಾಗುತ್ತಿರುವ ಇಂದಿನ್ ಆಧುನಿಕ ಜೀವನ ಶೈಲಿಯಲ್ಲಿ ಉತ್ತಮ್ ಆರೋಗ್ಯ ಕಾಪಾಡಿಕೊಳ್ಳುವಲ್ಲಿ ಭಾರತದ ಪ್ರಾಚೀನ ಪದ್ಧತಿ ಆಗಿರುವ ಯೋಗಾಸನ ಮಾಡುವುದು ಅತೀ ಅವಶ್ಯಕವಾಗಿದೆ. ಸ್ಪರ್ಧಾತ್ಮಕ ಜೀವನ ಶೈಲಿಯಲ್ಲಿ ನಮ್ಮ ನಿತ್ಯದ ಕೆಲಸದಲ್ಲಿ ನೈಪುಣ್ಯತೆ ಸಾಧಿಸಲು ಯೋಗಾಸನ ಅಗತ್ಯವಾಗಿದೆ. ಯೋಗಾಸನ ಮಾಡಲು ಸರಿಯಾದ ಆಸನದ ಜ್ಞಾನ ಹೊಂದುವುದು ಕೂಡಾ ಅಷ್ಟೇ ಪ್ರಮುಖವಾಗಿದೆ ಎಂದರು.

ಐದು ಸಾವಿರ ವರ್ಷಗಳ ಇತಿಹಾಸ ಹೊಂದಿರುವ ಯೋಗಾಸನವನ್ನು 140ಕ್ಕೂ ಹೆಚ್ಚಿನ ದೇಶಗಳು ಒಪ್ಪಿಕೊಂಡಿವೆ. ದಿನದ 24 ಗಂಟೆಗಳಲ್ಲಿ ಪ್ರಪಂಚದ ಯಾವುದಾದರೂ ಒಂದು ಪ್ರದೇಶದಲ್ಲಿ ಯೋಗಾಭ್ಯಾಸ ಜರುಗುತ್ತಿರುವುದರಿಂದ ಯೋಗಾಸನಕ್ಕೆ ಗೋಲ್ಡನ್ ರಿಂಗ್ ಎಂದು ಕರೆಯಲಾಗುತ್ತದೆ. ಯೋಗಾಸನ ಮಾಡಿದಷ್ಟು ದೇಹ ಹಾಗೂ ಮನಸ್ಸು ಹಗುರ ಆಗಿ, ನಮ್ಮ ನಿಯಂತ್ರಣಕ್ಕೆ ಬರುತ್ತವೆ. ಹೀಗಾಗಿ, ಪ್ರತಿಯೊಬ್ಬರು ಯೋಗಾಭ್ಯಾಸ ಮಾಡುವುದನ್ನು ತಮ್ಮ ದಿನಚರಿಯಲ್ಲಿ ಅಳವಡಿಸಿಕೊಂಡು ಸದೃಢ ಆರೋಗ್ಯ, ಸದೃಢ ರಾಷ್ಟ್ರ ನಿರ್ಮಾಣಕ್ಕೆ ಮುಂದಾಗುವಂತೆ ಸಚಿವರು ಕಿವಿಮಾತು ಹೇಳಿದರು.

# ಇಸಿಸಿಇ ಅತಿಥಿ ಶಿಕ್ಷಕರು, ಆಯಾಗಳ ನೇಮಕಕ್ಕೆ ಆಗ್ರಹ

ಈಗಾಗಲೇ ಲಿಂಗಸುಗೂರು ತಾಲೂಕಿನಲ್ಲಿ ಕ್ಷೇತ್ರ ಶಿಕ್ಷಣಾಧಿಕಾರಿಗಳು ಪೂರ್ವ ಪ್ರಾಥಮಿಕ (ಇಸಿಸಿಇ) ಅತಿಥಿ ಶಿಕ್ಷಕರು ಮತ್ತು ಆಯಾಗಳ ನೇಮಕಕ್ಕೆ ಆದೇಶ ಹೊರಡಿಸಿದ್ದಾರೆ. ಆದರೆ ರಾಯಚೂರು ತಾಲೂಕಿನಲ್ಲಿ ಇನ್ನೂ ಆದೇಶ ಹೊರಡಿಸದಿರುವುದು ಒಂದೇ ಜಿಲ್ಲೆಯ ಎರಡು ತಾಲೂಕುಗಳಲ್ಲಿ ವ್ಯತ್ಯಾಸ ಕಂಡುಬರುತ್ತಿದೆ ಎಂದು ದೂರಿದರು.ಕಳೆದ ವರ್ಷ ಕಾರ್ಯನಿರ್ವಹಿಸಿದ ಅತಿಥಿ ಶಿಕ್ಷಕರಿಗೆ ಇದುವರೆಗೆ ಗೌರವಧನ ಬಿಡುಗಡೆ ಮಾಡದಿರುವು ದರಿಂದ ಅವರು ಸಂಕಷ್ಟ ಅನುಭವಿಸುತ್ತಿದ್ದಾರೆ. ಹೀಗಾಗಿ ತಕ್ಷಣವೇ ಅತಿಥಿ ಶಿಕ್ಷಕರು ಮತ್ತು ಆಯಾಗಳ ನೇಮಕಾತಿಗೆ ಆದೇಶ ಹೊರಡಿಸುವುದರ ಜೊತೆಗೆ ಕಳೆದ ವರ್ಷದ ಬಾಕಿ ಗೌರವಧನವನ್ನೂ ಬಿಡುಗಡೆ ಮಾಡಬೇಕು ಎಂದು ಒತ್ತಾಯಿಸಿದರು. ಈ ಸಂದರ್ಭದಲ್ಲಿ ಎಐಡಿವೈಓ ಜಿಲ್ಲಾಧ್ಯಕ್ಷ ಚನ್ನಬಸವ ಜಾನೇಕಲ್, ದತ್ತುಸ್ವಾಮಿ ಆತ್ಕೂರ್, ವೀರೇಶ್ ಎಲ್.ಕೆ. ದೊಡ್ಡಿ, ಚೇತನಾ, ರೇಖಾ, ಆಂಜನೇಯ ಸೇರಿದಂತೆ ಹಲವರು ಉಪಸ್ಥಿತರಿದ್ದರು.

# ಬಸ್ ಪಾಸ್ ಬಳಕೆ ಮಾಡಿಕೊಂಡು ಉನ್ನತ ಶಿಕ್ಷಣ ಪಡೆಯಿರಿ- ದದ್ದಲ್ ಬಸನಗೌಡ

ಯೋಜನೆಯನ್ನು ಜಾರಿಗೊಳಿಸಿದ್ದು, ಎಲ್ಲಾ ವಿದ್ಯಾರ್ಥಿಗಳು ಉಚಿತ ಬಸ್ ಯೋಜನೆ ಸದುಪಯೋಗ ಪಡೆದುಕೊಳ್ಳಬೇಕು ಎಂದರು. ಜಿಲ್ಲೆಯಲ್ಲಿರುವ ಗ್ರಾಮೀಣ ಭಾಗದ ವಿದ್ಯಾರ್ಥಿ ಗಳು ಶಿಕ್ಷಣ ಪಡೆದುಕೊಂಡು ಉದ್ಯೋಗವಂತ ರಾಗಿ ಸಮಾಜ ಋಣ ತೀರಿಸುವ ಕೆಲಸ ಮಾಡಬೇಕು ಎಂದು ತಿಳಿಸಿದರು. ಶೈಕ್ಷಣಿಕ ಬದಲಾವಣೆಯಿಂದ ಸಮಾಜದ ಬದಲಾವಣೆಯಾಗಲು ವಿದ್ಯಾರ್ಥಿಗಳು ಮುಂದಾಗಬೇಕು ಎಂದು ತಿಳಿಸಿದರು. ಈ ಸಂದರ್ಭದಲ್ಲಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಅರುಣಾಂಗ್ಸುಗಿರಿ, ಕೆಕೆಆರ್‌ಟಿಸಿ ವಿಭಾಗೀಯ ನಿಯಂತ್ರಣಾಧಿಕಾರಿ ಶ್ರೀಧರರೆಡ್ಡಿ, ಡಿವೈಎಸ್‌ಪಿ ಶಾಂತವೀರ ಸೇರಿದಂತೆ ಅಧಿಕಾರಿಗಳು ವಿದ್ಯಾರ್ಥಿಗಳು ಭಾಗವಹಿಸಿದ್ದರು.

# ಬಿಜೆಪಿಯಿಂದ ಅಂತರಾಷ್ಟ್ರೀಯ ಯೋಗ ದಿನಾಚರಣೆ ಯೋಗದಿಂದ ರೋಗ ದೂರ-ಡಾ.ಶಿವರಾಜ ಪಾಟೀಲ್

ಕಾರ್ಯಕ್ರಮದಲ್ಲಿ ಯೋಗಾಭ್ಯಾಸದ ಮಹತ್ವ, ಆರೋಗ್ಯಕರ ಜೀವನಶೈಲಿ ಹಾಗೂ ಪ್ರತಿಯೊಬ್ಬರೂ ತಮ್ಮ ದೈನಂದಿನ ಜೀವನದಲ್ಲಿ ಯೋಗವನ್ನು ಅಳವಡಿಸಿಕೊಳ್ಳುವ ಅಗತ್ಯತೆಯ ಕುರಿತು ಜಾಗೃತಿ ಮೂಡಿಸಲಾಯಿತು.

ಈ ಸಂದರ್ಭದಲ್ಲಿ ಜಿಲ್ಲಾ ಪ್ರಧಾನ ಕಾರ್ಯದರ್ಶಿ ರವೀಂದ್ರ ಜಾಲ್ದಾರ್, ಸಂತೋಷ್ ರಾಜ್ ಗುರು, ಜಂಬಣ್ಣ ನೀಲಗಲ್, ನಗರ ಮಂಡಲದ ಅಧ್ಯಕ್ಷ ಉಟಕೂರ್ ರಾಘವೇಂದ್ರ, ನಗರ ಪ್ರದಾನ ಕಾರ್ಯದರ್ಶಿ ಪ್ರದೀಪ್ ಸಾನಬಾಲ್, ಮುಖಂಡರಾದ ರಾಜ್ ಕುಮಾರ್, ಅದ್ಯಕ್ಷ ಕಡಗಲ್ ಆಂಜಿನೇಯ್ಯ, ಬಿ. ಗೋವಿಂದ್,ಜಿಲ್ಲಾ ಉಪಾಧ್ಯಕ್ಷ ಜಿ. ಶಂಕರ್ ರೆಡ್ಡಿ, ಬಂಡೇಶ್ ವಲಕಂದಿನ್ನಿ, ಕಡಗೋಲ್ ರಾಮು, ವಿಷ್ಣುವರ್ಧನ್ ರೆಡ್ಡಿ, ರಘುವೀರ ಸಿಂಗ್,ಬಿಜೆಪಿ ಯುವ ಮೋರ್ಚಾದ ಜಿಲ್ಲಾ ಪ್ರಧಾನ ಕಾರ್ಯದರ್ಶಿ ರವಿ ಗೌಡ, ಯುವ ಮೋರ್ಚಾದ ಪಧಾಧಿಕಾರಿಗಳಾದ ಬಂಕ ರಾಕೇಶ್, ವೀರೇಶ್ ತಲ್ವಾರ್, ನರೇಶ್, ಲಿಂಗಾರೆಡ್ಡಿ, ಸಿದ್ದರಾಮ, ದನುಂಜಯ್, ವೆಂಕಟೇಶ್ ಉಪ್ಪಾರ್, ವಿಶ್ವನಾಥ್ ನೆಲ್ಹಲ, ಮಧುಸೂಧನ ರೆಡ್ಡಿ, ರೋಹಿತ್ ಕಡಗೋಲ್,ವಿವಿಧ ಹಂತದ ಪದಾಧಿಕಾರಿಗಳು ಹಾಗೂ ಕಾರ್ಯಕರ್ತರು ಉಪಸ್ಥಿತರಿದ್ದು, ವಿಶ್ವ ಯೋಗ ದಿನಾಚರಣೆ ಕಾರ್ಯಕ್ರಮವನ್ನು ಯಶಸ್ವಿಗೊಳಿಸಿದರು.

OWNER, PUBLISHER, PRINTER BY: SHYAM SUNDER L. PUBLISHED FROM: H: NO: 5-3-6, HANUMAN TALKIES ROAD, OPP VAIKUNTAM TEMPLE, NETAJI NAGAR, RAICHUR-584101, DIST: RAICHUR, KARNATAKA AND PRINTED AT: KANNADA MATHRUBHOOMI PRINTERS, SHOP NO: 5-3-6, HANUMAN TALKIES ROAD, OPP VAIKUNTAM TEMPLE, NETAJI NAGAR, RAICHUR-584101, DIST: RAICHUR, KARNATAKA, EDITOR BY: SHYAM SUNDER L